ಸಂಪುಟ: 14 Volume | ಸಂಚಿಕೆ: 78 Issue | ಪುಟಗಳು 08 Pages | ಭಾನುವಾರ 28 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

**ಬೆಳಗು**
ಧೈರ್ಯ ಅಂದರೆ ಭಯ ಇಲ್ಲದಿರುವುದಲ್ಲ, ಭಯದ ಮೇಲೆ ಜಯ ಸಾಧಿಸುವುದು.
–ನೆಲ್ಸನ್ ಮಂಡೇಲಾ

ಸಂಪಾದಕರು: ರಮೇಶ ರೆಡ್ಡಿ


ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ಇದೇ ಮೊದಲ ಬಾರಿಗೆ ತವರು ಜಿಲ್ಲೆ ಮೈಸೂರಿಗೆ ಅಗಮಿಸಿದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬೃಹತ್ ಸಂಖ್ಯೆಯಲ್ಲಿ ನೆರೆದಿದ್ದ ಅಭಿಮಾನಿಗಳು, ಕಾರ್ಯಕರ್ತರು, ಸ್ಥಳೀಯ ಮುಖಂಡರು ಹಾಗೂ ನಾಯಕರುಗಳು ಸೇಬಿನ ಹಾರ ಹಾಕಿ ಹೂಮಳೆಗೆರೆದು ಸ್ವಾಗತಿಸಿದರು.

## ಗಟ್ಟಿ ಪ್ರಜಾಪ್ರಭುತ್ವ ವ್ಯವಸ್ಥೆಗೆ ಕೈ ಜೋಡಿಸಿ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ಸಂವಿಧಾನದ ಆಸಯದಂತೆ ಗಟ್ಟಿಯಾದ ಪ್ರಜಾಪ್ರಭುತ್ವ ವ್ಯವಸ್ಥೆ ನಿರ್ಮಾಣ ಮಾಡುವುದಕ್ಕೆ ಎಲ್ಲರೂರು ಕೈ ಜೋಡಿಸಬೇಕು ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಹೇಳಿದರು.

ನಗರದ ಬಸವರಾಜ ಕಲ್ಯಾಣ ಮಂಟಪದಲ್ಲಿ ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಶನಿವಾರ ನಡೆದ ಎಸ್.ಐ.ಆರ್. ಕುರಿತು ಜನಜಾಗೃತಿ ಮತ್ತು ತರಬೇತಿ ಹಾಗೂ ಕಾಂಗ್ರೆಸ್ ಕಾರ್ಯಕರ್ತರ ಸಭೆ ಉದ್ಘಾಟಿಸಿ ಮಾತನಾಡಿದರು.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ನಗರದಲ್ಲಿ ವಾರ್ ರೂಮ್ ನಿರ್ಮಿಸಬೇಕು. ಅದರಿಂದಲೇ ಮತ ಪಟ್ಟಿ ಪರಿಷ್ಕರಣೆಯ ಸಂಪೂರ್ಣ ಮಾಹಿತಿ ಪಡೆಯಲು ಸಹಾಯವಾಗುತ್ತದೆ. ನಮ್ಮ ಪಕ್ಷದ ಕಾರ್ಯಕರ್ತರು ಜಾಗೃತರಾಗಿ ಕೆಲಸ ಮಾಡಬೇಕು ಎಂದರು.




ಕಾರ್ಯಕರ್ತೆ ಪಕ್ಷದ ನಿಜವಾದ ಸಂಪತ್ತು. ಕಾರ್ಯಕರ್ತರಿಂದಲೇ ಬಲಿಷ್ಠ ಸಂಘಟನೆ ಹೊಂದಲು ಸಾಧ್ಯವಾಗುತ್ತದೆ. ಈ ಮತ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಚುರುಕಾಗಿ ಉತ್ತಮ ಕೆಲಸ ಮಾಡುತ್ತಾರೆ ಅವರನ್ನು ಗುರುತಿಸಿ, ಒಳ್ಳೆಯ ಅವಕಾಶಗಳನ್ನು ಕಲ್ಪಿಸಿಕೊಡಲಾಗುವುದು ಎಂದು ಭರವಸೆ ನೀಡಿದರು.

## ಪ್ರಿಯಾಂಕ್‌ಗೆ ಜೀವ ಬೆದರಿಕೆ: ಕ್ರಮಕ್ಕೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಜೀವ ಬೆದರಿಕೆ ಹಾಕಿರುವ ಘಟನೆಗಳನ್ನು ಖಂಡಿಸಿ ಡಾ.ಬಿ.ಆರ್. ಅಂಬೇಡ್ಕರ್ ಯೂಥ್ ಬ್ರಿಗೇಡ್ ಜಿಲ್ಲಾಧ್ಯಕ್ಷ ಉದಯ ನಾಯಕ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರ ವಿರುದ್ಧ ಕೆಲ ಸಂಘಟನೆಗಳು ಮಾಡುತ್ತಿರುವ ಆರೋಪಗಳು ಹಾಗೂ ಬೆದರಿಕೆಗಳನ್ನು ಡಾ.ಬಿ.ಆರ್. ಅಂಬೇಡ್ಕರ್ ಯೂಥ್ ಬ್ರಿಗೇಡ್ ತೀವ್ರವಾಗಿ ಖಂಡಿಸಿದೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸಚಿವ ಪ್ರಿಯಾಂಕ್ ಖರ್ಗೆ ಅವರು ಸಾಮಾಜಿಕ ನ್ಯಾಯ ಹಾಗೂ ಜನಪರ ಆಡಳಿತಕ್ಕೆ ಬದ್ಧರಾಗಿದ್ದು, ಅವರ ವಿರುದ್ಧ ನಡೆಯುತ್ತಿರುವ ಅಪಪ್ರಚಾರ ಮತ್ತು ಬೆದರಿಕೆಗಳು ನಮ್ಮ ಸಂಘಟನೆಯಿಂದ ಖಂಡಿಸುತ್ತೇವೆ ಎಂದು ತಿಳಿಸಿದರು. ರಾಜಕೀಯ ಭಿನ್ನಾಭಿಪ್ರಾಯಗಳ ಹೆಸರಿನಲ್ಲಿ ಆರೋಪಗಳು ಮುಂದುವರಿಸುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಆರ್‌ಎಸ್‌ಎಸ್‌ನ ನೋಂದಣಿ ಕುರಿತು ಕೆಲವೊಂದು ಪ್ರಶ್ನೆಗಳನ್ನು ಎತ್ತಿದ್ದಾರೆ. ಆರ್‌ಎಸ್‌ಎಸ್ ಸಂಘಟನೆಯು ಸಂವಿಧಾನಾತ್ಮಕ ಹಾಗೂ ಕಾನೂನುಬದ್ಧ ರೀತಿಯಲ್ಲಿ ನೋಂದಣಿ ಮಾಡಿಕೊಂಡರೆ ಅದರಲ್ಲಿ ತಪ್ಪೇನಿದೆ ಎಂಬುದು ಅವರ ಪ್ರಶ್ನೆಯಾಗಿದೆ. ದೇಶದ ಕಾನೂನುಗಳ ಅಡಿಯಲ್ಲಿ ವಿವಿಧ ಸಂಘ–ಸಂಸ್ಥೆಗಳು ಹಾಗೂ ಸಂಘಟನೆಗಳು ಕಾನೂನುಬದ್ಧವಾಗಿ ನೋಂದಣಿ ಮಾಡಿಕೊಂಡು ಕಾರ್ಯನಿರ್ವಹಿಸುತ್ತಿವೆ. ಅದೇ ರೀತ್ಲಿ ಯಾವುದೇ ಸಂಘಟನೆಯು ಸಂವಿಧಾನಾತ್ಮಕ ಚೌಕಟ್ಟಿನೊಳಗೆ ನೋಂದಣಿ ಮಾಡಿಕೊಂಡು ಕಾರ್ಯನಿರ್ವಹಿಸುವುದು ಪ್ರಜಾಪ್ರಭುತ್ವದ ವ್ಯವಸ್ಥೆಗೆ ಅನುಗುಣವಾದ ಕ್ರಮವಾಗಿದೆ ಎಂದು ತಿಳಿಸಿದರು.

## ರಸ್ತೆ ಅಪಘಾತ ಐವರ ಸಾವು



**ಕೊಪ್ಪಳ:** ಜಿಲ್ಲೆಯ ಕುಕನೂರು ತಾಲೂಕಿನ ಭಾನಾಪೂರ ಸಮೀಪ ರಾಷ್ಟ್ರೀಯ ಹೆದ್ದಾರಿ–63ರಲ್ಲಿ ಶನಿವಾರ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಐವರು ಸ್ಥಳದಲ್ಲೇ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ. ಗಾಯಾಳುಗಳ ಪೈಕಿ ಇಬ್ಬರ ಸ್ಥಿತಿ ಗಂಭೀರವಾಗಿದ್ದು, ಕೊಪ್ಪಳ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮೃತರನ್ನು ಹಾವೇರಿ ಜಿಲ್ಲೆಯ ರಟ್ಟಿಹಳ್ಳಿ ತಾಲೂಕಿನ ಕಬ್ಬಾರ್ ಗ್ರಾಮದ ಕೆಂಚಮ್ಮ ಬಾಳೆಕಾಯಿ (35), ಅಮೃತಾ ಕೋಟ್ಯಾಳ್ (25) ಹಾಗೂ ರಮೇಶ್ ಬಳ್ಳಾರಿ (45) ಪ್ರವೀಣ್ ಬಾಳೆಕಾಯಿ (40) ಹಾಗೂ ಚಿನ್ಮಯ್ ಎಂದು ಗುರುತಿಸಲಾಗಿದೆ. ಅಪಘಾತಕ್ಕೀಡದ ಓಮಿನಿ ವಾಹನದಲ್ಲಿ ಸ್ವಗ್ರಾಮದಿಂದ ಮಂತ್ರಾಲಯಕ್ಕೆ ಕೊಪ್ಪಳ ಮಾರ್ಗವಾಗಿ ತೆರಳುತ್ತಿದ್ದಾಗ ಭಾನಾಪುರ ಬಳಿ ಘಟನೆ ನಡೆದಿದೆ. ಸರಕು ಸಾಗಣೆ ತುಂಬಿದ ವಾಹನ ರಸ್ತೆ ವಿಭಜಕ ದಾಟಿ ಓಮಿನಿ ವಾಹನಕ್ಕೆ ಡಿಕ್ಕಿ ಹೊಡೆದಿದ್ದರಿಂದ ದುರ್ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಡಿಕ್ಕಿ ಹೊಡೆದ ರಭಸಕ್ಕೆ ಮೃತದೇಹಗಳು ರಸ್ತೆಯ ಮೇಲೆ ಚೆಲ್ಲಾಪಿಲ್ಲಿಯಾಗಿ ಬಿದ್ದಿದ್ದವು. ಆಂಬುಲೆನ್ಸ್ ಸಿಬ್ಬಂದಿಯ ನೆರವಿನಿಂದ ಪೊಲೀಸರು ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಜಿಲ್ಲಾಸ್ಪತ್ರೆಗೆ ಸಾಗಿಸಿದರು. ಯಲಬುರ್ಗಾ ವೃತ್ತದ ಸಿಪಿಐ ಮೌನೇಶ್ವರ ಪಾಟೀಲ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.


ಚಲ್ಲಘಟ್ಟದ ನಾಡಪ್ರಭು ಕೆಂಪೇಗೌಡ ಬಡಾವಣೆ ಬಳಿ ಎಸ್ ಎಂ ಕೃಷ್ಣ ದಶಪಥ ರಸ್ತೆಯನ್ನು ಸಿಎಂ ಡಿ ಕೆ ಶಿವಕುಮಾರ್ ಅವರು ಶನಿವಾರ ಉದ್ಘಾಟಿಸಿದರು. ಶ್ರೀಮತಿ ಪ್ರೇಮಾ ಕೃಷ್ಣ, ಡಿಸಿಎಂ ಪರಮೇಶ್ವರ, ಸಚಿವರಾದ ಕೆ ಎಚ್ ಮುನಿಯಪ್ಪ, ಕೃಷ್ಣಬೈರೇಗೌಡ, ಬಿಡಿಎ ಅಧ್ಯಕ್ಷ, ಶಾಸಕ ಎನ್ ಎ ಹ್ಯಾರಿಸ್, ಶಾಸಕರಾದ ಎಸ್ ಟಿ ಸೋಮಶೇಖರ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಎಚ್ ಎಂ ರೇವಣ್ಣ, ಎಂಎಲ್ಸಿ ಗೋವಿಂದರಾಜು, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತಿತರರು ಉಪಸ್ಥಿತರಿದ್ದರು.

# ಬರ ಎದುರಿಸೋಣ ಬದ್ಧತೆ

## ಕೆಂಪೇಗೌಡ ಪ್ರತಿಮೆಗೆ ಮಾಲಾರ್ಪಣೆ ಬಳಿಕ ಮುಖ್ಯಮಂತ್ರಿ ಡಿಕೆಶಿವಕುಮಾರ್ ಘೋಷಣೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಮೂರು ವರ್ಷಗಳಿಂದ ಉತ್ತಮವಾಗಿ ಮಳೆ ಬಂದಿತ್ತು. ಆದರೆ ಈ ವರ್ಷ ಇಡೀ ದೇಶದಲ್ಲಿ ಬರಗಾಲ ಆಗುವ ಸಂಭವಿಸಿದೆ ಎಂದು ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ವಿಧಾನಸೌಧದ ಆವರಣದಲ್ಲಿರುವ ಕೆಂಪೇಗೌಡ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನಾವೆಲ್ಲರೂ ಸೇರಿ ಬರಗಾಲ ಎದುರಿಸಬೇಕು. ರೈತರನ್ನು ಉಳಿಸಬೇಕು ಎಂದು ಕರೆ ನೀಡಿದ್ದಾರೆ.

**ಕೆಂಪೇಗೌಡರ ಹಾದಿ:** ಕೆಂಪೇಗೌಡರು ಹುಟ್ಟಿದ್ದು ಒಕ್ಕಲಿಗನಾಗಿ ಬೆಳೆದಿದ್ದು ವಿಶ್ವಮಾನವನಾಗಿ. ಇದನ್ನು ಯಾರೂ ಸಹ ಮರೆಯಬಾರದು. ಈ ಹಾದಿಯಲ್ಲಿಯೇ ನಾವೆಲ್ಲರೂ ನಡೆಯಬೇಕು. ಇಡೀ ವಿಶ್ವ ಬೆಂಗಳೂರನ್ನು ನೋಡುತ್ತಿದೆ. ಇದಕ್ಕೆ ಕಾರಣ ನಾಡಪ್ರಭು ಕೆಂಪೇಗೌಡರು. 500 ವರ್ಷಗಳ ಹಿಂದೆ ಈ ಭೂಮಿಗೆ ಪೂಜೆ ಮಾಡಿ ನಗರ ನಿರ್ಮಾಣ ಮಾಡಿದರು. ಇದನ್ನು ಬೆಂಗಳೂರು ವಾಸಿಗಳು ಮರೆಯಬಾರದು ಎಂದಿದ್ದಾರೆ.

**ವರ್ಟಿಕಲ್ ಬೆಳವಣಿಗೆ:** ಬೆಂಗಳೂರಿನಲ್ಲಿ ವಿದ್ಯೆ, ಆರೋಗ್ಯ, ವೃತ್ತಿ ದೊರೆಯುತ್ತದೆ. ಇಲ್ಲಿ ಪ್ರತಿಯೊಬ್ಬರೂ ಬದುಕನ್ನು ಕಟ್ಟಿಕೊಳ್ಳಬಹುದು ಎಂದು ಅನೇಕರು ಈ ನಗರಕ್ಕೆ ಬರುತ್ತಿದ್ದಾರೆ. ಬೆಂಗಳೂರು ದಿನದಿಂದ ದಿನಕ್ಕೆ ಬೆಳೆಯುತ್ತಿದೆ. ನಗರ ವಿಸ್ತರಣೆ ಆಗುತ್ತಲೇ ಇದೆ. ಈ ನಗರಕ್ಕೆ ಬರುವವರನ್ನು ನಾವು ತಡೆಯಲು ಸಾಧ್ಯವಿಲ್ಲ. ಅದಕ್ಕೆ ವರ್ಟಿಕಲ್ ಬೆಳವಣಿಗೆ ಬಗ್ಗೆ ನಾನು ಆಲೋಚನೆ ಮಾಡುತ್ತಿದ್ದೇನೆ ಎಂದು ಹೇಳಿದ್ದಾರೆ.



### ಮುಖ್ಯಮಂತ್ರಿ ಭಾಷಣದ ಹೈಲೈಟ್ಸ್

- ಬೆಂಗಳೂರುನಗರದ ವರ್ಟಿಕಲ್ ಬೆಳವಣಿಗೆಗೆ ಚಿಂತನೆ
- ನಗರದ ಅಭಿವೃದ್ಧಿಗೆ 1.25 ಲಕ್ಷ ಕೋಟಿ ಯೋಜನೆ
- ಒಕ್ಕಲಿಗರ ಸಂಘಕ್ಕೆ ರಿಯಾಯಿತಿಯಲ್ಲಿ ಕೆಎಚ್‌ಬಿನಿವೇಶನ
- ವಿಧಾ ರಾಜಧಾನಿ ಅಭಿವೃದ್ಧಿಗೆ 1.25 ಲಕ್ಷ ಕೋಟಿ ಯೋಜನೆ
- ನಸೌಧದ ಬಳಿ ಕೆಂಪೇಗೌಡ ಪ್ರತಿಮೆಗೆ ಮಾಲಾರ್ಪಣೆ

**ಎಲ್ಲರಿಗೂ ಇಲ್ಲಿ ಬದುಕು**
ಎಲ್ಲಾ ಧರ್ಮ, ಜಾತಿಗಳಿಗೆ ಇಲ್ಲಿ ಬದುಕನ್ನು ಕಟ್ಟಿಕೊಳ್ಳಲು ನಾವು ಆಸ್ಪದ ನೀಡಬೇಕಿದೆ. ರಾಜ್ಯಕ್ಕೆ ಬೆಂಗಳೂರು ಮುಖ್ಯ. ಈ ಹಿಂದೆ ವಾಜಪೇಯಿ ಅವರು ಬೆಂಗಳೂರು ವಿಮಾನ ನಿಲ್ದಾಣ ಉದ್ಘಾಟನೆಗೆ ಬಂದಾಗ 'ಜಗತ್ತಿನ ಎಲ್ಲಾ ನಾಯಕರು ಈ ಮೊದಲು ದೆಹಲಿ, ಚೆನ್ನೈ, ಕಲ್ಕತ್ತಾಗೆ ಹೋಗುತ್ತಿದ್ದರು. ಆದರೆ ಈಗ ಬೆಂಗಳೂರು ನಂತರ ದೆಹಲಿಗೆ ಬರುವ ಸಂದರ್ಭ ಬಂದಿದೆ ಎಂದಿದ್ದರು ಎಂದು ಸ್ಮರಿಸಿದ್ದಾರೆ.

**ಬಿ ಯಿಂದ ಎ ಖಾತೆ**
ಬೆಂಗಳೂರಿನ ಆಸ್ತಿ ಮಾಲೀಕರ ದಾಖಲೆಗಳನ್ನು ಡಿಜಿಟಲೀಕರಣ ಮಾಡಲಾಗಿದೆ. ಇ ಖಾತ ಮೂಲಕ ಭೂ ಗ್ಯಾರಂಟಿ ನೀಡಲಾಗಿದೆ. ಈ ನಗರಕ್ಕೆ ಬಂದು ಕಷ್ಟ ಪಟ್ಟು ಆಸ್ತಿ ಸಂಪಾದಿಸಿದ್ದಾರೆ ಅವರ ಪರವಾಗಿ ನಮ್ಮ ಸರ್ಕಾರ ನಿಂತಿದೆ. ಬಿ ಖಾತೆಯಿಂದ ಎ ಖಾತೆ ಮಾಡಿಕೊಡಲಾಗುತ್ತಿದೆ. ಕಷ್ಟಕಟ್ಟು ಆಸ್ತಿ ಸಂಪಾದಿಸಿದವರ ಪರವಾಗಿ ನಮ್ಮ ಸರ್ಕಾರವಿದೆ ಎಂದು ಸಿಎಂ ವಿವರ ನೀಡಿದ್ದಾರೆ.

**3 ಸಿಎಂಗಳ ಒಪ್ಪಂದ**
ತುಂಗಭದ್ರಾ ಅಣೆಕಟ್ಟು ಉಳಿಸಲು ಮೂರು ರಾಜ್ಯದ ಮುಖ್ಯಮಂತ್ರಿಗಳು ಸೇರಿ ಕೇಂದ್ರ ಜಲಶಕ್ತಿ ಸಚಿವರ ಸಮ್ಮುಖದಲ್ಲಿ ತೀರ್ಮಾನ ಮಾಡಿದ್ದೇವೆ. ಕೇಂದ್ರ ಜಲಶಕ್ತಿ ಸಚಿವರ ನೇತೃತ್ವದಲ್ಲಿ ಆಂಧ್ರ ಸಿಎಂ ಚಂದ್ರಬಾಬು ನಾಯ್ಡು, ತೆಲಂಗಾಣ ಸಿಎಂ ರೇವಂತ ರೆಡ್ಡಿ ಹಾಗು ನಾನು ಸೇರಿ ಸಭೆ ನಡೆಸಿ ಒಂದು ಒಪ್ಪಂದಕ್ಕೆ ಬಂದಿದ್ದೇವೆ. ಈ ನೆಲ ಜಲಕ್ಕಾಗಿ ನಾವುಗಳೇ ಸಂಘರ್ಷ ಮಾಡಿಕೊಳ್ಳಬಾರದು ಎಂದಿದ್ದಾರೆ.

## ಹೈಟೆಕ್ ಬಸ್ ನಿಲ್ದಾಣಕ್ಕೆ ಅಂಗಡಿ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ

ಪಟ್ಟಣವು ಪುರಸಭೆಯಾಗಿ 11 ವರ್ಷ ಕಳೆದರೂ ಸಾರ್ವಜನಿಕರಿಗೆ ಸುಸಜ್ಜಿತ ಹಾಗೂ ಹೈಟೆಕ್ ಬಸ್ ನಿಲ್ದಾಣ ಸಿಕ್ಕಿಲ್ಲ ಎಂದು ನಮ್ಮ ಕರ್ನಾಟಕ ಸೇನೆ ಕಾರ್ಮಿಕ ಘಟಕದ ಅಧ್ಯಕ್ಷ ಗುರುರಾಜ ಅಂಗಡಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಪ್ರತಿದಿನ 150ಕ್ಕೂ ಹೆಚ್ಚು ಬಸ್ಸುಗಳು ಸಂಚರಿಸುವ, 10ಕ್ಕೂ ಹೆಚ್ಚು ಬಸ್ಸುಗಳು ರಾತ್ರಿ ವಾಸ್ತವ್ಯ ಹೂಡುವ ಪಟ್ಟಣದ ಬಸ್ ನಿಲ್ದಾಣದಲ್ಲಿ ಕುಡಿಯುವ ನೀರು, ಶೌಚಾಲಯ ಹಾಗೂ ಆಸನಗಳ ಸೂಕ್ತ ವ್ಯವಸ್ಥೆಯಿಲ್ಲ. ಇದರಿಂದ ಮಹಿಳೆಯರು, ವಿದ್ಯಾರ್ಥಿಗಳು ಮತ್ತು ಸಾರಿಗೆ ಸಿಬ್ಬಂದಿ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.

ಸರ್ಕಾರ ಮತ್ತು ಸಾರಿಗೆ ಇಲಾಖೆ ಈ ಕುರಿತು ತಕ್ಷಣ ಎಚ್ಚೆತ್ತುಕೊಂಡು ಹೈಟೆಕ್ ಬಸ್ ನಿಲ್ದಾಣ ನಿರ್ಮಿಸಬೇಕು. ಇಲ್ಲದಿದ್ದರೆ ನಮ್ಮ ಕರ್ನಾಟಕ ಸೇನೆ ವತಿಯಿಂದ ಉಗ್ರ ಹೋರಾಟ ನಡೆಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಡ್ಡಮತದಾನ ಆಂತರಿಕ ತನಿಖೆ ವರದಿ ಸಲ್ಲಿಕೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ವಿಧಾನಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ನವರು ಅನೈತಿಕ ಮಾರ್ಗದಿಂದ ಅಡ್ಡಮತದಾನ ಮಾಡಿಸಿದ್ದಾರೆ ಎಂದು ಬಿಜೆಪಿ ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಅವರು ಆರೋಪಿಸಿದ್ದಾರೆ. ವಿಧಾನಪರಿಷತ್ ಚುನಾವಣೆಯಲ್ಲಿ ನಡೆದ ಅಡ್ಡಮತದಾನದ ಕುರಿತು ಆಂತರಿಕ ತನಿಖಾ ವರದಿಯನ್ನು ಇಂದು ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರಿಗೆ ಸಲ್ಲಿಸಿದ ನಂತರ ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಅವರು ಮಾತನಾಡಿದರು. ಅಡ್ಡಮತದಾನ ಆಗಿರುವುದು ಕಾಂಗ್ರೆಸ್ ಮೇಲಿನ ಅಭಿಮಾನಕ್ಕೆ ಅಂತ ಕಾಂಗ್ರೆಸ್ ನಾಯಕರು ಭಾವಿಸಬಾರದು. ಬೇರೆ ರಾಜ್ಯಗಳಲಿ ಅಡ್ಡಮತದಾನ ಆದಾಗ ಕಾಂಗ್ರೆಸ್‌ನವರು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧ ಅಂತ ಉಪದೇಶ ಮಾಡ್ತಾರೆ. ಆದರೆ ಈಗ ಪ್ರಜಾಪ್ರಭುತ್ವವನ್ನು ಅಪಮೌಲ್ಯಗೊಳಿಸಿದ್ದಾರೆ. ಆದ್ದರಿಂದ ಇನ್ನು ಮುಂದೆ ಅವರಿಗೆ ಅಡ್ಡ ಮತದಾನ ಆದರೆ ಪ್ರಶ್ನಿಸುವ ಯಾವುದೇ ನೈತಿಕತೆ ಇಲ್ಲ ಎಂದರು.

# ಹುಮ್ನಾಬಾದ್ ಕೆಮಿಕಲ್ ಹೊಗೆ ಜಿಂದಾಬಾದ್

• ಮಲ್ಲಿಕಾರ್ಜುನರೆಡ್ಡಿ, ಹುಮನಾಬಾದ್

ಹುಮನಾಬಾದ ಕಾರ್ಖಾನೆ ರಾಸಾಯನಿಕ ಸೋರಿಕೆಯಿಂದಾಗಿ ಗ್ರಾಮಸ್ಥರು ಆತಂಕಗೊಂಡಿದ್ದಾರೆ. ವಿಶೇಷವಾಗಿ ಹುಮನಾಬಾದ್, ಧುಮ್ಮನಸೂರ, ಮೋಳಕೇರಾ, ಬಸವಂತಪೂರ, ಗಡವಂತಿ, ಇಂಧ್ರನಗರ, ಹುಡಗಿ, ನಂದಗಾಂವ, ಮಲ್ಕಾಪೂರವಾಡಿ, ಮದರಗಾಂವ ಗ್ರಾಮದ ಸುತ್ತಮುತ್ತ ಎಲ್ಲಿಯೇ ಕೊಳವೆ ಬಾವಿಗಳನ್ನು ತೋಡಿದ್ರು ಅಲ್ಲಿ ನೀರು ಸಿಗುತ್ತಿಲ್ಲ, ಬದಲಾಗಿ ವಿಷಕಾರಿ ಮೊಲಾಸಿಸ್ ಕೊಳವೆ ಬಾವಿಯಲ್ಲಿ ಬರುತ್ತಿದೆ..!

**ಕಂಡೂ ಕಾಣದಂತೆ ಅಧಿಕಾರಿ:** ದುರ್ವಾಸನೆ ಇರುವ, ಜೀವಕ್ಕೆ ಕಂಟಕವಾಗುವ ರಾಸಾಯನಿಕಗಳಿರುವ ದ್ರವ ಹೊರಬರುತ್ತಿದೆ. ಕಾರ್ಖಾನೆಗಳಿಂದ ನಿರಂತರ ಜಲ ಮಾಲಿನ್ಯ, ವಾಯು ಮಾಲಿನ್ಯವಾಗುತ್ತಿದ್ದರೂ ಜಿಲ್ಲಾಡಳಿತ, ವಾಯು ಮಾಲಿನ್ಯ ಇಲಾಖೆಯ ಅಧಿಕಾರಿಗಳು ಕಂಡೂ ಕಾಣದಂತೆ ಕುಳಿತಿದ್ದಾರೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ.

**ವಿಷಕಾರಿ ಗಾಳಿ ಸೇವನೆ:** ಚೆಕ್ ಪೋಸ್ಟ್ ಹತ್ತಿರವಿರುವ ಕೈಗಾರಿಕೆ ಪ್ರದೇಶದಲ್ಲಿ ಹೆಚ್ಚು ಕೆಮಿಕಲ್ ಕಾರ್ಖಾನೆಗಳಿದ್ದು, ಅವುಗಳಿಂದ ನಿಂತರವಾಗಿ ವಿಷಕಾರಿ ಗಾಳಿ, ಗ್ಯಾಸ್ ಸೋರಿಕೆಯಿಂದ ಪ್ರದೇಶದಕ್ಕೆ ಹೊಂದಿಕೊಡಿರುವ ಗ್ರಾಮದ ಜನರು ಪ್ರತಿದಿನವೂ ಕೂಡಾ ವಿಷಕಾರಿ ನೀರು, ವಿಷಕಾರಿ ಗಾಳಿ ಸೇವಿಸುತ್ತಲೇ ಕಾಲಕಳೆಯ ಬೇಕಾದ ಸ್ಥಿತಿಯಲ್ಲಿ ನಿರ್ಮಾಣವಾಗಿದೆ.

**ತಡಯಲು ಅಸಾಧ್ಯ:** ಬಾವಿ, ಬೋರ್ ವೆಲ್ ನೀರನ್ನು ಪರಿಕ್ಷೆಗೊಳಪಡಿಸಿದಾಗ ಇಲ್ಲಿನ ನೀರು ಕುಡಿಯಲು ಯೋಗ್ಯವಿಲ್ಲಾ ಎಂದು ವರದಿ ಬಂದಿದೆ, ಆದರೂ ಕೂಡಾ ಇಲ್ಲಿನ ಕೆಮಿಕಲ್ ಕಾರ್ಖಾನೆಗಳನ್ನು ಕೆಮಿಕಲ್ ನೀರನ್ನು ಹಳ್ಳದಲ್ಲಿ ಬಾವಿ, ಬೋವೆಲ್‌ನಲ್ಲಿ ತಂದು ಬಿಡುವುದನ್ನ ನಿಲ್ಲಿಸಲು ಯಾರಿದಂಲೂ ತಡೆಯಲು ಸಾಧ್ಯವಾಗುತ್ತಿಲ್ಲ. ಇಲ್ಲಿನ ಕಾರ್ಖಾನೆಗಳ ಹೊಗೆಯಿಂದ ಪರಿಸರ ಮಾಲಿನ್ಯಕ್ಕೆ ಧಕ್ಕೆಯಾಗುತ್ತಿದೆ ಎಂದು ಪರಿಸರ ಪ್ರೇಮಿಗಳು ದೂರತ್ತಾರೆ.






ಮೋಳಕೇರಾ, ಗಡವಂತಿ, ಮಾಣಿಕನಗರ, ಇಂದ್ರನಗರ, ಹಾಗೂ ವಿವಿಧ ಗ್ರಾಮದ ಸುತ್ತಮುತ್ತಲೂ ಕೇಮಿಕಲ್ ವಿಷಕಾರಿ ನೀರು ಬಿಟ್ಟು ಪಶು ಪಕ್ಷಿಗಳ ಹಾಗೂ ಜನರ ಜೀವಕ್ಕೆ ಹಾನಿಯಾದರೆ ನಾನು ಸಹಿಸುವುದಿಲ್ಲ ಬೀದಿಗಿಳಿದು ಹೋರಾಟ ಮಾಡಲು ಸಿದ್ಧ.
–ಗಣಪತಿ ಅಷ್ಟೂರೆ, ಭಾರತೀಯ ದಲಿತ ಫ್ಯಾಂಥರ ಸಂಘಟನೆಯ ಅಧ್ಯಕ್ಷ

**ಜನರ ಮೇಲೆ ಪ್ರಭಾವ, ಪಶುಗಳ ಸಾವು**
ನಿರಂತರವಾಗಿ ಕಾರ್ಖಾನೆಗಳಿಂದ ಹೊರ ಬರುವ ದಟ್ಟ ಹೊಗೆಯಿಂದ, ವಿಷಕಾರಿ ಕೇಮಿಕಲ್ ನೀರಿನಿಂದ ಧುಮ್ಮನಸೂರ, ಮೋಳಕೇರಾ, ಬಸವಂತಪೂರ, ಗಡವಂತಿ, ಇಂಧ್ರನಗರ, ಹುಡಗಿ, ನಂದಗಾಂವ, ಮಲ್ಕಾ ಪೂರವಾಡಿ, ಸುತ್ತಮುತ್ತಲಿನ ಜನರು ಸಾಕಷ್ಟು ಸಮಸ್ಯೆಯನ್ನು ಅನು ಭವಿಸುತ್ತಿದ್ದಾರೆ. ಈ ಕೆಮಿಕಲ್ ನೀರಿನಿಂದ ಜನರಿಗೆ ಗಾಯ, ಪಶು ಪಕ್ಷಿಗಳು ಸ್ಥಳದಲ್ಲಿಯೇ ಮೃತಪಟ್ಟಿವೆ.

**ಕಾರ್ಖಾನೆ ರಾಸಾಯನಿಕ ಸೋರಿಕೆ, ಆತಂಕ..!**
ಕೈಗಾರಿಕಾ ಪ್ರದೇಶ ಕೆಲವರಿಗೆ ಬದುಕು ಕೊಟ್ಟರೆ ಅನೇಕರ ಆರೋಗ್ಯವನ್ನು ಹದೆಗೆಡಿಸುತ್ತಿದೆ. ರಾಸಾಯನಿಕ ಕಾರ್ಖಾನೆಯಿಂದ ಜನರ ಆರೋಗ್ಯದ ಮೇಲೆ ಪರಿಣಾಮವಾಗುತ್ತಿದೆ. ಬೋರ್‌ವೆಲ್ ನೀರು ಕೆಟ್ಟ ವಾಸನೆ ಬರುತ್ತಿದ್ದು, ಗ್ರಾಮದ ರೈತರು ಪಿಲ್ಟರ್ ನೀರಿನ ಬಾಟಲ್ ಖರೀದಿಸಿ ಕುಡಿಯಬೇಕಾಗಿದೆ. ಕಾರ್ಖಾನೆಯಿಂದ ಪದೇ ಪದೇ ಕೆಮಿಕಲ್ ಸೋರಿಕೆ, ಗ್ಯಾಸ್ ಲೀಕೇಜ್ ಹಾಗೂ ಹಳ್ಳಕ್ಕೆ ಕೇಮಿಕಲ್ ವಿಷಕಾರಿ ನೀರು ಬೀಡುವುದರಿಂದ ಆತಂಕದಲ್ಲಿ ಗ್ರಾಮಸ್ಥರು ದಿನದೂಡುವಂತಾಗಿದೆ.

## ವಿಜಯೇಂದ್ರ ವರ್ಚಸ್ಸು ಕುಗ್ಗಿಸಲು ಸಂಚು, ಪಕ್ಷದೊಳಗಿನ ಕೆಲವರಿಂದ ಅಪಪ್ರಚಾರ: ರೇಣುಕಾಚಾರ್ಯ

## ರಾಜಕಾರಣಕ್ಕೆ ಜನರ ಪ್ರಾಮಾಣಿಕ ಸೇವೆ ಮಾಡುವವರು ಬರಬೇಕು

ರಾಜಕಾರಣವು ಅಧಿಕಾರದ ಸ್ಥಾನವಲ್ಲ, ಜನಸೇವೆಯ ಪವಿತ್ರ ವೇದಿಕೆಯಾಗಬೇಕು. ಸಮಾಜದ ಅಭಿವೃದ್ಧಿ, ಬಡವರ ಕಲ್ಯಾಣ ಮತ್ತು ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಡುವ ಮನೋಭಾವ ಹೊಂದಿರುವ ಪ್ರಾಮಾಣಿಕ ವ್ಯಕ್ತಿಗಳು ರಾಜಕೀಯಕ್ಕೆ ಬಂದಾಗ ಮಾತ್ರ ಉತ್ತಮ ಆಡಳಿತ ಸಾಧ್ಯವಾಗುತ್ತದೆ.

### ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಇಂದು ಜನರು ತಮ್ಮ ಪ್ರತಿನಿಧಿಗಳಿಂದ ಪಾರದರ್ಶಕತೆ, ಪ್ರಾಮಾಣಿಕತೆ ಮತ್ತು ಜವಾಬ್ದಾರಿಯುತ ಆಡಳಿತವನ್ನು ನಿರೀಕ್ಷಿಸುತ್ತಿದ್ದಾರೆ. ಚುನಾವಣೆಯ ಸಮಯದಲ್ಲಿ ನೀಡಿದ ಭರವಸೆಗಳನ್ನು ಈಡೇರಿಸಿ, ಜನರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಅವರ ಸಂಕಷ್ಟಗಳಿಗೆ ಸ್ಪಂದಿಸುವ ನಾಯಕತ್ವವೇ ಪ್ರಜಾಪ್ರಭುತ್ವದ ನಿಜವಾದ ಶಕ್ತಿ.

ರಾಜಕೀಯವನ್ನು ಸ್ವಾರ್ಥದ ಸಾಧನವನ್ನಾಗಿ ಮಾಡದೆ, ಸಮಾಜ ಸೇವೆಯ ಧ್ಯೇಯವನ್ನಾಗಿ ಸ್ವೀಕರಿಸುವ ಯುವಕರು, ಶಿಕ್ಷಣವಂತರು ಮತ್ತು ಸೇವಾ ಮನೋಭಾವದ ವ್ಯಕ್ತಿಗಳು ಹೆಚ್ಚಿನ ಸಂಖ್ಯೆಯಲ್ಲಿ ರಾಜಕಾರಣಕ್ಕೆ ಬರಬೇಕಾಗಿದೆ. ಜನರ ವಿಶ್ವಾಸವನ್ನು ಉಳಿಸಿಕೊಳ್ಳುವ ನಾಯಕತ್ವವೇ ರಾಜ್ಯ ಮತ್ತು ದೇಶದ ಅಭಿವೃದ್ಧಿಗೆ ಬಲವಾದ ಅಡಿಪಾಯವಾಗುತ್ತದೆ.

ಆದ್ದರಿಂದ, ಪ್ರಾಮಾಣಿಕತೆ, ನಿಷ್ಠೆ ಮತ್ತು ಜನಸೇವೆಯ ಮನೋಭಾವ ಹೊಂದಿರುವವರು ರಾಜಕಾರಣಕ್ಕೆ ಪ್ರವೇಶಿಸಿ ಜನರ ಆಶೋತ್ತರಗಳಿಗೆ ಸ್ಪಂದಿಸುವ ಆಡಳಿತ ನೀಡಬೇಕಾಗಿದೆ. ಇದೇ ಉತ್ತಮ ಪ್ರಜಾಪ್ರಭುತ್ವದ ಲಕ್ಷಣವಾಗಿದ್ದು, ಸಮಾಜದ ಸಮಗ್ರ ಅಭಿವೃದ್ಧಿಗೆ ದಾರಿಯಾಗಲಿದೆ.

## ಹಿಂದೂ ಸಮಾವೇಶಕ್ಕೆ ತೆರಳದಂತೆ ಅಂಗಾಯತ ಸಮುದಾಯಕ್ಕೆ ಮನವಿ



**ಬೀದರ್:** ಇಂದು ಬಸವಕಲ್ಯಾಣದಲ್ಲಿ ನಡೆಯಲಿರುವ ಹಿಂದೂ ಸಮಾವೇಶಕ್ಕೆ ಲಿಂಗಾಯತ, ವೀರಶೈವ ಲಿಂಗಾಯತ ಹಾಗೂ ಲಿಂಗಾಯತ ಧರ್ಮದ ವಿವಿಧ ಒಳಪಂಗಡಗಳ ಮಠಾಧೀಶರು, ಶರಣ–ಶರಣೆಯರು, ಭಕ್ತರು ಹಾಗೂ ಸಮುದಾಯದ ಸದಸ್ಯರು ತೆರಳಬಾರದೆಂದು ಲಿಂಗಾಯತ ಮುಖಂಡರು ಮತ್ತು ಧಾರ್ಮಿಕ ಗಣ್ಯರು ಮನವಿ ಮಾಡಿದ್ದಾರೆ.

ಸಮಾವೇಶವು ನ್ಯಾಯಾಲಯದ ಆದೇಶದ ಮೇರೆಗೆ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಯ ಬಿಗಿ ಭದ್ರತೆಯ ನಡುವೆ ನಡೆಯಲಿದ್ದು, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಜಿಲ್ಲೆಯ ಹಾಗೂ ನೆರೆ ಜಿಲ್ಲೆಗಳ ರಿಸರ್ವ್ ಪೊಲೀಸ್ ಮತ್ತು ಸಶಸ್ತ್ರ ಪಡೆಗಳನ್ನು ನಿಯೋಜಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವಂತೆ ಪೊಲೀಸರು ಸೂಚಿಸಿರುವುದಾಗಿ ತಿಳಿಸಲಾಗಿದೆ.

ಕಾರ್ಯಕ್ರಮದ ಆಯೋಜಕರಿಗೆ ನ್ಯಾಯಾಲಯದ ನಿರ್ದೇಶನದಂತೆ ಅತಿಥಿಗಳು, ಭಾಗವಹಿಸುವವರ ವಿವರಗಳು ಹಾಗೂ ಅಗತ್ಯ ದಾಖಲೆಗಳನ್ನು ಸಲ್ಲಿಸುವಂತೆ ಅಧಿಕಾರಿಗಳು ಸೂಚನೆ ನೀಡಿರುವುದಾಗಿ ಹೇಳಲಾಗಿದೆ. ಕಾರ್ಯಕ್ರಮಕ್ಕೆ ಅನುಮತಿ ಪಡೆದವರಿಗೆ ಮಾತ್ರ ಭಾಗವಹಿಸಲು ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಲಾಗಿದೆ.

ಈ ಸಮಾವೇಶವು ಲಿಂಗಾಯತ ಅಥವಾ ವೀರಶೈವ ಸಮುದಾಯದ ಸಮಾವೇಶವಲ್ಲ ಹಾಗೂ ಸಮುದಾಯದ ಜಗದ್ಗುರುಗಳು ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿಲ್ಲ ಎಂದು ಪ್ರಕಟಣೆಯಲ್ಲಿ ಉಲ್ಲೇಖಿಸಲಾಗಿದೆ. ಕಾನೂನು ಸುವ್ಯವಸ್ಥೆಯ ಹಿತದೃಷ್ಟಿಯಿಂದ ಲಿಂಗಾಯತ ಸಮುದಾಯದವರು ಹಾಗೂ ಬಸವ ಅಭಿಮಾನಿಗಳು ಸಮಾವೇಶಕ್ಕೆ ತೆರಳದಂತೆ ಮನವಿ ಮಾಡಲಾಗಿದೆ.

ಇದೇ ವೇಳೆ, ಜೂನ್ 28ರಂದು ಬಸವಕಲ್ಯಾಣದ 108 ಅಡಿ ಬಸವ ಮೂರ್ತಿ ಸಮೀಪ ರಾಷ್ಟ್ರೀಯ ಬಸವ ದಳ ಹಮ್ಮಿಕೊಂಡಿದ್ದ ಸಮಾಲೋಚನಾ ಸಭೆಗೆ ಪೊಲೀಸ್ ಇಲಾಖೆ ಅನುಮತಿ ನೀಡದ ಕಾರಣ ಕಾರ್ಯಕ್ರಮವನ್ನು ರದ್ದುಗೊಳಿಸಲಾಗಿದೆ ಎಂದು ತಿಳಿಸಲಾಗಿದೆ.

ಈ ಕುರಿತು ಪೂಜ್ಯ ಜಗದ್ಗುರು ಡಾ. ಚೆನ್ನಬಸವಾನಂದ ಸ್ವಾಮೀಜಿ, ಪೂಜ್ಯ ಡಾ. ಸಿದ್ಧರಾಮ ಶರಣರು ಬೆಲ್ದಾಳ, ಬಸವ ಮಹಾಮನೆ ಬಸವಕಲ್ಯಾಣ, ಪೂಜ್ಯ ಶ್ರೀ ಸತ್ಯಾದೇವಿ ಮಾತಾಜಿ, ಬಸವ ಮಂಟಪ ಬೀದರ, ಅಖಿಲ ಭಾರತ ಲಿಂಗಾಯತ ಸಮನ್ವಯ ಸಮಿತಿಯ ಕರ್ನಾಟಕ ರಾಜ್ಯ ಸಂಚಾಲಕರಾದ ಶ್ರೀಕಾಂತ ಸ್ವಾಮಿ, ಜಾಗತಿಕ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಉಪಾಧ್ಯಕ್ಷರಾದ ಬಸವರಾಜ ಬುಳ್ಳಾ ಹಾಗೂ ವಿಶ್ವಕ್ರಾಂತಿ ದಿವ್ಯ ಪೀಠದ ಅಧ್ಯಕ್ಷರಾದ ಶ್ರೀ ಓಂಪ್ರಕಾಶ ರೊಟ್ಟೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಛಾತ್ರೋಂ ಕಿ ಗೂಂಜ್ ಅಭಿಯಾನಕ್ಕೆ ಚಾಲನೆ



ವಿದ್ಯಾರ್ಥಿಗಳು ಯಾವುದೇ ವಿಶೇಷ ಸೌಲಭ್ಯ ಕೇಳುತ್ತಿಲ್ಲ; ನ್ಯಾಯಯುತ ಮತ್ತು ಪಾರದರ್ಶಕ ಪರೀಕ್ಷಾ ವ್ಯವಸ್ಥೆಯನ್ನು ಮಾತ್ರ ಬೇಡುತ್ತಿದ್ದಾರೆ. ವಿದ್ಯಾರ್ಥಿಗಳ ಭವಿಷ್ಯವನ್ನು ಕದಿಯುವ ಪ್ರಶ್ನೆ ಪತ್ರಿಕೆ ಸೋರಿಕೆಗಳನ್ನು ಇನ್ನು ಮುಂದೆ ಸಹಿಸಲು ಸಾಧ್ಯವಿಲ್ಲ.

–ಬಸವರಾಜ ಜಾಬಶೆಟ್ಟಿ
ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷರು

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಪ್ರಶ್ನೆ ಪತ್ರಿಕೆ ಸೋರಿಕೆ, ಪರೀಕ್ಷಾ ವಂಚನೆ, ಪರೀಕ್ಷೆಗಳ ರದ್ದು ಹಾಗೂ ಸಾರ್ವಜನಿಕ ಪರೀಕ್ಷಾ ವ್ಯವಸ್ಥೆಯ ಮೇಲಿನ ವಿಶ್ವಾಸ ಕುಸಿತದ ವಿರುದ್ಧ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ದೇಶಾದ್ಯಂತ 'ಛಾತ್ರೋಂ ಕಿ ಗೂಂಜ್'(ವಿದ್ಯಾರ್ಥಿಗಳ ಗರ್ಜನೆ) ಅಭಿಯಾನಕ್ಕೆ ಚಾಲನೆ ನೀಡಿದೆ ಎಂದು ಕಾಂಗ್ರೆಸ್ ಪಕ್ಷದ ಜಿಲ್ಲಾಧ್ಯಕ್ಷ ಬಸವರಾಜ ಜಾಬಶೆಟ್ಟಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶನಿವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, 28 ಪ್ರಮುಖ ನಗರಗಳಲ್ಲಿ 40 ದಿನಗಳ ಕಾಲ ನಡೆಯಲಿರುವ ಈ ಅಭಿಯಾನವು ವಿದ್ಯಾರ್ಥಿಗಳ ಸಮಸ್ಯೆಗಳನ್ನು ರಾಷ್ಟ್ರೀಯ ಮಟ್ಟದಲ್ಲಿ ಪ್ರಸ್ತಾಪಿಸುವ ಉದ್ದೇಶ ಹೊಂದಿದೆ ಎಂದರು. ಕಾಂಗ್ರೆಸ್ ಪಕ್ಷದ ಪ್ರಕಾರ, ಕೋಚಿಂಗ್ ಕೇಂದ್ರಗಳು, ಕಾಲೇಜು ಕ್ಯಾಂಪಸ್‌ಗಳು, ಹಾಸ್ಟೆಲ್‌ಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ವಿದ್ಯಾರ್ಥಿಗಳೊಂದಿಗೆ ಸಂಪರ್ಕ ಸಾಧಿಸಿ ಅವರ ಧ್ವನಿಯನ್ನು ಸರ್ಕಾರದ ಗಮನಕ್ಕೆ ತರಲಾಗುವುದು. "ಪ್ರಾಮಾಣಿಕವಾಗಿ ಓದುವ ಪ್ರತಿಯೊಬ್ಬ ವಿದ್ಯಾರ್ಥಿಗೂ ನ್ಯಾಯಯುತ ಪರೀಕ್ಷೆಯ ಅವಕಾಶ ಸಿಗಬೇಕು" ಎಂಬುದು ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದರು.

ನೀಟ್ ಯುಜಿ–2026 ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣವನ್ನು ಉಲ್ಲೇಖಿಸಿದ ಅವರು, ಇದರಿಂದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಹಾಗೂ ಪರೀಕ್ಷಾ ವ್ಯವಸ್ಥೆಯ ಮೇಲಿನ ನಂಬಿಕೆ ಹಾನಿಗೊಳಗಾಗಿದೆ ಎಂದು ಆರೋಪಿಸಿದರು.

ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಸಿಬಿಐ ತನಿಖೆ ನಡೆಯುತ್ತಿದ್ದು, ಪ್ರಮುಖ ಆರೋಪಿಗಳನ್ನು ಈಗಾಗಲೇ ಬಂಧಿಸಲಾಗಿದೆ. ದೇಶದಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಗಳು ನಿರಂತರವಾಗಿ ನಡೆಯುತ್ತಿದ್ದು, ಕಳೆದ ಹಲವು ವರ್ಷಗಳಲ್ಲಿ ಕೋಟ್ಯಂತರ ವಿದ್ಯಾರ್ಥಿಗಳು ಇದರ ಪರಿಣಾಮ ಅನುಭವಿಸಿದ್ದಾರೆ ಎಂದು ತಿಳಿಸಿದರು.

ಪ್ರಶ್ನೆ ಪತ್ರಿಕೆ ಸೋರಿಕೆ ಕೇವಲ ಶಿಕ್ಷಣ ಕ್ಷೇತ್ರದ ಸಮಸ್ಯೆಯಲ್ಲ; ಇದು ಯುವಜನರ ಭವಿಷ್ಯ ಮತ್ತು ಉದ್ಯೋಗದ ಪ್ರಶ್ನೆಯಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ಕಾಂಗ್ರೆಸ್ ಮೂರು ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟಿದೆ. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು, ಪ್ರಶ್ನೆ ಪತ್ರಿಕೆ ಸೋರಿಕೆ ಜಾಲದ ಕುರಿತು ಸಮಗ್ರ ತನಿಖೆ ನಡೆಸಬೇಕು ಹಾಗೂ ಪರೀಕ್ಷಾ ವ್ಯವಸ್ಥೆಯನ್ನು ಸಂಪೂರ್ಣವಾಗಿ ಸುಧಾರಿಸಬೇಕು ಎಂದು ಆಗ್ರಹಿಸಿದರು. ಅದರ. ಜೊತೆಗೆ, ವಾರ್ಷಿಕ ಪರೀಕ್ಷೆಗಳು ಮತ್ತು ನೇಮಕಾತಿಗಳಿಗಾಗಿ ನಿಗದಿತ ಕ್ಯಾಲೆಂಡರ್ ಜಾರಿಗೆ ತಂದು ದಿನಾಂಕಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಒತ್ತಾಯಿಸಿದರು.

ಅಭಿಯಾನದ ಅಂಗವಾಗಿ ಜೂನ್ 30ರಿಂದ ದೇಶದ 28 ನಗರಗಳಲ್ಲಿ ಕರಪತ್ರ ವಿತರಣೆ, ವಿದ್ಯಾರ್ಥಿ ಸಂಪರ್ಕ ಕಾರ್ಯಕ್ರಮಗಳು ಹಾಗೂ ಬೀದಿ ಸಭೆಗಳು ನಡೆಯಲಿವೆ. ಜುಲೈ ತಿಂಗಳಿಡೀ ಕ್ಯಾಂಪಸ್ ಸಂಪರ್ಕ ಅಭಿಯಾನ ಮತ್ತು ವಿವಿಧ ವಿದ್ಯಾರ್ಥಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತದೆ. ಆಗಸ್ಟ್ 1ರಂದು ಜಿಲ್ಲಾಧಿಕಾರಿಗಳ ಕಚೇರಿಗಳ ಮುತ್ತಿಗೆ ಹಾಗೂ ಆಗಸ್ಟ್ 9ರಂದು ದೆಹಲಿಯಲ್ಲಿ ಸಂಸತ್ ಮುತ್ತಿಗೆ ಕಾರ್ಯಕ್ರಮವನ್ನು ಆಯೋಜಿಸಲಾಗುವುದು ಎಂದು ಹೇಳಿದರು. ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆ ಜಿಲ್ಲಾಧ್ಯಕ್ಷ ಅಮೃತರಾವ ಚಿಮಕೊಡೆ, ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಾರ್ಜ್ ಫರ್ನಾಂಡಿಸ್, ಪ್ರೊ.ವಿಟಲದಾಸ ಪ್ಯಾಗೆ, ಅಬ್ದುಲ್ ಸತ್ತಾರ, ಶಿವನಾಥ ಪಾಟೀಲ್, ಸಚಿನ್ ಮಲ್ಕಾಪುರೆ, ಪಕ್ಷದ ಪ್ರಚಾರ ಸಮಿತಿಯ ಮುಖಂಡರಾದ ಸುನಿಲ ಬಚ್ಚನ್, ಸಂಜು ಡಿ.ಕೆ, ರವಿಂದ್ರ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ನಾಡಪ್ರಭು ಕೆಂಪೇಗೌಡ ಜಯಂತಿ ಅಂಗವಾಗಿ ಹಸಿರು ಕಾಣಿಕೆ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**



ನಾಡಪ್ರಭು ಕೆಂಪೇಗೌಡ ಜಯಂತಿಯ ಅಂಗವಾಗಿ ರಾಜ್ಯ ಸರ್ಕಾರ ಕೈಗೊಂಡಿರುವ 15 ಲಕ್ಷ ಸ್ಥಳೀಯ ಸಸಿಗಳನ್ನು ನೆಡುವ ಮಹತ್ವಾಕಾಂಕ್ಷಿ ಕಾರ್ಯಕ್ರಮದಲ್ಲಿ ರಾಜ್ಯದ ಜನತೆ ಸಕ್ರಿಯವಾಗಿ ಭಾಗವಹಿಸಬೇಕೆಂದು ಹಿರಿಯ ನಾಗರಿಕರ ರಾಜ್ಯ ಪ್ರಶಸ್ತಿ ಪುರಸ್ಕೃತರಾದ ವೀರಭದ್ರಪ್ಪ ಉಪ್ಪಿನ ಕರೆ ನೀಡಿದರು.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ವತಿಯಿಂದ 50 ಸಾವಿರಕ್ಕೂ ಹೆಚ್ಚು ನಾಗರಿಕರ ಸಹಭಾಗಿತ್ವದಲ್ಲಿ ನಡೆಯುತ್ತಿರುವ ಸಸ್ಯಾರೋಪಣಾ ಕಾರ್ಯಕ್ರಮದ ಅಂಗವಾಗಿ ಅಕ್ಷಯನಗರ ಸಮೀಪದ ಫ್ಲಾಟ್‌ನಲ್ಲಿ ಹಿರಿಯ ನಾಗರಿಕರು ಸೇವಾಭಾವದಿಂದ ಉಚಿತವಾಗಿ ನಡೆಸುತ್ತಿರುವ ವಾಚನಾಲಯದಲ್ಲಿ ಸಸಿ ನೆಟ್ಟು ಅವರು ಮಾತನಾಡಿದರು.

ಮುಂದಿನ ಮಾನ್ಸೂನ್ ಅವಧಿಯಲ್ಲಿ ಶೇ.40ರಿಂದ 45ರಷ್ಟು ಮಳೆಯ ಕೊರತೆ ಉಂಟಾಗುವ ಸಾಧ್ಯತೆ ಇದೆ ಎಂದು ಸರ್ಕಾರ ಹಾಗೂ ಹವಾಮಾನ ಇಲಾಖೆ ಎಚ್ಚರಿಕೆ ನೀಡಿರುವ ಹಿನ್ನೆಲೆಯಲ್ಲಿ ಭವಿಷ್ಯದಲ್ಲಿ ಎದುರಾಗಬಹುದಾದ ಬರಗಾಲವನ್ನು ಸಮರ್ಥವಾಗಿ ಎದುರಿಸಲು ಹೆಚ್ಚು ಹೆಚ್ಚು ಗಿಡಗಳನ್ನು ಬೆಳೆಸುವ ಅಗತ್ಯವಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹಿರಿಯ ಉದ್ಯಮಿ ರಾಜು ಚನ್ನಗಿರಿ ಮಾತನಾಡಿ, ಪ್ರತಿಯೊಬ್ಬರೂ ತಮ್ಮ ಮನೆಯ ಆವರಣದಲ್ಲಿ ಸಾಧ್ಯವಾದಷ್ಟು ಗಿಡಗಳನ್ನು ಬೆಳೆಸಬೇಕು. ಸ್ಥಳಾವಕಾಶದ ಕೊರತೆ ಇದ್ದಲ್ಲಿ ಕುಂಡಗಳಲ್ಲಿ ಹೂವಿನ ಗಿಡಗಳು ಅಥವಾ ಆಮ್ಲಜನಕ ನೀಡುವ ಸಸಿಗಳನ್ನು ನೆಡುವ ಮೂಲಕ ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಹಿರಿಯ ಉದ್ಯಮಿ ಎಚ್.ವಿ. ರವೀಂದ್ರನಾಥ ಬೇಲೂರು ಪರಿಸರ ಸಂರಕ್ಷಣೆ ಮತ್ತು ಹಸಿರು ವಾತಾವರಣದ ಮಹತ್ವದ ಕುರಿತು ಮಾತನಾಡಿದರು. ಕಾರ್ಯಕ್ರಮದಲ್ಲಿ ಸಾನ್ವಿ ಅಂಬೇಸಂಗೆ ಹಾಗೂ ಆಥರು ಸೇರಿದಂತೆ ಹಲವರು ಭಾಗವಹಿಸಿದ್ದರು.

# ಯೋಗ ದಿನ: ಪ್ರತಿಯೊಬ್ಬರಿಗು ಜೀವನದಲ್ಲಿ ಯೋಗ, ಪ್ರಾಣಯಾಮದ ಅಗತ್ಯವಿದೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**



ಜೈ ಶ್ರೀ ರಾಮ ಯೋಗಾ ಸಮಿತಿಯಿಂದ ನಗರದ ಅಮಲಾಪೂರ ರಸ್ತೆಯ ಮಾರ್ಗ ದಲ್ಲಿ ಶ್ರೀ ಹೆಮ್ಮರೆಡ್ಡಿ ಮಲ್ಲಮ ಕಲ್ಯಾಣ ಮಂಟಪದಲ್ಲಿ ವಿಶ್ವ ಯೋಗ ದಿನಾಚರಣೆ ಪ್ರಯುಕ್ತ ಹಮ್ಮಿಕೊಂಡೊರುವ ಯೋಗ ದಿನಾಚರಣೆ ಸಮಾರಂಭವನ್ನು ಸಿದ್ಧಾರೂಢ ಮಠದ ಪೂಜ್ಯ.ಡಾ.ಶಿವುಕುಮಾರ ಸ್ವಾಮಿಜಿ ಉದ್ಘಾಟಿಸಿದರು.

ನಂತರ ಅವರು ಮಾತನಾಡಿ ಮನುಷ್ಯನ ಜೀವನದಲ್ಲಿ ಯೋಗ ಅತ್ಯಂತ ಮಹತ್ವದಾಗಿದೆ ಎಂದು ನುಡಿದರು. ಯೋಗ,ಪ್ರಾಣಯಾಮದಿಂದ ತಮ್ಮ ಶಾರಿರಕ ಸ್ವಸ್ಥ ಇರಿಕೊಳುವುದರ ಜೊತೆ–ಯಲಿ ಆರೋಗ್ಯ ಮನಸ್ಸು ಸ್ವಚ್ಚ ಇಟ್ಟುಕೊಳ್ಳಲು ಸಾಧ್ಯವಿದೆ ಎಂದರು.

ಶಾರಿರಕವಾಗಿ ಸ್ವಸ್ಥ ರಾಗಿದ್ದರೆ ಮನಸ್ಸು ಸುದ್ಧವಾಗಿರುತದೆ.ಇಂದ್ರಿಯಗಳು ನಿಯಂತ್ರಣದಲ್ಲಿ ಇರುತ್ತವದ ಹೀಗಾಗಿ ಪ್ರತಿಯೊಬ್ಬರು ತಮ್ಮಜೀವನದಲ್ಲಿ ಯೋಗಪ್ರಾಣಾಯಮ ಮಾಡುವದನ್ನುರೂಡಿಸಿಕೊಳ್ಳಲು ಕರೆ ನೀಡಿದರು. ಶಾರಿರಕವಾಗಿ ಅನಾರೋಗ್ಯವಾದರೆ ಅದರಿಂದ ಏನು ಮಾಡಲು ಸಾಧ್ಯವಿಲ್ಲ ಮೊದಲು ನಮ್ಮ ಆರೋಗ್ಯ ಚೆನ್ನಾಗಿರಬೇಕು ಅಂದರೆ ನಾವು ಯೋಗ ಮಾಡಲೇಬೆಕು.ಇದರಿಂದ ಆತ್ಮ ಮತ್ತು ಪರಮಾತ್ಮನನ್ನು ತಿಳಿದುಕೊಳ್ಳಲು ಸಾಧ್ಯವಾಗುತದೆ ಎಂದರು. ಯಾರು ಮನಸ್ಸು ಮತ್ತು ಇಂದ್ರಿಯಗಳು ನಿಯಂತ್ರಣದಲ್ಲಿ ಇಟುಕೊಳುತ್ತಾರೆ ಅವರು ಜೀವನದಲ್ಲಿ ಏನು ಬೇಕಾದದ್ದನು ಸಾಧಿಸಲು ಸಾಧ್ಯವಿದೆ ಎಂದು ನುಡಿದರು.

ಯಾದಗಿರ ಜಿಲ್ಲಾ ಆರೋಗು ಕುಟುಂಬ ಕಲ್ಯಾಣ ಅಧಿಕಾರಿ ಮಹೇಶ ಬಿರಾದರ ಅವರು ಮಾತನಾಡಿ ಮಾತನಾಡಿ ಪ್ರತಿಯೊಬ್ಬರು ಪ್ರತಿನಿತ್ಯ ಕನಿಷ್ಟ ಮೂವತ್ತು ನಿಮಿಷವಾದರು ಯೋಗ ಮಾಡುವ ಮುಖಾಂತರ ತಮ್ಮ ಆರೋಗ್ಯವನ್ನು ಕಾಪಾಡಿಕೊಳುವಂತೆ ಕರೆ ನೀಡಿದರು.

ಇಂದು ನಮ್ಮಜೀವನ ಶೈಲಿ ಬದಲಾವಣೆಯಿಂದ ಹಲವಾರು ಕಾಯಿಲೆಗಳಿಗೆ ತುತ್ತಾಗುತುದ್ದೆವೆ.ಇದನ್ನು ತಡೆಯಲಿಕೆ ಒಂದೆ ಮಾರ್ಗ ಅದು ಯೋಗ ಎಂದು ತಿಳಿಸಿದರು. ಸಮಿತಿ ಪ್ರಮುಖರಾದ ಅರುಣ ಅವರು ಮಾತನಾಡಿ ಯೋಗದಿಂದ ಸ್ವಸ್ಥ ಸಮಾಜ ನಿರಮಿಸಲು ಸಾಧ್ಯವಾಗುತದೆ ಎಂದು ತಿಳಿಸಿದ್ದರು.ಕಳೆದ ಎರಡು ವರುಷದಿಂದ ಯೋಗದ ಅನುಭವಿಗಳಾದ ವಿಜಯಕುಮಾರ ಶೆರಿಕಾರ ಅವರು ಉಚಿತವಾಗಿ ಯೋಗವನ್ನು ನಡೆಸಿಕೊಡುತಿದ್ದಾರೆ.ಈ ಯೋಗದಲ್ಲಿ ಸುಮಾರು 60 ಕ್ಕು ಹೆಚ್ಚಿನ ಜನರು ತಮ್ಮ ಹೆಸರನ್ನು ನೊಂದಾಯಿಸಿದ್ದಾರೆ ಎಂದು ಹೇಳಿದರು. ಇನ್ನೊರವ ಸಮಿತಿ ಮುಖಂಡರ ಮಾತನಾಡಿ ಆರೋಗ್ಯವೆ ಸಂಪತ್ತು ಹೇಳುವಂತೆ ಆರೋಗ್ಯ ಉತ್ತಮವಾಗಿದ್ದರೆ ಮಾತ್ರ ನೆಮ್ಮದಿ ಶಾಂತಿಯಿಂದ ಬದಕಲು ಸಾಧ್ಯ ,ಹಿಗಾಗಿ ಆರೋಗ್ಯ ಕಾಪಾಡಿಕೊಳ್ಳಲು ಪ್ರತಿಯೊಬ್ಬರಿಗು ಯೋಗ ಮುಖ್ಯವಾಗಿದೆ ಎಂದು ಹೇಳಿದ್ದರು.

ನಡೆದ ಅಂತರಾಷ್ಟ್ರೀಯ 12 ನೇ ಯೋಗ ದಿನಾಚಾರಣೆಯಲ್ಲಿ ಬಡಾವಣೆಯ ಹಾಗೂ ನಗರದ ವಿವಿಧ ಓಣೆಗಳಿಂದ ನೂರಾರರು ಜನರು ಬಿಳಿ ವಸ್ತ್ರ ಧರಿಸಿ ಆಗಮಿಸಿ ಯೋಗವನ್ನು ಮಾಡಿದ್ದರು.

ವೇದಿಕೆ ಮೇಲೆ ಮಹಾನಗರ ಪಾಲಿಕೆ ಸದಸ್ಯ ಶೇಶಿ ಹೊಸಳ್ಳಿ,ಅಕ್ಕಾ ಪಡೆ ರಾಜ್ಯ ಸಂಯೋಜಕಿ ಶೈನಿ ಪ್ರದೀಪ ,ಜಿ. ರೆಡ್ಡಿ ಸಮಾಜದ ಜಿಲ್ಲಾಧ್ಯಕ್ಷ ಶಂಕರ ರೆಡ್ಡಿ,ಉಪಾಧ್ಯಕ್ಷ ಗೋಪಾಲ ರೆಡ್ಡಿ,ಯೋಗ ಗುರು ವಿಜಯಕುಮಾರ ಶೇರಿಕಾರ,ಜೈ ಶ್ರೀ ರಾಮ ಯೋಗಾ ಸಮಿತಿ ಅಧ್ಯಕ್ಷ ಹೆಚ್ ,ಬೆಟ್ಟದ,ಗೌರವಾ ಅಧ್ಯಕ್ಷ ಬಿ.ದಿಗವಾಲ ಸೇರಿದಂತೆ ಮತಿತರರು ಇದ್ದರು.

# ತಂಬಾಕು ಸೇವನೆಯಿಂದ ಶ್ವಾಸಕೋಶ ದುರ್ಬಲ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**




ತಂಬಾಕು ಸೇವನೆಯಿಂದ ಶ್ವಾಸಕೋಶ ದುರ್ಬಲಗೊಳಿಸಿ ಕ್ಷಯ ರೋಗ ಬರುವ ಅಪಾಯವನ್ನು ದುಪ್ಪಟ್ಟು ಮಾಡುತ್ತದೆ. ಈ ಕುರಿತು ಜನಸಮುದಾಯದಲ್ಲಿ ವ್ಯಾಪಕ ಅರಿವು ಮೂಡಿಸಲು ರಾಜ್ಯ ಸರ್ಕಾರವು ವಿಭಾಗೀಯ ಮಟ್ಟದಲ್ಲಿ ವಿಶೇಷ ಅಭಿಯಾನವನ್ನು ತೀವ್ರಗೊಳಿಸಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿಭಾಗೀಯ ಕಚೇರಿಯ ಉಪನಿರ್ದೇಶಕ ಡಾ.ಶರಣಬಸಪ್ಪ ಗಣಜಲಖೇಡ್ ಹೇಳಿದರು.

ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ರಾಜ್ಯ ತಂಬಾಕು ನಿಯಂತ್ರಣ ಕೋಶ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಇವರುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಟಿಬಿ (ಕ್ಷಯ ರೋಗ) ಮತ್ತು ತಂಬಾಕು ವ್ಯಸನ ಮುಕ್ತ ಏಕೀಕರಣದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ತಂಬಾಕು ಸೇವನೆ ಆರೋಗ್ಯಕ್ಕೆ ಹಾನಿಕರ ಅದರಲ್ಲೂ ಟಿಬಿ ಬಂದಂತಹವರಿಗೆ ಆಪ್ತ ಸಮಾಲೋಚನೆ ಮಾಡುವ ಮೂಲಕ ತಂಬಾಕು ವ್ಯಸನ ಮುಕ್ತ ಸಮಾಜ ಮಾಡಬಹುದಾಗಿದೆ. ಅಪಾಯದ ಕಡಿತಗೊಳಿಸುವಿಕೆ ಜೊತೆಗೆ ಕ್ಷಯ ರೋಗಿಗಳಲ್ಲಿ ತಂಬಾಕು ಬಳಕೆಯನ್ನು ಸಂಪೂರ್ಣವಾಗಿ ನಿಲ್ಲಿಸುವ ಮೂಲಕ ಚಿಕಿತ್ಸೆಯ ಯಶಸ್ಸಿನ ಪ್ರಮಾಣವನ್ನು ಹೆಚ್ಚಿಸುವುದು ಅತ್ಯಗತ್ಯವಾಗಿದೆ ಎಂದರು.

ಆಸ್ಪತ್ರೆಗೆ ಬರುವ ಪ್ರತಿಯೊಬ್ಬ ಟಿಬಿ ರೋಗಿಯನ್ನು ತಂಬಾಕು ವ್ಯಸನದ ಹಿನ್ನೆಲೆಗಾಗಿ ಕಡ್ಡಾಯವಾಗಿ ತಪಾಸಣೆ ಮಾಡುವುದು. ತಂಬಾಕು ಸೇವನೆಯಿಂದ ಕ್ಷಯ ರೋಗವು ಹೇಗೆ ಉಲ್ಬಣಗೊಳ್ಳುತ್ತದೆ ಮತ್ತು ಶೇ. 40 ರಷ್ಟು ಟಿಬಿ ಸಾವುಗಳಿಗೆ ತಂಬಾಕು ಹೇಗೆ ಕಾರಣವಾಗುತ್ತದೆ ಎಂಬುದರ ಬಗ್ಗೆ ಜಾಗೃತಿ ಮೂಡಿಸುವುದು ಆರೋಗ್ಯ ಕಾರ್ಯಕರ್ತರ ಜವಾಬ್ದಾರಿಯಾಗಿದೆ ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿಭಾಗೀಯ ಕಚೇರಿಯ ಉಪನಿರ್ದೇಶಕ ಡಾ.ಅಂಬಾರಾಯ್ ರುದ್ರವಾಡಿ ಅವರು ಮಾತನಾಡಿ,

ಟಿಬಿ (ಕ್ಷಯ ರೋಗ) ಮತ್ತು ತಂಬಾಕು ವ್ಯಸನ ಮುಕ್ತ ಜಾಗೃತಿ ಕಾರ್ಯಕ್ರಮವು ಸಾರ್ವಜನಿಕರ ಆರೋಗ್ಯವನ್ನು ಸುಧಾರಿಸಲು ಮತ್ತು ಮಾರಕ ಕಾಯಿಲೆಗಳಿಂದ ಜನರನ್ನು ರಕ್ಷಿಸಲು ಹಮ್ಮಿಕೊಳ್ಳಲಾದ ಪ್ರಮುಖ ಅಭಿಯಾನವಾಗಿದೆ ಎಂದರು.

ತಂಬಾಕು ಸೇವನೆಯು ಶ್ವಾಸಕೋಶವನ್ನು ದುರ್ಬಲಗೊಳಿಸಿ, ಟಿಬಿ ರೋಗ ಬರುವ ಸಾಧ್ಯತೆಯನ್ನು ಹೆಚ್ಚಿಸುವುದರಿಂದ ಈ ಎರಡೂ ವಿಷಯಗಳ ಬಗ್ಗೆ ಒಟ್ಟಿಗೆ ಜಾಗೃತಿ ಮೂಡಿಸುವುದು ಅತ್ಯಗತ್ಯವಾಗಿದೆ.

ಟಿಬಿ ಮತ್ತು ತಂಬಾಕು ವ್ಯಸನ ಮುಕ್ತ ಜಾಗೃತಿ ಹಾಗೂ ಪ್ರಚಾರ ಅಭಿಯಾನವನ್ನು ಗರಿಷ್ಠ ಮಟ್ಟದ ಪ್ರಭಾವ ಬೀರಲು ಸಾಂಪ್ರದಾಯಿಕ ಮಾಧ್ಯಮಗಳ ಜೊತೆಗೆ ಡಿಜಿಟಲ್ ಮಾಧ್ಯಮ ಸಮರ್ಪಕ ಬಳಕೆ ಮತ್ತು ಶಾಲಾ–ಕಾಲೇಜುಗಳಲ್ಲಿ ವಿಶೇಷ ಜಾಗೃತಿ ಹಾಗೂ ಸಮುದಾಯ ಮಟ್ಟದ ಪ್ರಚಾರ ಚಟುವಟಿಕೆಗಳು ಹಮ್ಮಿಕೊಂಡಲ್ಲಿ ಇದರಲ್ಲಿ ಯಶಸ್ಸು ಸಾಧ್ಯ ಎಂದರು. ಕಾರ್ಯಕ್ರಮದಲ್ಲಿ ಡಬ್ಲ್ಯೂ.ಎಚ್.ಓ ಸಲಹೆಗಾರರು ಹಾಗೂ ಸರ್ವಲೆನ್ಸ್ ಮೆಡಿಕಲ್ ಆಫೀಸರ್ ಡಾ. ಅನಿಲಕುಮಾರ ತಾಳಿಕೋಟಿ, ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ್, ಜಿಲ್ಲಾ ನಿರ್ಮೂಲನಾಧಿಕಾರಿಗಳಾದ ಡಾ. ಚಂದ್ರಕಾಂತ್ ನರಿಬೋಳ,

ಡಾ.ಅನಿಲ ಚಿಂತಾಮಣಿ, ವಿಟಲ್ ಸ್ಟಾಟಜೀಸ್' (ಗಿುಣಚಿಟ ಖಣಡಿಚಿಣಜರುಜ) ಸಂಸ್ಥೆಯ ರಾಜ್ಯ ಯೋಜನಾ ಅಧಿಕಾರಿ ರಾಜೇಶ್ ಭಾರತೀಯ ಹಾಜರಿದ್ದರು.

ಕಾರ್ಯಗಾರದಲ್ಲಿ ನೂರಾರು ಸಂಖ್ಯೆಯಲ್ಲಿ ವಿಭಾಗದ ಬೀದರ, ಬಳ್ಳಾರಿ, ರಾಯಚೂರು, ಯಾದಗಿರಿ, ಕೊಪ್ಪಳ, ವಿಜಯನಗರ, ಕಲಬುರಗಿ ಜಿಲ್ಲೆಯ ಎಲ್ಲಾ ಎನ್.ಟಿ.ಇ.ಪಿ ಕಾರ್ಯಕ್ರಮದ ಡಿಟಿಓ, ಡಿಪಿಎಂ, ಡಿಪಿಎಸ್, ಎಸ್.ಟಿ.ಎಸ್ ಮತ್ತು ಎನ್.ಟಿ.ಸಿ.ಪಿ ಕಾರ್ಯಕ್ರಮದ ಟಿ.ಸಿ.ಸಿ ಆಪ್ತ ಸಮಾಲೋಚಕರು, ಅಧಿಕಾರಿಗಳು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಟಿ.ಸಿ.ಸಿ ಸ್ಯಾಟಲೈಟ್ ಪೋಸ್ಟರ್ ಬಿಡುಗಡೆಗೊಳಿಸಲಾಯಿತು. ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಡಾ. ರಾಕೇಶ್ ಕಾಂಬಳೆ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಭಾಗೀಯ ತಂಬಾಕು ನಿಯಂತ್ರಣ ಘಟಕದ ಕಾರ್ಯಕ್ರಮ ಸಂಯೋಜಕ ಮಹಾಂತೇಶ್ ಉಳ್ಳಾಗಡಿ ನಿರೂಪಿಸಿದರು. ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಲಹೆಗಾರರಾದ ಸುಜಾತಾ ಪಾಟೀಲ ಸ್ವಾಗತಿಸಿ ವಂದಿಸಿದರು.

# ಕರ್ನಾಟಕ ರಾಜ್ಯ ಎಸ್ಡಿಎಂಸಿ ಸಮನ್ವಯ ಕೇಂದ್ರ ವೇದಿಕೆ ಕಾರ್ಯ ವೈಖರಿಗೆ ಮೆಚ್ಚುಗೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಕರ್ನಾಟಕ ರಾಜ್ಯ ಎಸ್ಡಿಎಂಸಿ ಸಮನ್ವಯ ಕೇಂದ್ರ ವೇದಿಕೆಯ ರಾಜ್ಯ ಸಮಿತಿಯ ನಿರ್ದೇಶಕರು ಜೂ.24 ರಂದು ಬೆಂಗಳೂರಿನ ವಿಧಾನಸೌಧದ ಬಳಿ ಇರುವ ಬಹುಮಹಡಿಗಳ ಕಟ್ಟಡದಲ್ಲಿ ಸಭೆ ಸೇರಿ, ರಾಜ್ಯ ಎಸ್.ಡಿ.ಎಂ.ಸಿ ವೇದಿಕೆ (ರಿ) ರಾಜ್ಯ ನಿಯೋಗವು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀಮತಿ ರಶ್ಮಿ ಮಹೇಶ್ ಅವರನ್ನು ಭೇಟಿ ಮಾಡಿ, ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ, ಮಕ್ಕಳ ಕಲಿಕೆಗೆ ಪೂರಕ ವಾತಾವರಣ ನಿರ್ಮಾಣ ಹಾಗೂ ಶಿಕ್ಷಣ ಇಲಾಖೆಯಲ್ಲಿ ಅಗತ್ಯ ಆಡಳಿತಾತ್ಮಕ ಸುಧಾರಣೆಗಳನ್ನು ಕೈಗೊಳ್ಳುವ ಕುರಿತು ವಿಸ್ತೃತ ಚರ್ಚೆ ನಡೆಸಿತು.ರಾಜ್ಯದ ಸರ್ಕಾರಿ ಶಾಲೆಗಳ ಪ್ರಸ್ತುತ ಸ್ಥಿತಿ, ಮಕ್ಕಳ ಕಲಿಕಾ ಮಟ್ಟ, ಶಿಕ್ಷಕರ ಮೇಲಿನ ಬೋಧಕೇತರ ಕೆಲಸಗಳ ಒತ್ತಡ, ಪೂರ್ವ ಪ್ರಾಥಮಿಕ ಶಿಕ್ಷಣ, ಶಾಲಾ ಮೂಲಸೌಕರ್ಯ, ದೈಹಿಕ ಶಿಕ್ಷಣ, ವೃತ್ತಿ ಶಿಕ್ಷಣ ಹಾಗೂ ಶಾಲಾ ಆಡಳಿತಕ್ಕೆ ಸಂಬಂಧಿಸಿದಂತೆ ಒಟ್ಟು 33 ಪ್ರಮುಖ ಅಂಶಗಳ ಮನವಿಯನ್ನು ಸಲ್ಲಿಸಲಾಯಿತು.

ಮುಖ್ಯವಾಗಿ ಶಿಕ್ಷಕರನ್ನು BLO ಹಾಗೂ ಇತರೆ ಬೋಧಕೇತರ ಕರ್ತವ್ಯಗಳಿಂದ ಮುಕ್ತಗೊಳಿಸುವುದು, ಇಲಾಖಾ ಅಧಿಕಾರಿಗಳಿಂದ ಶಾಲಾ ಮಟ್ಟದಲ್ಲಿ ಕಲಿಕಾ ಗುಣಮಟ್ಟದ ಪರಿಣಾಮಕಾರಿ ಮೇಲ್ವಿಚಾರಣೆ, ಇಅಅಇ ಹಾಗೂ ಅತಿಥಿ ಶಿಕ್ಷಕರ ನೇಮಕಾತಿಯಲ್ಲಿ ಎಸ್ಡಿಎಂಸಿ ಪಾತ್ರವನ್ನು ಬಲಪಡಿಸುವುದು, ಪೂರ್ವ ಪ್ರಾಥಮಿಕ ಶಿಕ್ಷಕರು ಮತ್ತು ಆಯಾಗಳಿಗೆ ನೇರವಾಗಿ ಗೌರವಧನ ಜಮಾ ಮಾಡುವುದು, ಏಕಲ ಶಾಲೆಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸುವುದು, ದೈಹಿಕ ಶಿಕ್ಷಣ ಶಿಕ್ಷಕರ ಕೊರತೆಯನ್ನು ನಿವಾರಿಸುವುದು ಹಾಗೂ NSQF ಅಡಿಯಲ್ಲಿ ಸ್ಥಗಿತಗೊಂಡಿರುವ Retail, Beauty & Wellness ಮತ್ತು Apparels ವೃತ್ತಿ ಶಿಕ್ಷಣ ಕೋರ್ಸ್‌ಗಳನ್ನು ಪುನರಾರಂಭಿಸುವಂತೆ ಒತ್ತಾಯಿಸಲಾಯಿತು.

ಶಾಲೆಗಳಲ್ಲಿ ಅಳಖಿಗಿ ಅಳವಡಿಕೆ, ಅಕ್ಷರ ದಾಸೋಹ ಯೋಜನೆಯ ಸಂಪೂರ್ಣ ಜವಾಬ್ದಾರಿಯನ್ನು ಎಸ್‌ಡಿಎಂಸಿಗೆ ನೀಡುವುದು, BEO ಹಾಗೂ DDPI ಕಚೇರಿಗಳ ಆಡಳಿತಾತ್ಮಕ ಸುಧಾರಣೆ, FLN ಕಾರ್ಯಕ್ರಮದ ಪರಿಣಾಮಕಾರಿ ಅನುಷ್ಠಾನ, ಪಠ್ಯಪುಸ್ತಕಗಳ ಸಮಯೋಚಿತ ವಿತರಣೆ ಸೇರಿದಂತೆ ಹಲವು ವಿಷಯಗಳ ಬಗ್ಗೆ ಗಮನ ಸೆಳೆಯಲಾಯಿತು.

ಇದಲ್ಲದೆ, SGF (School Games Federation) ಸ್ಪರ್ಧಾ ಪಟ್ಟಿಯಲ್ಲಿ ಇಲ್ಲದಿದ್ದರೂ ಕಳೆದ ಹಲವು ವರ್ಷಗಳಿಂದ ಯಶಸ್ವಿಯಾಗಿ ಆಯೋಜಿಸಲಾಗುತ್ತಿದ್ದ ಥ್ರೋ ಬಾಲ್, ಬಾಲ್ ಬ್ಯಾಡ್ಮಿಂಟನ್ ಹಾಗೂ ಜಂಪ್ ರೋಪ್ ಕ್ರೀಡೆಗಳನ್ನು ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿಯೂ ಮುಂದುವರಿಸಲು ಅಗತ್ಯ ನಿರ್ದೇಶನ ನೀಡುವಂತೆ ಮನವಿ ಮಾಡಲಾಯಿತು.

ಸಭೆಯಲ್ಲಿ ಸಲ್ಲಿಸಲಾದ ಅನೇಕ ವಿಷಯಗಳು ವಿದ್ಯಾರ್ಥಿಗಳ ಶೈಕ್ಷಣಿಕ ಹಿತಾಸಕ್ತಿ ಮತ್ತು ಸರ್ಕಾರಿ ಶಾಲೆಗಳ ಬಲವರ್ಧನೆಗೆ ನೇರವಾಗಿ ಸಂಬಂಧಿಸಿದ್ದು, ತಕ್ಷಣ ಜಾರಿಗೊಳಿಸಬಹುದಾದ ವಿಷಯಗಳನ್ನು ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿಯೇ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳುವ ಬಗ್ಗೆ ಪ್ರಧಾನ ಕಾರ್ಯದರ್ಶಿಗಳು ಸಕಾರಾತ್ಮಕ ಸ್ಪಂದನೆ ನೀಡಿದರು. ಈ ವೇಳೆ ನಿಯೋಗದಲ್ಲಿ ರಾಜ್ಯ ಸಂಚಾಲಕರಾದ ಮೊಯ್ದಿನ್ ಕುಟ್ಟಿ, ರಾಜ್ಯ ನಿರ್ದೇಶಕರಾದ ಶರಣಬಸಪ್ಪ. ಕೆ.ದಾನಕೈ ಕೊಪ್ಪಳ, ಉಮ್ಮರ್ ಟೆಕ್ನಿಕ್, ಜಿ.ಎಂ. ಮಹಮ್ಮದ್ ಸಣ್ಣೇಗೌಡ, ಆಶಾ, ಹೆನ್ರಿ ಏಸುದಾಸ್, ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷರಾದ ವೆಂಕಟೇಶ್ ಎಸ್.ಎಲ್.ವಿ., ಪ್ರಧಾನ ಕಾರ್ಯದರ್ಶಿ ಯಶೋಧ, ಬೆಂಗಳೂರು ಉತ್ತರ ನಿರ್ದೇಶಕರಾದ ಗೀತಾ ಅತ್ತಿಬೆಲೆ, ಗದಗ ನಿರ್ದೇಶಕರಾದ ಹೇಮಂತ್ ಇಟಗಿ, ದಾವಣಗೆರೆಯ ರೂಪ, ರೇಖಾ, ಶಾಕಿರಸಾಗರ, ಶಿವಮೊಗ್ಗದ ನಗೀನ ಹಾಗೂ ಶರೀಫ್ PE½Ad ಸೇರಿದಂತೆ ವಿವಿಧ ಜಿಲ್ಲೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಅಂಕೋಲಾದಲ್ಲಿ ಮಳೆ ಬಿಸಿಲಿನಾಟದಲ್ಲಿ ಹೈರಾಣಾಗುತ್ತಿರುವ ರೈತರು



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಈ ಬಾರಿ ಮಳೆ ಆರಂಭದಲ್ಲಿಯೇ ರೈತರಿಗೆ ಆತಂಕಗೊಳಿಸಿದೆ.ಎರಡು ದಿನ ಮಳೆ ಸುರಿದರೆ ನಾಲ್ಕು ದಿನ ವಿರಾಮ ನೀಡುತ್ತದೆ.ಹೀಗಾಗಿ ರೈತರು ಸಹಜವಾಗಿಯೇ ಏನು ಮಾಡಬೇಕೆಂದು ತೋಚದಂತಾಗಿದ್ದಾರೆ. ಇಷ್ಟೊತ್ತಿಗಾಗಲೇ ಕೃಷಿ ಭೂಮಿಯಲ್ಲಿ ಭತ್ತದ ಸಸಿ ಮೊಳಕೆಯೊಡೆದು ಎದ್ದು ಬರುತ್ತಿತ್ತು. ಆದರೆ ಮುಂಗಾರು ಆರಂಭದಲ್ಲಿಯೇ ಮುಗ್ಗರಿಸಿದ ಪರಿಣಾಮ ರೈತರು ಏನು ಮಾಡಬೇಕೆಂದು ತಿಳಿಯದಂತಾಗಿದೆ.ವಿಶೇಷವಾಗಿ ಪೂಜಗೇರಿ,ತೆಂಕಣಕೇರಿ, ಬೊಬ್ರುವಾಡ,ಹೊನ್ನೆಬೈಲ್,ವಾಸರಕುದ್ರಿಗೆ,ಸಗಡಗೇರಿ ಹೀಗೆ ವಿವಿಧ ಭಾಗಗಳಲ್ಲಿ ರೈತರು ಭತ್ತವನ್ನು ಮುಂಗಾರಿನಲ್ಲಿ ಬೆಳೆಯುತ್ತಿದ್ದರು. ಆದರೆ ಈ ಬಾರಿ ಮುಂಗಾರು ರೈತರ ಜೊತೆಗೆ ಆಟವಾಡಿದಂತಿದೆ. ಹೀಗಾಗಿ ಎತ್ತರದ ಪ್ರದೇಶದ ಗದ್ದೆಗಳಲ್ಲಿ ನೀರು ನಿಂತಿಲ್ಲ. ಇನ್ನು ತಗ್ಗು ಪ್ರದೇಶದಲ್ಲಿ ಮಾತ್ರ ಕೆಲವರು ಉಳುಮೆ ಮಾಡಿ ಕೃಷಿ ಕಾರ್ಯದಲ್ಲಿ ತೊಡಗಿದಾರೆ.ಶನಿವಾರ ತೀರಾ ಬಿಸಿಲಿನ ವಾತಾವರಣ ಇರುವುದರಿಂದ ಇದು ಇನ್ನೊಂದೆರಡು ದಿನ ಮುಂದುವರೆದರೆ ತಗ್ಗು ಪ್ರದೇಶದಲ್ಲಿನ ಭತ್ತದ ಗದ್ದೆಗಳಿಗೆ ನೀರಿಲ್ಲದಂತಾಗುತ್ತದೆ. ಪ್ರತಿವರ್ಷ ರೈತರು ಹವಾಮಾನ ವೈಪರಿತ್ಯಕ್ಕೆ ಒಳಗಾಗಿ ನಷ್ಟವನ್ನೇ ಅನುಭವಿಸುತ್ತ ಬಂದಿದ್ದಾರೆ.ಆದರೂ ಕೂಡ ಸ್ವಂತ ಬಳಕೆಗಾದರೂ ಆರೋಗ್ಯದ ದೃಷ್ಟಿಯಿಂದ ರೈತರು ಕೃಷಿ ಕಾಯಕವನ್ನು ಮುಂದುವರೆಸಿಕೊಂಡು ಬಂದಿದ್ದಾರೆ. ಹಾಗೇ ನೋಡಿದರೆ ವರ್ಷದಿಂದ ವರ್ಷಕ್ಕೆ ಕೃಷಿ ಮಾಡುವ ಪ್ರಮಾಣ ಇಳಿಮುಖವಾಗುತ್ತಲೇ ಇದೆ. ಅತಿವೃಷ್ಠಿ, ಅನಾವೃಷ್ಠಿಯಿಂದಾಗಿ ರೈತರು ಸದಾ ನಷ್ಟವನ್ನು ಅನುಭವಿಸುತ್ತಲೇ ಬಂದಿದ್ದು ಕೆಲವರು ಹಂತ ಹಂತವಾಗಿ ತಮ್ಮ ಭತ್ತದ ಕೃಷಿಭೂಮಿಗೆ ಮಣ್ಣು ಹಾಕಿದ್ದು ತೋಟವನ್ನಾಗಿ ಪರಿವರ್ತಿಸುತ್ತಿದ್ದಾರೆ. ಇನ್ನು ಕೆಲವು ಕಡೆ ಏನು ಮಾಡಲಾಗದೇ ಬಂಜರು ಬಿಡಲಾಗಿದೆ. ದಶಕಗಳ ಹಿಂದೆ ಮಳೆಗಾಲವೆಂದರೆ ಮುಂಜಾಗ್ರತಾ ಕ್ರಮವನ್ನು ವಹಿಸುತ್ತಿದ್ದರು. ಆದರೆ ಇತ್ತೀಚಿಗಿನ ವರ್ಷಗಳಲ್ಲಿ ಮಳೆ ವಿನಾಶಕ್ಕೆ ಕಾರಣವಾಗುತ್ತಿದೆಯೇ ಹೊರತು ಕೃಷಿ ಕಾರ್ಯಕ್ಕಲ್ಲ ಎನ್ನುವಂತಾಗಿದೆ. ಈ ಎಲ್ಲ ಹಿನ್ನೆಲೆಯಲ್ಲಿ ರೈತರು ಮಳೆಯನ್ನು ನಂಬಿ ಕೃಷಿ ಮಾಡದಂತಾಗಿದೆ. ಕೆಲವೊಮ್ಮೆ ಅನಿವಾರ್ಯವಾಗಿ ಭತ್ತದ ಸಸಿಗಳಿಗೆ ಪಂಪ್ ಮೂಲಕ ನೀರನ್ನು ಹಾಯಿಸಲಾಗುತ್ತದೆ. ಅಷ್ಟರಮಟ್ಟಿಗೆ ಮಳೆ ರೈತರ ಜತೆ ಚೆಲ್ಲಾಟವಾಡುತ್ತಿದೆ ಎನ್ನುವಂತಾಗಿದೆ.

## ಪೋಲಿಯೊ ಮುಕ್ತ ಜಿಲ್ಲೆಗೆ ಸಹಕರಿಸಿ : ಡಿ ಹೆಚ್ ನಾಯ್ಕ್ ಕರೆ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)



ಜೂ.27: ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನದ ಅಂಗವಾಗಿ ಜಿಲ್ಲಾಡಳಿತ, ರೋಟರಿ ಕ್ಲಬ್, ಭಾರತೀಯ ವೈದ್ಯಕೀಯ ಸಂಘ, ಮಲ್ಲಿಗೆ ಪ್ಯಾರಾ ಮೆಡಿಕಲ್ ಕಾಲೇಜು ಮತ್ತು ತುಂಗಭದ್ರ ಸ್ಕೂಲ್ ಆಫ್ ನರ್ಸಿಂಗ್, ದಿಪಾಲಿ ಸ್ಕೂಲ್ ಆಫ್ ನರ್ಸಿಂಗ್, ಟಿ.ಎಂ.ಇ.ಸೋಸೈಟಿ ಆಫ್ ನರ್ಸಿಂಗ್ ಇವರ ಸಹಯೋಗದಲ್ಲಿ ಶನಿವಾರ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಆವರಣದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೋ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ಡಾ.ಎಲ್.ಆರ್.ಶಂಕರ್ ನಾಯ್ಕ್ ಚಾಲನೆ ನೀಡಿದರು.

ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜೂನ್ 28ರ ಭಾನುವಾರದಂದು ಹಮ್ಮಿಕೊಳ್ಳಲಾಗಿರುವ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದಲ್ಲಿ 0 ಇಂದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಲಸಿಕೆ ಹಾಕಿಸುವಂತೆ ಮನವಿ ಮಾಡಿದರು. ನೆರೆ ಜಿಲ್ಲೆ, ರಾಜ್ಯಗಳಿಂದ ಬಂದಿರುವ ಪ್ರಯಾಣಿಕರು ಹಾಗೂ ಸುತ್ತಮುತ್ತಲಿನ ನಿವಾಸಿಗಳು ತಮ್ಮ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸುವಂತೆ ತಿಳಿಸಿದರು.

ನೂತನ ಕ್ಯೂಆರ್ ಕೋಡ್ ವ್ಯವಸ್ಥೆ: ಸಾರ್ವಜನಿಕರ ಅನುಕೂಲಕ್ಕಾಗಿ ಈ ಬಾರಿ ನೂತನ ತಂತ್ರಜ್ಞಾನವನ್ನು ಪರಿಚಯಿಸಲಾಗಿದ್ದು, ಇಲಾಖೆ ವತಿಯಿಂದ ನೀಡಲಾಗಿರುವ ಕ್ಯೂಆರ್ ಕೋಡ್ ಅನ್ನು ಸ್ಕ್ಯಾನ್ ಮಾಡುವುದರ ಮೂಲಕ ಸಾರ್ವಜನಿಕರು ತಮ್ಮ ಹತ್ತಿರದ ಪೋಲಿಯೋ ಲಸಿಕಾ ಕೇಂದ್ರವನ್ನು ಸುಲಭವಾಗಿ ಪತ್ತೆ ಹಚ್ಚಬಹುದಾಗಿದೆ. ಇದರಿಂದ ಹತ್ತಿರದ ಪೋಲಿಯೋ ಲಸಿಕಾ ಕೇಂದ್ರಕ್ಕೆ ಭೇಟಿ ನೀಡಿ ಪೋಲಿಯೋ ಲಸಿಕೆ ಹಾಕಿಸಿಕೊಳ್ಳಬಹುದು. ದೇಶವನ್ನು ಸಂಪೂರ್ಣ ಪೋಲಿಯೋ ಮುಕ್ತವಾಗಿಸಲು ಸಾರ್ವಜನಿಕರು ಕೈಜೋಡಿಸಬೇಕು ಎಂದರು.

ಜಾಥಾದಲ್ಲಿ ಪಾಲ್ಗೊಂಡ ನರ್ಸಿಂಗ್ ವಿದ್ಯಾರ್ಥಿಗಳು ಲಸಿಕಾ ಅಭಿಯಾನದ ಬಿತ್ತಿಪತ್ರಗಳನ್ನು ಹಿಡಿದು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ, ಘೋಷಣೆ ಕೂಗುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು. ಜಾಗೃತಿ ಜಾಥ ಕಾರ್ಯಕ್ರಮವು ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆ (ಹಳೇ ಆಸ್ಪತ್ರೆ ಆವರಣ) ಆರಂಭವಾಗಿ ನಂತರ ಪುಣ್ಯಮೂರ್ತಿ ಸರ್ಕಲ್, ಬಸ್ ನಿಲ್ದಾಣ, ಪುನೀತ್ ರಾಜ್ ಕುಮಾರ್ ಸರ್ಕಲ್, ಅಂಬೇಡ್ಕರ್ ಸರ್ಕಲ್, ರಾಮಾ ಟಾಕೀಸ್ ಮಾರ್ಗವಾಗಿ ಚಲಿಸಿ ದೊಡ್ಡ ಮಸೀದಿ ಮಾರ್ಗದಿಂದ ಪುನಃ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಆವರಣದಲ್ಲಿ ಮುಕ್ತಾಯಗೊಂಡಿತು.

ಈ ವೇಳೆ ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿ ಡಾ. ಜಂಬಯ್ಯ, ಆರೋಗ್ಯ ನಿರೀಕ್ಷಣಾಧಿಕಾರಿ ಧರ್ಮನಗೌಡ, ಜಿಲ್ಲಾ ಉಪ ಆರೋಗ್ಯ ಶಿಕ್ಷಣಾಧಿಕಾರಿ ಎಂ.ಪಿ.ದೊಡ್ಡಮನಿ, ತಾಲ್ಲೂಕು ವೈದ್ಯಾಧಿಕಾರಿ ಡಾ. ವಿನೋದ್ ಕುಮಾರ್ ಸೇರಿದಂತೆ ಆರೋಗ್ಯ ಇಲಾಖೆ ಸಿಬ್ಬಂದಿ, ವಿವಿಧ ನರ್ಸಿಂಗ್ ಕಾಲೇಜ್ ವಿದ್ಯಾರ್ಥಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು ಇದ್ದರು.

## ಪಲ್ಸ್ ಪೋಲಿಯೊ ಜಾಗೃತಿ ರ್ಯಾಲಿ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಜೂನ್ 28ಕ್ಕೆ ಪಲ್ಸ್ ಪೋಲಿಯೋ ದಿನಾಚರಣೆ ಅಂಗವಾಗಿ ತಾಲೂಕಿನ ಕೋಟಗ್ಯಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶನಿವಾರ ವಿದ್ಯಾರ್ಥಿಗಳು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿಯಿಂದ ಪಲ್ಸ್ ಪೋಲಿಯೋ ಕುರಿತು ಜಾಗೃತಿ ರ್ಯಾಲಿ ಮಾಡಲಾಯಿತು.ಜೂನ್ 28ರ ಭಾನುವಾರದಂದು ದೇಶಾದ್ಯಂತ ಹಮ್ಮಿಕೊಂಡಿರುವ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನದ ಯಶಸ್ಸಿಗಾಗಿ ಈ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಶಾಲಾ ಆವರಣದಿಂದ ಆರಂಭಗೊಂಡ ರ್ಯಾಲಿಯು ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿತು. ವಿದ್ಯಾರ್ಥಿಗಳು ಪೋಲಿಯೋ ಮುಕ್ತ ಸಮಾಜ ನಿರ್ಮಾಣದ ಕುರಿತು ಜಾಗೃತಿ ಪೋಸ್ಟರ್‌ಗಳನ್ನು ಪ್ರದರ್ಶಿಸಿ, ಘೋಷಣೆಗಳನ್ನು ಕೂಗುವ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು. 5 ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ತಪ್ಪದೇ ಪೋಲಿಯೋ ಹನಿ ಹಾಕಿಸುವಂತೆ ಪೋಷಕರಲ್ಲಿ ಮನವಿ ಮಾಡಲಾಯಿತು.ಈ ಸಂದರ್ಭದಲ್ಲಿ ತೋರಣ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಹಾಗೂ ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಶಾಲೆಯ ಮುಖ್ಯಗುರುಗಳು, ಶಿಕ್ಷಕ ವೃಂದ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು

## ಪಿ.ಎಂ.ಹೈಸ್ಕೂಲ್‌ನಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಕರ್ನಾಟಕದ ಇತಿಹಾಸದಲ್ಲಿ ಅಜರಾಮರ ಹೆಸರು ನಾಡಪ್ರಭು ಕೆಂಪೇಗೌಡರದು. 16ನೇ ಶತಮಾನದಲ್ಲಿ ವಿಜಯನಗರ ಸಾಮ್ರಾಜ್ಯದ ಸಾಮಂತನಾಗಿ ಯಲಹಂಕ ನಾಡನ್ನು ಆಳಿದ ಇವರು, ಇಂದು ವಿಶ್ವವಿಖ್ಯಾತವಾಗಿರುವ ಬೆಂಗಳೂರು ಮಹಾನಗರದ ನಿರ್ಮಾತೃ. ಕೇವಲ ಪಾಳೇಗಾರನಾಗಿ ಉಳಿಯದೆ, ದೂರದೃಷ್ಟಿಯ ಆಡಳಿತಗಾರನಾಗಿ, ಸಮಾಜ ಸುಧಾರಕನಾಗಿ, ಜನಾನುರಾಗಿ ನಾಯಕನಾಗಿ ಕೆಂಪೇಗೌಡರು ಇತಿಹಾಸದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ ಎಂದು ಪಿ. ಎಮ್. ಹೈಸ್ಕೂಲ್ ಮುಖ್ಯಾಧ್ಯಾಪಕ ಚಂದ್ರಶೇಖರ ಕಡೇಮನಿ ಹೇಳಿದರು.ಪಟ್ಟಣದ ಪಿ.ಎಂ.ಹೈಸ್ಕೂಲ್ ರೈತಭವನದಲ್ಲಿ ಹಮ್ಮಿಕೊಂಡ ನಾಡಪ್ರಭು ಕೆಂಪೇಗೌಡ ಅವರ ಜನ್ಮದಿನಾಚರಣೆಯ ನಿಮಿತ್ತ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಅವರು ಮಾತನಾಡಿದರು. ಸಂಘಟಕ, ಶಿಕ್ಷಕ ಜಿ.ಆರ್.ತಾಂಡೇಲ ಮಾತನಾಡಿ, ಒಂದು ರಾಜ್ಯ ಹಾಗೂ ದೇಶ ಹೇಗೆ ಸಮೃದ್ಧಿಯಾಗಬೇಕು ಎನ್ನುವುದನ್ನು ತೋರಿಸಿಕೊಟ್ಟವರು ಕೆಂಪೇಗೌಡರು. ತೀರಾ ಮುಂದಾಲೋಚನೆ ಮಾಡಿ ಮುಂದಿನ ಜನಾಂಗಕ್ಕೆ ಯಾವುದೇ ತೊಂದರೆಯಾಗದಂತೆ ಅವರ ಒಳಿತಿಗಾಗಿ ಸಾಕಷ್ಟು ಯೋಜನೆಗಳನ್ನು ಹಮ್ಮಿಕೊಂಡು ಯಶಸ್ವಿಯಾದವರು. ಇಂದು ಬೆಂಗಳೂರು ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಬೆಳೆದಿದೆ ಎಂದರೆ ಅದಕ್ಕೆ ಕಾರಣ ಕೆಂಪೇಗೌಡರು ಎಂದರು. ಈ ಸಂದರ್ಭದಲ್ಲಿ ಶಿಕ್ಷಕರಾದ ನಯನಾ ನಾಯಕ, ಮಗದುಮ್ ಅಲಗೋಡಿ, ರಾಘವೇಂದ್ರ ಮಹಾಲೆ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಮೇಧಶ್ರೀ ಸಂಗಡಿಗರು ಪ್ರಾರ್ಥಿಸಿದರು. ಶಿಕ್ಷಕ ಜಿ.ಎಸ್.ನಾಯ್ಕ ವಂದಿಸಿದರು.



ಗುರುಮಠಕಲ್ :ತಾಲೂಕು ಚಂಡರಿಕಿ ಗ್ರಾಮದ ಶತಮಾನ ಕಂಡ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯ ಹಿರಿಯ ಮುಖ್ಯಗುರು ಭೀಮಣ್ಣ ಗೌಡರ ವಯೋ ನಿವೃತ್ತಿ ಸಮಾರಂಭವು ಶನಿವಾರ ಶಾಲಾ ಆವರಣದಲ್ಲಿ ಗೌರವಯುತವಾಗಿ ನಡೆಯಿತು.ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕರು, ಹಳೆಯ ವಿದ್ಯಾರ್ಥಿಗಳು, ಗ್ರಾಮಸ್ಥರು, ಎಸ್‌ಡಿಎಂಸಿ ಸದಸ್ಯರು ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳು ಭಾಗವಹಿಸಿ, ಭೀಮಣ್ಣ ಗೌಡರವರು ಶಿಕ್ಷಣ ಕ್ಷೇತ್ರಕ್ಕೆ ಸಲ್ಲಿಸಿದ ಸೇವೆಯನ್ನು ಸ್ಮರಿಸಿದರು.

## ಬೋಳೆ ಶಾಲಾ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿ ಹಾಗೂ ಸಿಹಿ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ವಂದಿಗೆ ಗ್ರಾಮ ಪಂಚಾಯತ್ ವ್ಯಾಪ್ತಿಯ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಬೋಳೆಯ ವಿದ್ಯಾರ್ಥಿಗಳಿಗೆ ಶಾಲೆಯ ಹಳೆಯ ವಿದ್ಯಾರ್ಥಿ ಅಂಕೋಲಾ ತಾಲೂಕು ಕ್ಷೇತ್ರಶಿಕ್ಷಣಾಧಿಗಳ ಕಾರ್ಯಾಲಯದ ದೈಹಿಕ ಶಿಕ್ಷಣ ಪರಿವೀಕ್ಷಕರಾದ ಮಂಜುನಾಥ ಎಮ್ ನಾಯಕರವರು ನೀಡಿದ ಹಣದಲ್ಲಿ ಶಾಲೆಯ ಎಲ್ಲ ವಿದ್ಯಾರ್ಥಿಗಳಿಗೆ ಎರಡು ನೋಟ್ ಬುಕ್ ಹಾಗೂ ಸಿಹಿಯನ್ನು ವಿತರಿಸಲಾಯಿತು.

ಪರಮೇಶ್ವರಿ ಸಭಾಂಗಣದಲ್ಲಿ ನಡೆದ ಸರಳ ಸಮಾರಂಭದಲ್ಲಿ ಕಲಿಕಾ ಸಾಮಗ್ರಿಗಳನ್ನು ವಿತರಿಸಿ ಮಾತನಾಡಿದ ಶಾಲಾ ಎಸ್‌ಡಿಎಂಸಿ ಅಧ್ಯಕ್ಷ ಸುಭಾಷ ಗಣಪತಿ ಗುನಗಾ ಬಡ ಹಾಗೂ ಹಿಂದುಳಿದ ವರ್ಗದ ವಿದ್ಯಾರ್ಥಿಗಳೇ ಹೆಚ್ಚಾಗಿ ಓದುತ್ತಿರುವ ಬೋಳೆ ಶಾಲೆಯ ವಿದ್ಯಾರ್ಥಿಗಳಿಗೆ ದಾನಿಗಳು ನೀಡಿದ ಈ ಕೊಡುಗೆಗಳು ಸ್ಮರಣೀಯವಾದದು ಎಂದರು.

ಶಾಲಾ ಮುಖ್ಯಾಧ್ಯಾಪಕ ಜಗದೀಶ ಜಿ ನಾಯಕ ಹೊಸ್ಕೇರಿ ಮಾತನಾಡಿ ಶಿಕ್ಷಣಾಭಿಮಾನಿ, ದಾನಿಗಳು ನೀಡುವ ಚಿಕ್ಕ ಸಹಾಯವು ಸಹ ಸರಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಬಹುದೊಡ್ಡ ಕೊಡುಗೆ ಎನಿಸುತ್ತದೆ. ಕೇಶವಾನಂದ ನಾಯಕ ಬೇಲೇಕೇರಿಯವರು ಶಾಲೆಯ ಎಲ್ಲ ವಿದ್ಯಾರ್ಥಿಗಳಿಗೆ ತಲಾ ಮೂರು ನೋಟ್ ಬುಕ್‌ಗಳನ್ನು ಕೊಡುಗೆಯಾಗಿ ನೀಡಿದರು.

ಶಾಲೆಯ ಹಿರಿಯ ವಿದ್ಯಾರ್ಥಿಗಳು, ಶಿಕ್ಷಣಾಭಿಮಾನಿಗಳು ಈ ಬಗ್ಗೆ ಆಸಕ್ತಿವಹಿಸಿ ಹೆಚ್ಚಿನ ಸಹಕಾರವನ್ನು ನೀಡಬೇಕೆಂದರು. ಶಿಕ್ಷಕಿ ಸವಿತಾ ನಾಯ್ಕ ವಂದಿಸಿದರು. ಅಡುಗೆ ಸಿಬ್ಬಂದಿ ಸುಮನಾ ನಾಯ್ಕ, ಚಂದ್ರು ಆಗೇರ ಉಪಸ್ಥಿತರಿದ್ದರು.

## ಭಾವೈಕ್ಯತೆಯ ಸಂಕೇತವಾದ ಮೊಹರಂ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಪಟ್ಟಣದಲ್ಲಿ ಶ್ರದ್ಧೆ ಮತ್ತು ಭಕ್ತಿಯ ಸಂಕೇತವಾದ ಮೊಹರಂ ಹಬ್ಬವನ್ನು ಹಿಂದೂ ಹಾಗೂ ಮುಸ್ಲಿಂ ಬಾಂಧವರು ಯಾವುದೇ ಭೇದಭಾವವಿಲ್ಲದೆ, ಅತ್ಯಂತ ಸಂಭ್ರಮ ಹಾಗೂ ಒಗ್ಗಟ್ಟಿನಿಂದ ಆಚರಿಸುವ ಮೂಲಕ ಕೋಮು ಸೌಹಾರ್ದತೆಗೆ ಮತ್ತು ಭಾವೈಕ್ಯತೆಗೆ ಸಾಕ್ಷಿಯಾಗಿದ್ದಾರೆ.

**ಅದ್ದೂರಿ ಡೋಲಿ ಮೆರವಣಿಗೆ:** ಪಟ್ಟಣದ ಫಕಿರ ಬಡಾವಣೆಯಿಂದ ಜಹಾಂಗೀರಸಾಬ್ ಶೇಖ ಅವರ ನೇತೃತ್ವದಲ್ಲಿ ಶುಕ್ರವಾರ ಬೆಳಗ್ಗೆ ಬಾರಾ ಇಮಾಮರ (ಡೋಲಿ) ಭವ್ಯ ಮೆರವಣಿಗೆ ಆರಂಭವಾಯಿತು. ವಿವಿಧ ಬಗೆಯ ಆಕರ್ಷಕ ಹೂವುಗಳಿಂದ ಕಂಗೊಳಿಸುತ್ತಿದ್ದ ಡೋಲಿಯನ್ನು ಕಮಲನಗರದ ಮುಖ್ಯ ರಸ್ತೆಯಲ್ಲಿ ಸಕಲ ವಾದ್ಯ-ವೈಭವಗಳೊಂದಿಗೆ ಮೆರವಣಿಗೆ ಮಾಡಲಾಯಿತು.

**ಸೌಹಾರ್ದತೆಯ ಪಯಣ:** ಈ ಭಕ್ತಿಪೂರ್ವಕ ಮೆರವಣಿಗೆಯು ರಾಂಪೂರ ಗ್ರಾಮದ ಹನುಮಾನ ಮಂದಿರ ಹಾಗೂ ಅಲ್ಲಿನ ಪೀರನ ದರ್ಶನ ಪಡೆದುಕೊಂಡಿತು. ನಂತರ ಗ್ರಾಮದ ಎಲ್ಲಾ ಬಡಾವಣೆಗಳ ಪ್ರಮುಖ ರಸ್ತೆಗಳ ಮೂಲಕ ಸಂಚರಿಸಿ, ಮರಳಿ ಕಮಲನಗರದ ಗಲ್ಲಿ ಗಲ್ಲಿಗಳಲ್ಲಿ ಸಾಗಿ ನಿವಾಸಿಗಳಿಗೆ ದರ್ಶನ ಭಾಗ್ಯ ಕಲ್ಪಿಸಿತು. ಹಬ್ಬದ ನಿಮಿತ್ತ ಇಡೀ ಪಟ್ಟಣದಲ್ಲಿ ಹಬ್ಬದ ವಾತಾವರಣ ಮನೆಮಾಡಿತ್ತು.ಈ ಸೌಹಾರ್ದತೆಯ ಸಂಭ್ರಮದಲ್ಲಿ ರಸೀದ್ ಶೇಖ್, ಅಮೃತರಾವ ವಡಗಾಂವೆ, ರಸೀದ ಸಾಬ್, ಶೇರು ಬಾಗವಾನ, ಜ್ಞಾನೇಶ್ವರ ಶೇರೆ, ರಮೇಶ ಹುನುಸನಾಳೆ, ನರಸಿಂಗ ಸಗರ, ಬಾಶೀದ, ಸಂತೋಷ ಭವರಾ, ಭಗವಂತ ಪಾನಘಂಟೆ, ಸೈಯ್ಯದ ಶೇಖ, ಸಲಾವೋದ್ದೀನ, ಜೀವನ ಠಾಕೂರ, ಅತೀಕ ಶೇಖ, ಮಹಾದೇವ ಕುಂಬಾರ, ಅಂಕೋಶ ವಾಗದರೆ, ನಜೀರ, ಉಸ್ಮಾನ ಸೇರಿದಂತೆ ನೂರಾರು ಯುವಕರು ಹಾಗೂ ಮಕ್ಕಳು ಉತ್ಸಾಹದಿಂದ ಪಾಲ್ಗೊಂಡಿದ್ದರು.

# ಸರ್ಕಾರಿ ಶಾಲೆ ಸುತ್ತಲಿನ ತಡೆಗೋಡೆ ನಿರ್ಮಾಣದಲ್ಲಿ ಭಾರಿ ಅವ್ಯವಹಾರದ ಆರೋಪ: ಕಡೇಚೂರು

• ಮಲ್ಲಮ್ಮ ನುಡಿ ವಾರ್ತೆ ಸೈದಾಪುರ



ಜೂ.27: ಪಟ್ಟಣದ ಸರ್ಕಾರಿ ಪ್ರೌಢ ಶಾಲೆಯ ಸುತ್ತ ನಿರ್ಮಿಸುತ್ತಿರುವ ತಡೆಗೋಡೆ ಕಾಮಾಗಾರಿಯಲ್ಲಿ ಕಳಪೆ ಗುಣಮಟ್ಟ ಹಾಗೂ ಬಾರಿ ಅವ್ಯವಹಾರದಿಂದ ಕೂಡಿದೆ ಎಂದು ಸಾಮಾಜಿಕ ಕಾರ್ಯಕರ್ತ ರವಿಕುಮಾರ ಕಡೆಚೂರು ಆರೋಪಿಸಿದರು.

ಪಟ್ಟಣದಲ್ಲಿ ಶನಿವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದರು.

2023-24ನೇ ಸಾಲಿನ ಕೆಕೆಆರಡಿಬಿ ಯೋಜನೆಯಡಿ ಸುಮಾರು ?1.5 ಕೋಟಿ ಅನುದಾನದಲ್ಲಿ ನಿರ್ಮಿಸುತ್ತಿರುವ ಶಾಲಾ ಕಾಂಪೌಂಡ್ ನ ಉದ್ದ997 ಮೀಟರ್ ಇದ್ದು, ಸ್ಥಳದಲ್ಲಿ ಕೇವಲ 330 ಮೀಟರ್ ಉದ್ದದ ಹಳೆಯ ಪಾಯದ ಮೇಲೆ ಹೊಸ ಗೋಡೆಯನ್ನು ಕಳಪೆ ಕಾಮಾಗಾರಿಯ ತಡೆಗೋಡೆ ನಿರ್ಮಿಸಲಾಗುತ್ತಿದೆ. ಇದು ನೈಜ ಅಳತೆ ಪರಿಶೀಲಿಸದೆ ಕಾಮಗಾರಿ ಆರಂಭಿಸಿರುವುದು ಜನರ ಕಣ್ಣಿಗೆ ಮಣ್ಣು ಎರಚುವ ಪ್ರಯತ್ನವಾಗಿದೆ ಎಂಬುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ.

ಈ ಬಗ್ಗೆ ಜಿಲ್ಲಾಧಿಕಾರಿಗಳು, ಕಾಮಗಾರಿಯನ್ನು ತಕ್ಷಣ ಸ್ಥಗಿ-ತಗೊಳಿಸಿ, ತಾಂತ್ರಿಕ ತಜ್ಞರ ತಂಡದಿಂದ ಸ್ಥಳ ಪರಿಶೀಲನೆ ನಡೆಸಬೇಕು. ಹಳೆಯ ಪಾಯದ ಸಾಮರ್ಥ್ಯ, ಕಾಮಗಾರಿಯ ಅಂದಾಜು ವೆಚ್ಚ ಹಾಗೂ ಗುಣಮಟ್ಟದ ಮಾನದಂಡಗಳ ಕುರಿತು ಸಮಗ್ರ ತನಿಖೆ ನಡೆಸಿ, ಯಾವುದೇ ಅಕ್ರಮ ಅಥವಾ ನಿರ್ಲಕ್ಷ್ಯ ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಶಾಲೆಯ ಮುಂದೆ ಗ್ರಾಮಸ್ಥರೊಡನೆ ಬೃಹತ್ ಪ್ರತಿಭಟನೆ ನಡೆಸುತ್ತೇವೆ ಎಂದು ಎಚ್ಚರಿಕೆ ನೀಡಿದರು.ಈ ಸಂದರ್ಭದಲ್ಲಿ ಮಹೇಶ ಜೇಗರ ಸೇರಿದಂತೆ ಇತರರಿದ್ದರು.

# ಭೂಸಂತ್ರಸ್ತರಿಗೆ ಶೇ ೬೦ರಷ್ಟು ಅಭಿವೃದ್ಧಿ ಜಮೀನು ನೀಡಿ ; ಯು ಬಸವರಾಜ್ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಕುಡುತಿನಿ ಮತ್ತು ಸುತ್ತಮುತ್ತಲ 7 ಗ್ರಾಮಗಳ ರೈತರಿಂದ ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿಯು ವಶಪಡಿಸಿಕೊಂಡ ಜಮೀನಿಗೆ ಹೆಚ್ಚಿನ ಭೂಮಿ ನೀಡಲು ಅಥವಾ ಕೆಡಿಬಿ ವಶಪಡಿಸಿಕೊಂಡ ಜಮೀನನ್ನು ಅಭಿವೃದ್ಧಿಗೊಳಿಸಿ ಅದರಲ್ಲಿ ಶೇಕಡ 60ರಷ್ಟು ಜಮೀನನ್ನು ರೈತರಿಗೆ ನೀಡಬೇಕೆಂದು ಕುಡುತಿನಿ ಭೂಸಂತ್ರಸ್ಥ ಹೋರಾಟ ಸಮಿತಿಯ ಯು ಬಸವರಾಜ್ ಸರ್ಕಾರ ಮತ್ತು ಕೆಇಡಿಬಿಯನ್ನು ಆಗ್ರಹಿಸಿದರು.

ಅವರು ಶನಿವಾರದಂದು ನಗರದ ಪತ್ರಿಕ ಭವನದಲ್ಲಿ ಸುದ್ದಿಗೋಷ್ಠಿಯನ್ನು ನಡೆಸಿ ಮಾತನಾಡಿ, ಕೆ ಐ ಎ ಡಿ ಬಿ 2013ರ ಕಾಯ್ದೆಯನ್ನು ಜಾರಿಗೊಳಿಸಬೇಕು ಹಳೆಯ ನಿಯಮ ನಿಬಂಧನೆಗಳನ್ನು ರದ್ದುಗೊಳಿಸಿ ಹೊಸ ಕಾಯ್ದೆ ಅನ್ವಯ ರೈತರಿಗೆ ದೊರೆಯುವ ಸೌಲಭ್ಯಗಳನ್ನು ಒದಗಿಸಿಕೊಡಬೇಕು ನ್ಯಾಯಾಲಯದ ಆದೇಶದ ಪ್ರಕಾರ ಭೂ ಸ್ವಾಧೀನ ಪಡಿಸಿಕೊಂಡ ಒಬ್ಬ ರೈತನಿಗೆ ಆದ ಆದೇಶವನ್ನು ಎಲ್ಲಾ ರೈತರಿಗೂ ಅನ್ವಯಿಸುವಂತೆ ನೋಡಿಕೊಳ್ಳಬೇಕು ತನ್ಮೂಲಕ ಪರಿಹಾರವನ್ನು ವಿತರಿಸಬೇಕು ಇದರಿಂದ ರೈತರಿಗೆ ಅನುಕೂಲವಾಗಲಿದೆ ಎಂದರು. ಮಿತ್ತಲ್ ಮತ್ತು ಆರ್ ಸೆಲ್ ಆರ್ ಹಾಗೂ ಬ್ರಹ್ಮಣಿ ಕೈಗಾರಿಕೆ ಮತ್ತು ಕಾರ್ಖಾನೆಗಳನ್ನು ಸ್ಥಾಪಿಸಲು ಕುಡುತಿನಿ ಮತ್ತು ಸುತ್ತಮುತ್ತಲ 7 ಗ್ರಾಮಗಳ ಸುಮಾರು 5 ಸಾವಿರ ಎಕರೆ ಜಮೀನು ವಶಪಡಿಸಿಕೊಂಡು ಹಲವು ವರ್ಷಗಳು ಕಳೆದಿವೆ ಆದರೆ ಇಲ್ಲಿಯವರೆಗೆ ರೈತರಿಗೆ ಉದ್ಯೋಗವಿಲ್ಲ ಮತ್ತು ನ್ಯಾಯಯುತ ಪರಿಹಾರವೂ ದೊರೆತಿಲ್ಲ, ಮಿತ್ತಲ್ ಮತ್ತು ಬ್ರಹ್ಮಣಿ ಕಂಪನಿಗಳ ಜಮೀನನ್ನು ಕೆಡಿಬಿ ತನ್ನ ಮೂಲಕ ಜಿಂದಾಲ್ ಮತ್ತು ಇತರ ಕಂಪನಿಗಳಿಗೆ ಮಾರಾಟ ಮಾಡಲು ಹವಣಿಸುತ್ತಿದೆ ಈ ರೀತಿ ಮಾಡದೆ ಮತ್ತೆ ಸರ್ಕಾರ ಮತ್ತು ಕೆಡಿಬಿಯಿಂದ ನೋಟಿಫಿಕೇಷನ್ ಹೊರಡಿಸಿ ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಭೂ ಬೆಲೆಯನ್ನು ನೀಡಬೇಕೆಂದು ಇದರಿಂದ ಭೂಸಂತ್ರಸ್ಥರಿಗೆ ಅನುಕೂಲ ಮಾಡಿಕೊಡಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು ಈ ಕುರಿತು ಮುಂದಿನ ದಿನಗಳಲ್ಲಿ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಅನಿರ್ದಿಷ್ಟ ಅವಧಿ ಪ್ರತಿಭಟನಾ ಧರಣಿಯನ್ನು ಹಮ್ಮಿಕೊಳ್ಳಲಾಗುವುದು ಎಂದರು. ಈ ಪತ್ರಿಕಾಗೋಷ್ಠಿಯಲ್ಲಿ ಸತ್ಯಬಾಬು, ಜಂಗ್ಲಿ ಸಾಬ್, ಪ್ರಜಾ ಪರಿವರ್ತನಾ ವೇದಿಕೆ ಜಿಲ್ಲಾಧ್ಯಕ್ಷ ಕುಡುತಿನಿ ಆನಂದ್ ಕುಮಾರ್, ತಿಪ್ಪೇಸ್ವಾಮಿ, ಗೋಪಾಲಯ್ಯ, ತಿಪ್ಪಯ್ಯ ಸೇರಿದಂತೆ ಇತರರಿದ್ದರು.

# ಗುಂಪು ಹಲ್ಲೆ, ಜಾತಿ ನಿಂದನೆ, ಜೀವ ಬೆದರಿಕೆ: ಆರೋಪಿಗಳ ವಿರುದ್ಧ ಕಠಿಣ ಕ್ರಮ ಯಾವಾಗ? ಸಂತ್ರಸ್ತರಿಗೆ ನ್ಯಾಯ ಸಿಗುತ್ತಾ?

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಜೂ 27: ಕ್ಷುಲ್ಲಕ ಕಾರಣವೊಂದನ್ನು ನೆಪವನ್ನಾಗಿ ಮಾಡಿಕೊಂಡು ಯುವಕ ಹಾಗೂ ಆತನ ಸಹೋದರರ ಮೇಲೆ ಗುಂಪುಗೂಡಿ ಹಲ್ಲೆ ನಡೆಸಿ, ಜಾತಿ ನಿಂದನೆ ಹಾಗೂ ಜೀವ ಬೆದರಿಕೆ ಹಾಕಿರುವ ಆರೋಪಕ್ಕೆ ಸಂಬಂಧಿಸಿದಂತೆ ಸುರಪುರ ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ 164/2026 ದಾಖಲಾಗಿದ್ದರೂ, ಆರೋಪಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಲ್ಲಿ ಪೊಲೀಸ್ ಇಲಾಖೆ ಹಿಂದೇಟು ಹಾಕುತ್ತಿದೆಯೇ ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

ದೂರುದಾರರು ರಂಗಪೇಠದಲ್ಲಿರುವ ಸಿಟಿ ಟೇಲರ್ ಅಂಗಡಿಗೆ ಬಟ್ಟೆಗಳ ಅಳತೆ ನೀಡಲು ತೆರಳಿದ್ದ ವೇಳೆ ರಸ್ತೆ ಸಂಚಾರದ ಸಂದರ್ಭದಲ್ಲಿ ಕಾರಿನಲ್ಲಿ ಬಂದಿದ್ದ ವ್ಯಕ್ತಿಗಳೊಂದಿಗೆ ಮಾತಿನ ಚಕಮಕಿ ನಡೆದಿದೆ. ಬಳಿಕ ದೂರುದಾರರು ಟೇಲರ್ ಅಂಗಡಿಯಿಂದ ಹೊರಬಂದಾಗ ಕಾರಿನಲ್ಲಿದ್ದ ಮನೋಜ್ ಬಿಚಗತ್ತಿಕೇರಾ ಹಾಗೂ ದೇವರಾಜ್ ಸಿದ್ದಾಪುರ ಎಂಬವರು ಮತ್ತೊಬ್ಬರನ್ನು ಕರೆದುಕೊಂಡು ಬಂದು ಅವಾಚ್ಯ ಶಬ್ದಗಳಿಂದ ನಿಂದಿಸಿ ಬೆದರಿಕೆ ಹಾಕಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಈ ಘಟನೆ ನಡೆದ ಕೆಲವೇ ಕ್ಷಣಗಳಲ್ಲಿ ದೂರುದಾರರು ತಮ್ಮ ಸಹೋದರರಾದ ಮಂಜುನಾಥ್ ಮತ್ತು ಹಣಮಂತ ಅವರೊಂದಿಗೆ ತಿಮ್ಮಾಪುರ ಸರ್ಕಾರಿ ಆಸ್ಪತ್ರೆ ಸಮೀಪ ನಿಂತಿದ್ದಾಗ, ಆರೋಪಿಗಳಾದ ಮನೋಜ್ ಬಿಚಗತ್ತಿ-ಕೇರಾ, ದೇವರಾಜ್ ಸಿದ್ದಾಪುರ, ಶರಣು ದೇವದುರ್ಗ, ಸೋಪಿಸಾಬ್ ಕುಂಬಾರಪೇಟೆ, ಮಹೇಶ್ ತಿರುಪತಿ ಹುಲಕಲ್, ರಾಘವೇಂದ್ರ ಕಿಮ್ಮಪ್ಪ ಶುಕ್ಲಾ, ಸಂಜು ಕಾಮಣ್ಣ ಪ್ರಾಪ್ತಿ ಸೇರಿದಂತೆ ಇನ್ನಿತರರು ಅಕ್ರಮ ಕೂಟ ರಚಿಸಿಕೊಂಡು ಕೈಯಲ್ಲಿ ಕಲ್ಲು ಮತ್ತು ಬಡಿಗೆಗಳನ್ನು ಹಿಡಿದು ಸ್ಥಳಕ್ಕೆ ಬಂದಿದ್ದಾರೆ ಎನ್ನಲಾಗಿದೆ.

ಆ ವೇಳೆ ಮನೋಜ್ ಬಿಚಗತ್ತಿಕೇರಾ ಕಲ್ಲಿನಿಂದ ದೂರುದಾರರ ಎಡಗೈಗೆ ಹೊಡೆದು ಗಾಯಪಡಿಸಿದ್ದಾನೆ. ದೇವರಾಜ್ ಸಿದ್ದಾಪುರ ಬಡಿಗೆಯಿಂದ ಕಾಲಿಗೆ ಹೊಡೆದಿದ್ದಾನೆ. ಶರಣು ದೇವದುರ್ಗ ಕೈ ಹಿಡಿದು ತಿರುಗಿಸಿ ಗಾಯಗೊಳಿಸಿದ್ದಾನೆ ಎಂದು ಆರೋಪಿಸಲಾಗಿದೆ. ಜಗಳ ಬಿಡಿಸಲು ಮುಂದಾದ ದೂರುದಾರರ ಸಹೋದರರಾದ ಮಂಜುನಾಥ್ ಹಾಗೂ ಹಣಮಂತರ ಮೇಲೂ ಹಲ್ಲೆ ನಡೆದಿದ್ದು, ಮಹೇಶ್ ಹುಲಕಲ್ ಮಂಜುನಾಥ್ ಅವರ ತಲೆ ಹಾಗೂ ಬೆನ್ನಿಗೆ ಹೊಡೆದಿದ್ದರೆ, ಸೋಪಿಸಾಬ್ ಹಣಮಂತ ಅವರ ಬೆನ್ನು ಮತ್ತು ಬಲಗೈ ಭಾಗಕ್ಕೆ ಹಲ್ಲೆ ನಡೆಸಿದ್ದಾನೆ ಎನ್ನಲಾಗಿದೆ. ಇದೇ ವೇಳೆ ರಾಘವೇಂದ್ರ ಮತ್ತು ಸಂಜು ಪ್ರಾಪ್ತಿ ದೂರುದಾರರನ್ನು ನೆಲಕ್ಕೆ ಕೆಡವಿ ಕೈ ಮತ್ತು ಕಾಲಿನಿಂದ ಮನಬಂದಂತೆ ಹಲ್ಲೆ ನಡೆಸಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಹಲ್ಲೆಯ ಬಳಿಕ ಆರೋಪಿಗಳು "ಇನ್ನೊಮ್ಮೆ ಸಿಕ್ಕರೆ ಜೀವಂತ ಬಿಡುವುದಿಲ್ಲ" ಎಂದು ಜೀವ ಬೆದರಿಕೆ ಹಾಕಿ ಸ್ಥಳದಿಂದ ತೆರಳಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಗಾಯಗೊಂಡ ದೂರುದಾರರು ಹಾಗೂ ಅವರ ಸಹೋದರರನ್ನು ಸುರಪುರ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಪ್ರಕರಣದಲ್ಲಿ ಅಕ್ರಮ ಕೂಟ ರಚನೆ, ಮಾರಣಾಂತಿಕ ಹಲ್ಲೆ, ಜಾತಿ ನಿಂದನೆ ಮತ್ತು ಜೀವ ಬೆದರಿಕೆ ಆರೋಪಗಳು ಕೇಳಿಬಂದಿರುವ ಹಿನ್ನೆಲೆಯಲ್ಲಿ ಭಾರತೀಯ ನ್ಯಾಯ ಸಂಹಿತೆ (BNS)-2023ರ ವಿವಿಧ ಕಲಂಗಳು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ಅತ್ಯಾಚಾರ ತಡೆ) ಕಾಯ್ದೆ, 1989ರ ಗಂಭೀರ ಸೆಕ್ಷನ್‌ಗಳಡಿ ಪ್ರಕರಣ ದಾಖಲಾಗಿರುವುದು ಪ್ರಕರಣದ ಗಂಭೀರತೆಯನ್ನು ಮತ್ತಷ್ಟು ಹೆಚ್ಚಿಸಿದೆ.ಆದಾಗ್ಯೂ, ಪ್ರಕರಣ ದಾಖಲಾಗಿದ್ದರೂ ಆರೋಪಿಗಳ ವಿರುದ್ಧ ತಕ್ಷಣದ ಬಂಧನ ಅಥವಾ ಕಠಿಣ ಕ್ರಮ ಜರುಗಿದೆಯೇ ಎಂಬ ಪ್ರಶ್ನೆ ಸ್ಥಳೀಯರಲ್ಲಿ ಮೂಡಿದೆ. ಜಾತಿ ನಿಂದನೆ ಮತ್ತು ಗುಂಪು ಹಲ್ಲೆಯಂತಹ ಪ್ರಕರಣಗಳನ್ನು ಸಾಮಾನ್ಯ ಜಗಳವೆಂದು ಪರಿಗಣಿಸುವ ಪ್ರವೃತ್ತಿ ಸಮಾಜದಲ್ಲಿ ಕಾನೂನಿನ ಮೇಲಿನ ವಿಶ್ವಾಸವನ್ನು ಕುಗ್ಗಿಸುವ ಅಪಾಯವಿದೆ ಎಂದು ಸಾಮಾಜಿಕ ಮುಖಂಡರು ಆತಂಕ ವ್ಯಕ್ತಪಡಿಸಿದ್ದಾರೆ.ಒಬ್ಬ ವ್ಯಕ್ತಿ ಅಥವಾ ಕುಟುಂಬವನ್ನು ಗುರಿಯಾಗಿಸಿಕೊಂಡು ಗುಂಪುಗೂಡಿ ಹಲ್ಲೆ ನಡೆಸುವುದು ಕೇವಲ ವೈಯಕ್ತಿಕ ದ್ವೇಷದ ಪ್ರಕರಣವಲ್ಲ; ಅದು ಸಮಾಜದಲ್ಲಿ ಭಯ ಮತ್ತು ಅಶಾಂತಿಯ ವಾತಾವರಣ ಸೃಷ್ಟಿಸುವ ಗಂಭೀರ ಅಪರಾಧವಾಗಿದೆ. ವಿಶೇಷವಾಗಿ ಪರಿಶಿಷ್ಟ ಜಾತಿಯ ವ್ಯಕ್ತಿಗಳ ವಿರುದ್ಧ ಜಾತಿ ನಿಂದನೆ ಮತ್ತು ದೌರ್ಜನ್ಯ ಆರೋಪಗಳು ಕೇಳಿಬಂದಾಗ, ತನಿಖೆಯನ್ನು ತ್ವರಿತಗೊಳಿಸುವುದು, ಸಂತ್ರಸ್ತರಿಗೆ ಭದ್ರತೆ ಒದಗಿಸುವುದು ಹಾಗೂ ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದು ಪೊಲೀಸ್ ಇಲಾಖೆಯ ಕಾನೂನುಬದ್ಧ ಮತ್ತು ನೈತಿಕ ಜವಾಬ್ದಾರಿಯಾಗಿದೆ.

ಹೀಗಿರುವಾಗ, ಪ್ರಕರಣದಲ್ಲಿ ಹೆಸರು ಕೇಳಿಬಂದಿರುವ ಆರೋಪಿಗಳ ವಿರುದ್ಧ ಪೊಲೀಸರು ಕಠಿಣ ಕ್ರಮ ಕೈಗೊಳ್ಳುವರೇ? ಸಂತ್ರಸ್ತರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ತನಿಖೆಗೆ ವೇಗ ನೀಡುವರೇ? ಜಾತಿ ದೌರ್ಜನ್ಯ ಮತ್ತು ಗುಂಪು ಹಲ್ಲೆ ಪ್ರಕರಣಗಳಿಗೆ ಕಾನೂನು ತನ್ನದೇ ಆದ ಗಂಭೀರ ಸಂದೇಶ ನೀಡುವಂತೆ ಕ್ರಮ ಜರುಗಿಸುವರೇ? ಎಂಬ ಪ್ರಶ್ನೆಗಳಿಗೆ ಉತ್ತರ ನೀಡುವ ಹೊಣೆ ಈಗ ಸಂಬಂಧಿತ ಪೊಲೀಸ್ ಅಧಿಕಾರಿಗಳ ಮೇಲಿದೆ.ಕಾನೂನು ಎಲ್ಲರಿಗೂ ಸಮಾನ ಎಂಬ ನಂಬಿಕೆ ಉಳಿಯಬೇಕಾದರೆ, ದೂರುದಾರರಿಗೆ ನ್ಯಾಯ ಮತ್ತು ತಪ್ಪಿತಸ್ಥರಿಗೆ ಶಿಕ್ಷೆ ಎಂಬ ತತ್ವದಡಿ ಪೊಲೀಸ್ ಇಲಾಖೆ ತ್ವರಿತ, ಪಾರದರ್ಶಕ ಹಾಗೂ ನಿರ್ಭೀತ ಕ್ರಮ ಕೈಗೊಳ್ಳಬೇಕೆಂಬುದು ಸಾರ್ವಜನಿಕರ ಒತ್ತಾಯವಾಗಿದೆ.

# ನೀಲಕಂಠರಾವ ಕಾಂಬ್ಳೆ ನಿಧನ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ತಾಲೂಕಿನ ಪ್ರತಿಷ್ಠಿತ ಭಾರತೀಯ ಶಿಕ್ಷಣ ಸಂಸ್ಥೆಯ ಗೌರವಾನ್ವಿತ ಅಧ್ಯಕ್ಷರಾದ ನೀಲಕಂಠರಾವ ಕಾಂಬ್ಳೆ ಅವರು ನಿಧನರಾಗಿದ್ದಾರೆ. ಶಿಕ್ಷಣ ಕ್ಷೇತ್ರಕ್ಕೆ, ರಾಜಕೀಯ ಕ್ಷೇತ್ರಕ್ಕೆ ಮತ್ತು ಸಮಾಜಕ್ಕೆ ಅವರು ನೀಡಿದ ಕೊಡುಗೆ ಅಪಾರವಾಗಿದ್ದು, ಅವರ ಅಗಲಿಕೆಗೆ ಸಂಸ್ಥೆಯ ಪದಾಧಿಕಾರಿಗಳು ಹಾಗೂ ತಾಲೂಕಿನ ಗಣ್ಯರು ತೀವ್ರ ಸಂತಾಪ ಸೂಚಿಸಿದ್ದಾರೆ.

ಅಂತ್ಯಕ್ರಿಯೆಯ ವಿವರ:

ಮೃತರ ಅಂತ್ಯಕ್ರಿಯೆಯು ದಿನಾಂಕ:28/06/26 ರ ಭಾನುವಾರ ಮಧ್ಯಾಹ್ನ 1:30 ಕ್ಕೆ ಜಲ್ಕೋಟ್ ರಸ್ತೆ, ಉದಗಿರನಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಜೂ. 28 ರಿಂದ ಜು 1ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕಾ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜೂ 27 : ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿದೆ ಜಿಲ್ಲೆಯಾದ್ಯಂತ ಜೂನ್ 28 ರಿಂದ ಜುಲೈ 1ರವರೆಗೆ ಒಂದನೇ ಸುತ್ತಿನ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಬಿಒಪಿವಿ (ಪೋಲಿಯೋ ಲಸಿಕೆ) ನೀಡುವುದರ ಮೂಲಕ ನಡೆಸಲಾಗುತ್ತಿದೆ.ಈ ಕಾರ್ಯಕ್ರಮದ ಮೊದಲನೇ ದಿನ 877 ಪೋಲಿಯೋ ಬೂತ್‌ಗಳಲ್ಲಿ ಲಸಿಕೆ ನೀಡಲಾಗುವುದು. ಅಲ್ಲದೆ ಜಿಲ್ಲೆಯ ವಿವಿಧ ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳಲ್ಲಿ ಮತ್ತು ಸರ್ಕಲಗಳಲ್ಲಿ ಒಟ್ಟು 59 ಟ್ರಾನ್ಸಿಟ್ ಪೋಲಿಯೋ ಬೂತ್ ಗಳನ್ನು ಮಾಡಲಾಗಿದ್ದು, ಪ್ರಯಾಣ ಮಾಡುವ 0 ರಿಂದ 5 ವರ್ಷದೊಳಗಿನ ಮಕ್ಕಳಿಗೆ ಲಸಿಕೆ ನೀಡಲಾಗುವುದು ಮತ್ತು ಜಿಲ್ಲೆಯಾದ್ಯಂತ 19 ಮೊಬೈಲ್ ತಂಡಗಳ ಮೂಲಕ ಈಗಾಗಲೆ ಗುರುತಿಸಿರುವ ಹೈರಿಸ್ಕ್ ಏರಿಯಾಗಳಲ್ಲಿ ಇರುವ ಮಕ್ಕಳಿಗೆ ಲಸಿಕೆ ನೀಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ.

ಜಿಲ್ಲೆಯ ಸಾರ್ವಜನಿಕರು ತಮ್ಮ 0 ರಿಂದ 5 ವರ್ಷದೊಳಗಿನ ಮಕ್ಕಳಿಗೆ ಈ ಹಿಂದೆ ಎಷ್ಟೆ ಬಾರಿ ಪೋಲಿಯೋ ಲಸಿಕೆ ಹಾಕಿಸಿದ್ದರೂ ಸಹ ಈ ದಿನದಂದು (ಜೂ. 28 ಪೋಲಿಯೋ ಭಾನುವಾರ) ತಮ್ಮ ಮನೆಯ ಹತ್ತಿರವೇ ಇರುವ ಪೋಲಿಯೋ ಬೂತ್‌ಗೆ ಭೇಟಿ ನೀಡಿ ಮತ್ತೊಮ್ಮೆ ಪೋಲಿಯೋ ಲಸಿಕೆ ಹಾಕಿಸುವಂತೆ ಕೊಪ್ಪಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಡ ಪ್ರಭು ಕೆಂಪೇಗೌಡ ಜಯಂತಿ: ಜಿಲ್ಲಾಡಳಿತದಿಂದ ಪುಷ್ಪ ನಮನ ಸಲ್ಲಿಕೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ನಾಡ ಪ್ರಭು ಕೆಂಪೇಗೌಡ ಜಯಂತಿಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ (ಜೂ. 27ರಂದು) ಆಚರಿಸಲಾಯಿತು.ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ ಅವರು ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ವಾರ್ತಾ ಇಲಾಖೆಯ ಭರತಕುಮಾರ, ಎಂ.ಪಾಂಡುರಂಗ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮುತ್ತಣ್ಣ ಸೇರಿದಂತೆ ಇತರೆ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

ವಾರ್ತಾ ಇಲಾಖೆಯಲ್ಲಿ ಕೆಂಪೇಗೌಡ ಜಯಂತಿ: ನಾಡ ಪ್ರಭು ಕೆಂಪೇಗೌಡ ಜಯಂತಿಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕೊಪ್ಪಳ ಕಚೇರಿಯಲ್ಲಿಯೂ ಆಚರಿಸಲಾಯಿತು.



# ಇಟಗಿ ಆದರ್ಶ ವಿದ್ಯಾಲಯದ 6ನೇ ತರಗತಿ ಖಾಲಿ ಸೀಟುಗಳಿಗೆ ಕೌನ್ಸಲಿಂಗ್

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜೂ 27 : ಜಿಲ್ಲೆಯ ಇಟಗಿ ಆದರ್ಶ ವಿದ್ಯಾಲಯದಲ್ಲಿ 2026-27ನೇ ಸಾಲಿಗೆ 6ನೇ ತರಗತಿಗೆ ದಾಖಲಾತಿ ಪ್ರಕ್ರಿಯೆ ನಡೆಯುತ್ತಿದ್ದು, ಖಾಲಿ ಉಳಿದಿರುವ ಸೀಟುಗಳ ಭರ್ತಿಗೆ ಕೌನ್ಸಲಿಂಗ್ ಮೂಲಕ ಪ್ರವೇಶ ನೀಡಲಾಗುತ್ತದೆ.ಈಗಾಗಲೇ ಮೂರು ಹಂತಗಳಲ್ಲಿ ದಾಖಲಾತಿ ಪೂರ್ಣಗೊಂಡಿ-ದ್ದು, ಇನ್ನೂ 24 ಸೀಟುಗಳು ಖಾಲಿ ಉಳಿದಿವೆ. ಈ ಸೀಟುಗಳ ಭರ್ತಿಗೆ 1:30 ಅನುಪಾತದಂತೆ (ಒಂದು ಸೀಟಿಗೆ 30 ವಿದ್ಯಾರ್ಥಿಗಳು) ಅರ್ಹ ವಿದ್ಯಾರ್ಥಿಗಳ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಅದರಂತೆ ಕೌನ್ಸಲಿಂಗ್ ಪ್ರಕ್ರಿಯೆಯನ್ನು ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಜೂನ್ 29 ರಂದು ಬೆಳಿಗ್ಗೆ 10 ಗಂಟೆಗೆ ಮತ್ತು ಮೀಸಲಾತಿ ವರ್ಗದ (ಎಸ್.ಸಿ, ಎಸ್.ಟಿ, ಪ್ರವರ್ಗ-1, ಪ್ರವರ್ಗ-2ಬಿ) ವಿದ್ಯಾರ್ಥಿಗಳಿಗೆ ಜೂನ್ 30ರಂದು ಬೆಳಿಗ್ಗೆ 10 ಗಂಟೆಗೆ ಇಟಗಿ ಆದರ್ಶ ವಿದ್ಯಾಲಯದ ಆವರಣದಲ್ಲಿ ನಡೆಸಲಾಗುವುದು. ಅರ್ಹ ವಿದ್ಯಾರ್ಥಿಗಳ 1:30 ಪಟ್ಟಿಯನ್ನು ಆದರ್ಶ ವಿದ್ಯಾಲಯ, ಇಟಗಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಯಲಬುರ್ಗಾಗಳಲ್ಲಿ ಪ್ರಕಟಿಸಲಾಗಿದ್ದು, ಈ ಪಟ್ಟಿಯಲ್ಲಿ ಹೆಸರು ಹೊಂದಿರುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಅಗತ್ಯ ದಾಖಲೆಗಳಾದ ಆಯ್ಕೆ ಪರೀಕ್ಷೆಯ ಪ್ರವೇಶ ಪತ್ರದ ಪ್ರತಿ, ಜಾತಿ ಹಾಗೂ ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಪ್ರತಿ, ಬೇರೆ ತಾಲೂಕು, ಜಿಲ್ಲೆಯ ವಿದ್ಯಾರ್ಥಿಗಳಾದಲ್ಲಿ ಯಲಬುರ್ಗಾ ತಹಶೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರದೊಂದಿಗೆ ಹಾಜರಾಗಬೇಕು ಎಂದು ಯಲಬುರ್ಗಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 240ನೇ ದಿನದ ಬಲ್ಡೋಟ ಕಾರ್ಖಾನೆ ವಿರೋಧಿ ಧರಣಿ ಯಶಸ್ವಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ




ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆಯ ಜಂಟಿ ಕ್ರಿಯಾ ವೇದಿಕೆಯಿಂದ ಬಲ್ಡೋಟ ಕಂಪನಿಯ ಬೃಹತ್ ಹೂಡಿಕೆ ವಿರೋಧಿಸಲಾಗುತ್ತಿದೆ. ತಾಲೂಕಿನ 28 ಮಾಲಿನ್ಯಕಾರಿ ಬೃಹತ್ ಕಾರ್ಖಾನೆಗಳನ್ನು ಜನರ ಆರೋಗ್ಯ, ಜೀವ ಉಳಿಸಲು ಶಾಶ್ವತವಾಗಿ ಬಂದ್ ಮಾಡಬೇಕು. ಹೈಕೋರ್ಟ್ ಆದೇಶದಂತೆ ಬಸಾಪುರ ಕೆರೆ ಸಾರ್ವಜನಿಕರ ಬಳಕೆಗೆ ಮೂಕ್ತಗೊಳಿಸಬೇಕು. ನಗರದ ಪೂರ್ವ ಭಾಗದಲ್ಲಿ 2011ರಿಂದ ಬಲ್ಡೋಟ ಮಾಲಿಕತ್ವದ ಎಂಎಸ್ಪಿಎಲ್ ಪೆಲ್ಲೆಟ್ ಘಟಕದ ಕಂದು ಧೂಳು ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಆಗುತ್ತಿದ್ದು ಈ ಘಟಕ ಬಂದ್ ಮಾಡಿ ಜನರ ಆರೋಗ್ಯ ಕಾಪಾಡಬೇಕು. ತುಂಗಭದ್ರಾ ನೀರು ವಿಷಗೊಳಿಸುತ್ತಿರುವ ಮಾಲಿನ್ಯಕಾರಿ ಕಾರ್ಖಾನೆಗಳನ್ನು ಮುಚ್ಚಬೇಕು. ಹಿರೇಬಗನಾಳ, ಅಲ್ಲಾನಗರ ಪಕ್ಕದ ಸ್ಪಾಂಜ್ ಐರನ್ ಕಾರ್ಖಾನೆಗಳನ್ನು ಕೇಂದ್ರ ಪರಿಸರ ಇಲಾಖೆ ವರದಿಯ ಶಿಫಾರಸಿನಂತೆ ನಿರ್ಜನ ಪ್ರದೇಶಕ್ಕೆ ಸ್ಥಳಾಂತರಿಸಬೇಕು. ಸರ್ಕಾರ ಕಾರ್ಖಾನೆ ಧೂಳು ಬಾಧಿತ 22 ಹಳ್ಳಿಗಳ ಪುನರುಜ್ಜೀವನ ಮಾಡಲು ವಿಶೇಷ ಪ್ಯಾ-ಕೇಜ್ ಘೋಷಿಸಬೇಕು. ಎ.ಐ.ಐ.ಎಂ.ಎಸ್ ಸಂಸ್ಥೆ ಮತ್ತು ಐ.ಐ.ಎಸ್.ಸಿ ಸಂಸ್ಥೆಯಿಂದ ಜನರ ಆರೋಗ್ಯ ಮತ್ತು ಪರಿಸರ ಹಾನಿಯ ಸಮೀಕ್ಷೆ ನಡೆಸಬೇಕೆಂದು ಆಗ್ರಹಿಸಿ ಧರಣಿ ಮುಂದುವರೆಯಿತು.

ಧರಣಿಯಲ್ಲಿ ಪ್ರಕಾಶಕ ಡಿ.ಎಂ.ಬಡಿಗೇರ, ಸಂಚಾಲಕ ಮಲ್ಲಿಕಾರ್ಜುನ ಬಿ.ಗೋನಾಳ, ಡಾ. ಬಸವರಾಜ ಪೂಜಾರ, ಯಲ್ಲಪ್ಪ ಬಂಡಿ, ರಾಜಶೇಖರ ಏಳುಭಾವಿ, ಮಹಾದೇವಪ್ಪ ಮಾವಿನಮಡು, ಮಖ್ಬುಲ್ ರಾಯಚೂರು, ಸಣ್ಣ ಹನುಮಂತಪ್ಪ ಬೊಮ್ಮಸಾಗರ, ಖೀಮಪ್ಪ ರಾಠೋಡ್, ಶಿವಪ್ಪ ಜಲ್ಲಿ, ಶಿವಪ್ಪ ಹಲಗೇರಿ, ಮುದಕಪ್ಪ ಹ್ಯಾಟಿ ಇತರರು ಪಾಲ್ಗೊಂಡರು.

# ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಕಲಾವಿದರಿಂದ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜೂ 27 : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2026-27ನೇ ಸಾಲಿನ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಕಲಾವಿದರಿಂದ ಅರ್ಜಿ ಆಹ್ವಾನಿಸಲಾಗಿದೆ.2026-27ನೇ ಸಾಲಿನಲ್ಲಿ ಜಿಲ್ಲೆಯಾದ್ಯಂತ ಚಿಗುರು, ಯುವ ಸೌರಭ ಹಾಗೂ ಸಾಂಸ್ಕೃತಿಕ ಸೌರಭ ಕಾರ್ಯಕ್ರಮಗಳನ್ನು ಆಯೋಜಿಸಲು ಉದ್ದೇಶಿಸಲಾಗಿದೆ. ಅದರಂತೆ ವಿವಿಧ ವಿಭಾಗಗಳ ಕಲಾವಿದರಿಗೆ ಅವಕಾಶ ಕಲ್ಪಿಸಲಾಗಿದೆ. ಚಿಗುರು ಕಾರ್ಯಕ್ರಮಕ್ಕೆ 8 ರಿಂದ 14 ವರ್ಷದೊಳಗಿನ ಪ್ರತಿಭಾವಂತ ಮಕ್ಕಳಿಂದ ಅರ್ಜಿ ಸಲ್ಲಿಸಬಹುದು.

# ಅಂತಾರಾಷ್ಟ್ರೀಯ ಎಂ.ಎಸ್.ಎಂ.ಇ. ದಿನಾಚರಣೆ ಜಿಲ್ಲಾಧಿಕಾರಿಗಳಿಂದ ಆರ್.ಬಿ.ಐ ಜಾಗೃತಿ ಪೋಸ್ಟರ್‌ಗಳ ಅನಾವರಣ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ




ಜೂ.27ಅಂತರರಾಷ್ಟ್ರೀಯ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ (MSME) ದಿನಾಚರಣೆ ಅಂಗವಾಗಿ ಭಾರತೀಯ ರಿಸರ್ವ್ ಬ್ಯಾಂಕ್ ನಿಂದ ಎಂಎಸ್‌ಎಂಇ ವಲಯದ ಮಹತ್ವದ ಯೋಜನೆಗಳು ಹಾಗೂ ಬ್ಯಾಂಕಿಂಗ್ ಸೌಲಭ್ಯಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಜಾಗೃತಿ ಪೋಸ್ಟರ್‌ಗಳನ್ನು ಶುಕ್ರವಾರ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ತಮ್ಮ ಕಚೇರಿಯಲ್ಲಿ ಅನಾವರಣಗೊಳಿಸಿದರು.

ಈ ಸಂದರ್ಭದಲ್ಲಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಲೀಡ್ ಬ್ಯಾಂಕ್ ಕಚೇರಿಯ ಮುಖ್ಯ ವ್ಯವಸ್ಥಾಪಕ ಅಂಬ್ರೀಶ್ ಜಿ. ತೆಗನೂರ ಉಪಸ್ಥಿತರಿದ್ದು, ಎಂಎಸ್‌ಎಂಇ ಉದ್ಯಮಿಗಳು ಹಾಗೂ ಸಾರ್ವಜನಿಕರು ವಿವಿಧ ಬ್ಯಾಂಕಿಂಗ್ ಸೌಲಭ್ಯಗಳ ಮಾಹಿತಿವುಳ್ಳ ಪೋಸ್ಟರ್ ಗಳನ್ನು ಭಾರತೀಯ ರಿಸರ್ವ್ ಬ್ಯಾಂಕ್ ಹೊರತಂದಿದ್ದು, ಇದರ ಸದುಪಯೋಗಪಡಿಸಿಕೊಳ್ಳುವಂತೆ ಕರೆ ನೀಡಿದರು.

ಭಾರತೀಯ ರಿಸರ್ವ್ ಬ್ಯಾಂಕ್ ಸಿದ್ಧಪಡಿಸಿರುವ ಈ ಜಾಗೃತಿ ಪೋಸ್ಟರ್‌ಗಳು ಉದ್ಯಮ್ ನೋಂದಣಿಯ ಪ್ರಯೋಜನಗಳು, ಸೂಕ್ಷ್ಮ ಮತ್ತು ಸಣ್ಣ ಉದ್ಯಮಗಳ ಸಾಲ ಅರ್ಜಿಗಳನ್ನು ವಿಲೇವಾರಿ ಮಾಡುವ ಕುರಿತು ಮಾರ್ಗಸೂಚಿಗಳು, ಮೇಲಾಧಾರ ರಹಿತ ಸಾಲಗಳ ಮಿತಿ, ಸಾಲಗಳ ಪೂರ್ವಪಾವತಿ ಮೇಲಿನ ಶುಲ್ಕಗಳಿಗೆ ಸಂಬಂಧಿಸಿದ ನಿಯಮಗಳು, ಎಂಎಸ್‌ಎಂಇಗಳಿಗೆ ಲಭ್ಯವಿರುವ ವಿವಿಧ ಬ್ಯಾಂಕಿಂಗ್ ಸೌಲಭ್ಯಗಳು ಹಾಗೂ ಪ್ರಮುಖ ಮಾರ್ಗಸೂಚಿಗಳ ಬಗ್ಗೆ ಅರಿವು ಮೂಡಿಸಲಿವೆ.

# ಆಲಂಗಳ ಭೇಟಿ ಮುಂಚೆ ಧರೆಗಿಳಿದ ಮಳೆರಾಯ ಸಂಭ್ರಮದ ಮುದಗಲ್ ಮೊಹರಂಗೆ ತೆರೆ

• ಮಲ್ಲಮ್ಮ ನುಡಿ ವಾರ್ತೆಮುದಗಲ್



ಆಲಂಗಳ ಭೇಟಿ ಮುಂಚೆ ಧರೆಗಿಳಿದ ಮಳೆರಾಯನಆಗಮನವಾಯಿತು.ನಾಡಿಗೆ ಹೆಸರಾದ ಮುದಗಲ್ ಮೊಹರಂಗೆ ರಾಜ್ಯ ಹಾಗೂ ಪರರಾಜ್ಯಗಳಿಂದ ಆಗಮಿಸಿದ ಲಕ್ಷಾಂತರ ಸಾರ್ವಜನಿಕರ ಮದ್ಯೆ ಶುಕ್ರವಾರ ಹಬ್ಬದ ಕೊನೆಯದಿನ ತೆರೆ ಎಳೆಯಲಾಯಿತು.ಮೊಹರಂ 9ನೇ ದಿನ ರಾತ್ರಿಯಿಡೀ ಪಟ್ಟಣದ ಕಿಲ್ಲಾ ಹಾಗೂ ಮೇಗಳಪೇಟೆ ಹಸನ್ ಹುಸೇನಿ ಆಲಂ ಸವಾರಿ ಜರುಗಿತು. ಸವಾರಿ ಅಂಗವಾಗಿ ಕಿಲ್ಲಾ ಮತ್ತು ಮೇಗಳಪೇಟೆ ದರ್ಗಾಕ್ಕೆ ರಾತ್ರಿಯಿಡೀ ಭಕ್ತಸಾಗರವೇ ಹರಿದು ಬಂದಿತು. 10ನೇ ದಿನ ಬೆಳಗಿನ ಜಾವ ಸವಾರಿ ಅತ್ಯಂತ ಸಂಭ್ರಮ ಸಡಗರದಿಂದ ಜರುಗಿತು. ಪಟ್ಟಣದ ಮೇಗಳಪೇಟೆಯಲ್ಲಿ ಹಸನ್ ಆಲಂ ದರ್ಗಾ ಮತ್ತು ಕಿಲ್ಲಾದಲ್ಲಿ ಹುಸೇನಿ ಆಲಂ ದರ್ಗಾಕ್ಕೆ ಬೆಳಿಗ್ಗೆಯಿಂದಲೆ ಭಕ್ತ ಸಾಗರ ಹರಿದು ಬಂದು ತಮ್ಮ ಇಷ್ಟಾರ್ಥ ಸಿದ್ದಿಗೆ ಬೇಡಿಕೊಂಡು ವಿವಿಧ ರೀತಿಯಲ್ಲಿ ಹರಕೆ ತೀರಿಸಿದರು. ಹುಲಿ ಕುಣಿತ, ಹೆಜ್ಜೆ ಕುಣಿತಗಳ ತಂಡಗಳು ಕೂಡ ಆಗಾಗ್ಗೆ ಆಗಮಿಸಿ ತಮ್ಮ ಇಷ್ಟಾರ್ಥ ಸಿದ್ಧಿಗೆ ಬೇಡಿಕೊಂಡರು. 10ನೇ ದಿನದ ಬೆಳಗಿನ ಜಾವ 3 ಘಂಟೆಗೆ ಸವಾರಿ ಜರುಗಿತು. ಸಹಸ್ರಾರು ಭಕ್ತರು ತಮ್ಮ ಇಷ್ಟದಂತೆ ಕೊಬ್ಬರಿ ಸುಡುವದು, ಸಿಡಿ ಮದ್ದು ಮುಗಿಲೆತ್ತರಕ್ಕೆ ಸಿಡಿಸುವದು, ಕುಣಿಯುವದು ಸರ್ವೆ ಸಾಮಾನ್ಯವಾಗಿ ಕಂಡುಬಂದಿತು. ಕಿಲ್ಲಾ ಹುಸೇನಿ ಸವಾರಿಯುದ್ದಕ್ಕೂ ಆಲಂ ಬಾಗುತ್ತಿದ್ದದ್ದು ಕಂಡು ಬಂದಿತು. ಈ ಘಟನೆಯಿಂದ ಭಕ್ತರು ಯಾಕೀರೀತಿ ಆಗುತ್ತಿದೆ, ಆಲಂನ್ನು ಇಟ್ಟಿಕೊಳ್ಳುವರು ಸರಿಯಾಗಿಲ್ಲವೇ, ಆಲಂ ಹಗ್ಗ ಹಿಡಿಯುವವರು ಸರಿಯಾಗಿ ಇಲ್ಲವೋ? ಆಲಂನ್ನು ಕಟ್ಟುವ ಮುಜಾವರ್‌ಗಳು ನಿರ್ಲಕ್ಷ್ಯ ಬಾವನೆ ತಾಳಿದ್ದಾರೆಯೇ ಎನ್ನುವ ಹತ್ತಾರು ಪ್ರಶ್ನೆಗಳ ಮಾತುಗಳು ಭಕ್ತ ಸಮೂಹದಲ್ಲಿ ಕೇಳಿ ಬರುತ್ತಿದ್ದವು. ಇದೆಲ್ಲರನಡುವೆ ಆಶುರಖಾನಾ ಆಡಳಿತ ಮಂಡಳಿ ಇದ್ದರೂ ಕೂಡ ಆಡಳಿತ ಮಂಡಳಿ ಮತ್ತು ಇನ್ನಿತರರ ಸಿಬ್ಬಂದಿ ನಡುವೆ ಏಕತೆ ಇರುವದಕ್ಕೆ ಈ ರೀತಿ ಆಗಿದೆಯೇ ಎನ್ನುವದು ಕೇಳಿ ಬಂತು. ಮುನ್ನೆಚ್ಚರಿಕೆ ಕ್ರಮವಾಗಿ ಎಲ್ಲರೂ ಒಂದಾಗಿ ಕಾರ್ಯನಿರ್ವಹಿಸಿದರೆ ಈರೀತಿಯಾಗುವದಿಲ್ಲ ಎನ್ನುವ ಅಭಿಪ್ರಾಯ ಮೂಡಿಬಂದಿದೆ. ಈ ರೀತಿಯಅವಘಡಕ್ಕೆ ದರ್ಗಾಕ್ಕೆ ಸವಾರಿ 6–30ಕ್ಕೆ ತಲುಪುವ ಬದಲು 9 ಗಂಟೆಗೆ ತಲುಪಿರುವದು ಭಕ್ತ ಸಮೂಹದಲ್ಲಿ ನಿರಾಶೆಯನ್ನುಂಟು ಮಾಡಿದೆ. ಮೇಗಳಪೇಟೆಯ ಹಸನ್ ಆಲಂ ಸವಾರಿ ವಾಡಿಕೆಯಂತೆ ಸಂಭ್ರಮದಿಂದ ದರ್ಗಾದಿಂದ ಬಾಗಲಕೋಟೆ ರಸ್ತೆ ಮುಂದಿರುವ ಈದ್ಗ ಮೈದಾನದತ್ತ ಆಗಮಿಸಿ ಮರಳಿ ದರ್ಗಾ ಸೇರಿತು. ಆಲಂಗಳು ಮುಂದೆ ಸಾಗುತ್ತಿದ್ದಂತೆ ಭಕ್ತ ಸಮೂಹ ಘೋಷಣೆಗಳನ್ನು ಕೂಗುತ್ತಿರುವದು ಸರ್ವೆ ಸಾಮಾನ್ಯವಾಗಿ ಕಂಡುಬಂದಿತು.

# ಎಬಿಸಿ ಯೋಜನೆ ಜಾರಿಗೆ ಆಗ್ರಹ: ಸಿಂಧನೂರಿನಲ್ಲಿ ಬೀದಿ ನಾಯಿಗಳ ಕಾಟಕ್ಕೆ ಕೊನೆ ಯಾವಾಗ?

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ಜೂ.27.ನಗರದಲ್ಲಿ ದಿನದಿಂದ ದಿನಕ್ಕೆ ಬೀದಿನಾಯಿಗಳ ಸಂಖ್ಯೆಮಿತಿಮೀರುತ್ತಿದ್ದು, ಸಾರ್ವಜನಿಕರು,ಮಹಿಳೆಯರುಮತ್ತುಶಾಲಾ ಮಕ್ಕಳು ಓಡಾಡಲು ಭಯಪಡುವಂತಾಗಿದೆ. ಈ ಕುರಿತು ಕೂಡಲೇ ಸರ್ಕಾರಿ ನಿಯಮದಂತೆ ಕ್ರಮ ಕೈಗೊಳ್ಳುವಂತೆ 'ಶ್ರೀ ಷಾ ಮಕಾಂದರ್ ಜನಪರ ಸೇವಾ ಸಮಿತಿ'ಯು ಆಗ್ರಹಿಸಿದೆ.ರಾತ್ರಿ ವೇಳೆ ಗುಂಪುಗೂಡಿರಸ್ತೆಗಳಲ್ಲಿಓಡಾಡುವನಾಯಿಗಳು ವಾಹನ ಸವಾರರನ್ನು ಅಟ್ಟಾಡಿಸುತ್ತಿರುವ ಪ್ರಕರಣಗಳು ಹೆಚ್ಚಾಗಿವೆ. ಆಟವಾಡುವ ಮಕ್ಕಳ ಮೇಲೆ ಹಾಗೂ ರಸ್ತೆಗಳಲ್ಲಿ ಸಂಚರಿಸುವ ಹಿರಿಯ ನಾಗರಿಕರ ಮೇಲೆ ನಾಯಿಗಳ ದಾಳಿಯ ಭೀತಿ ಮನೆಮಾಡಿದೆ. ನಗರದಲ್ಲಿ ಕಸದ ಸಮರ್ಪಕ ವಿಲೇವಾರಿ ಇಲ್ಲದಿರುವುದು, ಹೋಟೆಲ್ ಮತ್ತುಮಾರುಕಟ್ಟೆಪ್ರದೇಶಗಳಲ್ಲಿ ಕಸ ಬಿಸಾಡುತ್ತಿರುವುದು ನಾಯಿಗಳ ಸಂ–ಖ್ಯೆ ಹೆಚ್ಚಳಕ್ಕೆ ಪ್ರಮುಖ ಕಾರಣವಾಗಿದೆ. ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಇರುವ 'ಅನಿಮಲ್ ಬರ್ತ್ ಕಂಟ್ರೋಲ್' (ABC) ಯೋಜನೆಯನ್ನು ಸಮರ್ಪಕವಾಗಿ ಜಾರಿಗೆ ತರಬೇಕು. ಈ ಯೋಜನೆಯಡಿ ಬೀದಿ ನಾಯಿಗಳನ್ನು ಹಿಡಿದು, ಶಸ್ತ್ರಚಿಕಿತ್ಸೆ ಮೂಲಕ ಸಂತಾನಶಕ್ತಿ ನಿಯಂತ್ರಿಸಬೇಕು ಮತ್ತು ರೇಬೀಸ್ ಲಸಿಕೆಯನ್ನು ಕಡ್ಡಾಯವಾಗಿ ನೀಡಬೇಕು ಎಂದು ಸಮಿತಿ ಒತ್ತಾಯಿಸಿದೆ.ಈಗಾಗಲೇ ಬೀದಿ ನಾಯಿಗಳ ಹಾವಳಿಯ ಬಗ್ಗೆ ಸ್ಥಳೀಯರು ಅನೇಕ ಬಾರಿ ದೂರು ನೀಡಿದ್ದರೂ, ಇದುವರೆಗೂ ಯಾವುದೇ ಶಾಶ್ವತ ಪರಿಹಾರ ಸಿಕ್ಕಿಲ್ಲ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಎಚ್ಚೆತ್ತುಕೊಂಡು ಸಾರ್ವಜನಿಕರ ಸುರಕ್ಷತೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಸೂಕ್ತ ಕ್ರಮ ಕೈಗೊಳ್ಳಬೇಕು. ಒಂದು ವೇಳೆ ಬೀದಿ ನಾಯಿಗಳಿಂದ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆ ಅಥವಾ ಅನಾಹುತಗಳು ಸಂಭವಿಸಿದಲ್ಲಿ, ಅದಕ್ಕೆ ನೇರವಾಗಿ ಸಂಬಂಧಪಟ್ಟ ಅಧಿಕಾರಿಗಳೇ ಹೊಣೆಗಾರರಾಗುತ್ತಾರೆ.ಅಂತಹ ಸಂದರ್ಭದಲ್ಲಿ ಅವರ ವಿರುದ್ಧ ಕಾನೂನು ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಸಮಿತಿಯ ಪದಾಧಿಕಾರಿಗಳು ಎಚ್ಚರಿಸಿದ್ದಾರೆ.


# ಪ್ರವಾಸಿಗರನ್ನು ಕೈಬೀಸಿ ಕರೆಯುತ್ತಿರುವ ಮಿರ್ಜಾನ್ ಕೋಟೆಯ ಹಸಿರು ವೈಭವ



ಪ್ರವಾಸಿಗರ ಪಾಲಿನ ಸ್ವರ್ಗದಂತಿರುವ ಉತ್ತರ ಕನ್ನಡ ಜಿಲ್ಲೆಯ ಕೆಲವೇ ಕೆಲವು ಪ್ರದೇಶಗಳಲ್ಲಿ ಕುಮಟಾ ತಾಲೂಕಿನ ಇತಿಹಾಸ ಸಾರುವ ಮಿರ್ಜಾನ್ ಕೋಟೆ ಪ್ರಮುಖವಾದದ್ದು. ಈ ಕೋಟೆಯು ಕುಮಟಾ ತಾಲೂಕಿನ ಮಿರ್ಜಾನ್ ಗ್ರಾಮದಲ್ಲಿದೆ. ಗೋಕರ್ಣದಿಂದ ಸುಮಾರು 23 ಕಿಮಿ ದೂರದಲ್ಲಿರುವ ಮಿರ್ಜಾನ್ ಕೋಟೆ, ಕುಮಟಾ ಪಟ್ಟಣದಿಂದ 10.5 ಕಿಮಿ ದೂರದಲ್ಲಿದೆ. ನಾವು ಕಾಣಬಹುದಾದ ಉತ್ತಮ ಸ್ಥಿತಿಯಲ್ಲಿರುವ ಕೋಟೆಗಳಲ್ಲಿ ಇದು ಕೂಡಾ ಒಂದಾಗಿದೆ. ಇದು ಅಘನಾಶಿನಿ ನದಿಯ ತಟದಲ್ಲಿದ್ದು ಅದರಾಚೆಗೆ ಅರಬ್ಬೀ ಸಮುದ್ರವನ್ನು ಹೊಂದಿದೆ.

ಸುಮಾರು 11.5 ಎಕರೆಗಳಷ್ಟು ವಿಸ್ತಾರವಾದ ಪ್ರದೇಶದಲ್ಲಿ ಈ ಕೋಟೆಯಿದ್ದು ನೋಡಲು ತುಂಬಾ ಆಕರ್ಷಕವಾಗಿದೆ. ಈ ಕೋಟೆಯು ಕರಾವಳಿ ಪ್ರದೇಶದಲ್ಲಿ ಕಂಡುಬರುವ ಜಂಬಿಟ್ಟಿಗೆ ಕಲ್ಲಿನಿಂದ (ಲ್ಯಾಟರೈಟ್) ನಿರ್ಮಾಣವಾಗಿದ್ದು, ಇಂದಿಗೂ ಅದರ ಗೋಡೆಗಳು ಗಟ್ಟಿಯಾಗಿವೆ. ಇದರಲ್ಲಿ ಒಂದು ಮುಖ್ಯ ದ್ವಾರಗಳಿದ್ದು, ಮೂರು ಉಪ ದ್ವಾರಗಳು ಕಂಡುಬರುತ್ತವೆ. ಕೋಟೆಯ ಸುತ್ತ ತಗ್ಗು ಪ್ರದೇಶವಿದ್ದು ಹಲವಾರು ಗುಪ್ತದ್ವಾರಗಳನ್ನು ಹೊಂದಿದೆ. ಅದಲ್ಲದೇ ಇಲ್ಲಿ ಹಲವಾರು ಕಂದಕಗಳು, ದರ್ಬಾರ ಹಾಲ್, ರಾಣಿಯ ಸಿಂಹಾಸನ, ಪಾಕಶಾಲೆ, ಮಾರುಕಟ್ಟೆ ದೇವಸ್ಥಾನ, ಈ ಕೋಟೆಯಲ್ಲಿ 9 ಭಾವಿಗಳನ್ನು ಕಾಣಬಹುದಾಗಿದೆ. ಅದಲ್ಲದೇ ಕೋಟೆಯ ಧ್ವಜ ಸ್ತಂಭ, ಕಾವಲು ಗೋಪುರ ಅಲ್ಲಿಂದ ಕಾಣುವ ಅಘನಾಶಿನಿ ನದಿ ನೋಡುಗರನ್ನು ಆಕರ್ಷಿಸುವುದಂತು ಸುಳ್ಳಲ್ಲ.ಕರ್ನಾಟಕದ ಇತಿಹಾಸದಲ್ಲಿ ಕಾಳುಮೆಣಸಿನ ರಾಣಿ ಎಂದೇ ಪ್ರಖ್ಯಾತಿಗೊಂಡಿದ್ದ ಸಾಳುವ ವಂಶದ ಗೇರುಸೊಪ್ಪೆಯ ರಾಣಿ ಚೆನ್ನಭೈರಾದೇವಿ ಈ ಕೋಟೆಯನ್ನು 16 ನೇ ಶತಮಾನದಲ್ಲಿ ನಿರ್ಮಿಸಿದ್ದಾಳೆ ಎಂದು ಇತಿಹಾಸದ ಪುಟಗಳಲ್ಲಿ ಉಲ್ಲೇಖಿಸಲಾಗಿದೆ. ಈ ಕೋಟೆಯನ್ನು ಕಟ್ಟಿರುವವರ ಕುರಿತು ಹಲವಾರು ಭಿನ್ನಾಭಿಪ್ರಾಯಗಳಿವೆ. ಹೆಚ್ಚಿನವರ ಪ್ರಕಾರ ಇದು ಗೇರುಸೊಪ್ಪೆಯ ರಾಣಿ ಕಟ್ಟಿರುವುದು ಎಂಬ ಮಾತು ಸ್ಥಳೀಯವಲಯದಲ್ಲಿದೆ. ಹಾಗೇ ಸರ್ಫ್‌ಉಲ್ ಮಲ್ಲಿಕ್ ನಿರ್ಮಿಸಿದ ಎಂದು ಕೂಡ ಹೇಳಲಾಗುತ್ತಿದೆ. ರಾಣಿ ಚೆನ್ನಭೈರಾದೇವಿಯು ವಿಜಯನಗರ ಅರಸರ ಸಾಮಂತ ರಾಣಿಯಾಗಿದ್ದು ಸುಮಾರು 54 ವರ್ಷಗಳ ಕಾಲ ಈ ಪ್ರಾಂತ್ಯವನು ರಾಜ್ಯಭಾರ ಮಾಡಿರುವುದು ವಿಶೇಷವಾಗಿದೆ. ಈ ರಾಣಿಯ ಆಳ್ವಿಕೆಯಅವಧಿಯಲ್ಲಿ ವ್ಯಾಪಾರ ವಹಿವಾಟು ಜೋರಾಗಿಯೇ ಇತ್ತು. ಈ ಪ್ರದೇಶವು ಅಕ್ಕಿ ಮತ್ತು ಕಾಳುಮೆಣಸಿನ ವ್ಯಾಪಾರದ ಪ್ರಮುಖ ಕೇಂದ್ರವಾಗಿತ್ತು.ಉತ್ತರಕನ್ನಡ ಜಿಲ್ಲೆ ಪ್ರವಾಸಿಗರ ತವರೂರು. ಇಲ್ಲಿಯ ಗೋಕರ್ಣ, ಮುರುಡೇಶ್ವರ, ಇಡಗುಂಜಿ ಗಣೇಶನ ಸನ್ನಿಧಿಗೆ ಬರುವ ಪ್ರವಾಸಿಗರಿಗೆ ಮಿರ್ಜಾನ್ ಕೋಟೆ ಕೂಡ ಒಂದು ಸುಂದರ ತಾಣ. ಈಗ ಮಳೆಗಾಲದಿಂದಾಗಿ ಇಡೀ ಕೋಟೆಯೇ ಹಚ್ಚಹಸಿರಾಗಿ ಕಾಣುತ್ತದೆ.





ಲೇಖನ : ನಾಗರಾಜ ಮಂಜಗುಣಿ, ಅಂಕೋಲಾ

# 6.68 ಲಕ್ಷ ರೂ. ಮಾದಕ ವಸ್ತು ವಿಲೇವಾರಿ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ದಿನಾಂಕ 26.06.2026 ರಂದು ಸೂರ್ಯಕಾಂತ ಎನ್‌ವಿರಾನ್‌ಮೆಂಟ್ ಟೆಕ್ನಾಲಜೀಸ್, ಜೈವಿಕವೈದ್ಯಕೀಯ ವಿಲೇವಾರಿ ಘಟಕ, ಹರಗಿನಡೋಣಿಯಲ್ಲಿ ಬಳ್ಳಾರಿ ಜಿಲ್ಲೆಯ ವಿವಿಧ ಠಾಣೆಗಳಲ್ಲಿ ವಿವಿಧ ಪ್ರಕರಣಗಳಲ್ಲಿ ಜಪ್ತುಪಡಿಸಿಕೊಳ್ಳಲಾಗಿದ್ದ ರೂ. 6,68,655/– ಮೌಲ್ಯದ 15.740 ಕೆ.ಜಿ ಗಾಂಜಾವನ್ನು ವಿವಿಧ ನ್ಯಾಯಾಲಯಗಳ ಆದೇಶದಂತೆ, ಡಾ. ಸುಮನ್ ಡಿ.ಪೆನ್ನೇಕರ್, ಪೊಲೀಸ್ ಅಧೀಕ್ಷಕರು ಹಾಗೂ ಜಿಲ್ಲಾ ಮಾದಕ ವಸ್ತುಗಳ ವಿಲೇವಾರಿ ಸಮಿತಿಯ ಅಧ್ಯಕ್ಷರು, ಎನ್. ನವೀನ್ ಕುಮಾರ್‌ಹೆಚ್ಚುವರಿ ಪೊಲೀಸ್ ಅಧೀಕ್ಷಕರು ಹಾಗೂಎ.ಎನ್.ಟಿ.ಎಫ್. ನೋಡಲ್ ಅಧಿಕಾರಿಗಳು,ವಿ. ಗೋವಿಂದ ರಾಜುಲು ಡಿ.ಎಸ್.ಪಿ ಹಾಗೂ ಜಿಲ್ಲಾ ಮಾದಕ ವಸ್ತುಗಳ ವಿಲೇವಾರಿ ಸಮಿತಿಯ ಸದಸ್ಯರು, ಪಿ.ಮುರಳಿಧರ ಡಿ.ಎಸ್.ಪಿ ಹಾಗೂ ಜಿಲ್ಲಾ ಮಾದಕ ವಸ್ತುಗಳ ವಿಲೇವಾರಿ ಸಮಿತಿಯ ಸದಸ್ಯರು, ಶ್ರೀಮತಿ ಭಾಗ್ಯಲಕ್ಷ್ಮಿ ಪಿ.ಎಸ್.ಐ ಹಾಗು ಜಿಲ್ಲಾ ಮಟ್ಟದ ಮಾದಕ ವಸ್ತುಗಳ ವಿಲೇವಾರಿ ಸಮಿತಿಯ ನೋಡಲ್ ಅಧಿಕಾರಿಗಳ ಸಮ್ಮುಖದಲ್ಲಿ ವಿಲೇವಾರಿ/ನಾಶಪಡಿಸಿದ್ದಾರೆ.

# ರಾಮಮಂದಿರ ನೂರು ಕೋಟಿ ಹಣ ಲೂಟಿ ಹಾಲಿ ನ್ಯಾಯಾಧೀಶರಿಂದ ತನಿಖೆಗೆ ಉಗ್ರಪ್ಪ ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರಾಮಮಂದಿರ ನಿರ್ಮಾಣಕ್ಕೆ 1990 ರಿಂದ ಇಟ್ಟಿಗೆ ಯಾತ್ರೆ ರಥಯಾತ್ರೆ ಸೇರಿದಂತೆ ಹಲವಾರು ಯಾತ್ರೆಗಳ ಮೂಲಕ ಸಾವಿರಾರು ಕೋಟಿ ರೂಪಾಯಿಗಳನ್ನು ಸಂಗ್ರಹಿಸಿದ ರಾಮ ಮಂದಿರ ನಿರ್ಮಾಣ ಸಮಿತಿಯ ಸದಸ್ಯರುಗಳು ಹಲವಾರು ಕೋಟಿ ರೂಪಾಯಿಗಳ ಭ್ರಷ್ಟಾಚಾರ ಎಸಿಗಿದ್ದಾರೆ ಹಾಲಿ ನ್ಯಾಯಾಧೀಶರಿಂದ ತನಿಖೆ ಮಾಡಿಸಿದಲ್ಲಿ ಭ್ರಷ್ಟಾಚಾರ ಎಸಿಗಿದವರು ಸಿಕ್ಕಿ ಬೀಳಲಿದ್ದಾರೆ ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ಸಾಧ್ಯವಾಗುತ್ತದೆ ಎಂದು ಮಾಜಿ ಸಂಸದ ವಿ ಎಸ್ ಉಗ್ರಪ್ಪ ಆಗ್ರಹಿಸಿದರು.

ಅವರು ಇಂದು ನಗರದ ಸರ್ಕಾರಿ ಅತಿಥಿಗೃಹದಲ್ಲಿ ಸುದ್ದಿಗೋಷ್ಠಿಯನ್ನು ನಡೆಸಿ ಮಾತನಾಡಿ, ಶ್ರೀರಾಮ ದೇಶದ ಆಸ್ಮಿತೆ ಮತ್ತು ಪ್ರತೀಕವಾಗಿದ್ದಾರೆ , ಶ್ರೀ ರಾಮನ ಹೆಸರು ಹೇಳಿ ಇಂತಹ ಅಕ್ರಮ ಎಸಿಗಿರುವುದು ಶ್ರೀರಾಮನಿಗೆ ಮಾಡಿದ ಈ ಶತಮಾನದ ದೊಡ್ಡ ಅವಮಾನವಾಗಿದೆ, ಈ ಕುರಿತು ದೇಶದ ಪ್ರಧಾನಿ ನರೇಂದ್ರ ಮೋದಿ ಆಗಲಿ ಗೃಹ ಮಂತ್ರಿ ಅಮಿತ್ ಶಾ ಮತ್ತು ಆರ್ ಎಸ್ ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಆಗಲಿ ಮಾತಾಡುತ್ತಿಲ್ಲ ಅವರು ಕೇವಲ ಎಆರ್ ಮತ್ತು ಇತರ ವಿಷಯಗಳೊಂದಿಗೆ ಇಂತಹ ಘಟನೆಗಳನ್ನು ಮರೆಮಾಚುತ್ತಾರೆ ಎಂದರು.

ನನ್ನಸೋದರಳಿಯ ಬಳ್ಳಾರಿಯ ಬಿ ಶ್ರೀರಾಮುಲು ರಾಮಾಯಣದ ಕರ್ತೃ ವಾಲ್ಮೀಕಿ ಮೂರ್ತಿ ವಿಷಯದಲ್ಲಿ ಗೊಂದಲವನ್ನು ನಿವಾರಿಸಿಲ್ಲ ಅವರಿಗೆ ಕೇವಲ ರಾಮ ಬೇಕು ಹನುಮ ಬೇಕು ವಾಲ್ಮೀಕಿ ಬೇಕಿಲ್ಲ ಎಂದು ವ್ಯಂಗ್ಯವಾಡಿದ ಉಗ್ರಪ್ಪ, ಚಿತ್ರದುರ್ಗ ಬಳ್ಳಾರಿ ರಾಯಚೂರು ಸೇರಿದಂತೆ ಹಲವು ವಿಧಾನಸಭಾ ಕ್ಷೇತ್ರ ಮತ್ತು ಲೋಕಸಭಾ ಕ್ಷೇತ್ರಗಳನ್ನು ಪರಿಶಿಷ್ಟ ಪಂಗಡ ಮತ್ತು ಜಾತಿಯವರಿಗೆ ಮೀಸಲಾತಿ ಕಲ್ಪಿಸಲು ನಾನು ಮತ್ತು ವೀರಣ್ಣನವರು ಹೋರಾಟ ಮಾಡಿದ್ದೆವು ಮತ್ತು ಪರಿಶಿಷ್ಟ ಪಂಗಡದ ಮೀಸಲಾತಿಯನ್ನು ಹೆಚ್ಚಿಸಲು ಸಹ ನಾವು ವಿವಿಧ ಸರ್ಕಾರಗಳನ್ನು ಆಗ್ರಹಿಸಿದ್ದವು ಆದರೆ ಶ್ರೀರಾಮುಲು ಮಾತ್ರ ಮೀಸಲಾತಿ ನಾನೇ ಕಲ್ಪಿಸಿದ್ದು ಎಂದು ಹೇಳಿಕೊಳ್ಳುತ್ತಾ ತಿರುಗುತ್ತಿದ್ದಾನೆ ಎಂದರು. ಅವರಿಗೆ ವಾಲ್ಮೀಕಿ ಜನಾಂಗದ ಬಗ್ಗೆ ನೈತಿಕತೆಯಿದ್ದಲ್ಲಿ ವಿಧಾನಸೌಧ ಹತ್ತಿರ ಇರುವ ವಾಲ್ಮೀಕಿ ತಪವನದಲ್ಲಿ ಬಂದು ನನ್ನ ಜೊತೆ ಚರ್ಚೆ ಮಾಡಲಿ ಎಂದು ಸವಾಲು ಹಾಕಿದರು, ಈ ರೀತಿಯಾಗಿ ಬೇರೆಯವರ ಕೆಲಸಗಳನ್ನು ಬಿ ಶ್ರೀರಾಮುಲು ನಾನು ಮಾಡಿದೆ ಎನ್ನುವುದು ಅವರ ಅಸಂಸ್ಕೃತಿಯನ್ನು ತೋರಿಸುತ್ತದೆ ಅವರು ಸಭ್ಯತೆ ಮತ್ತು ಸಂಸ್ಕೃತಿಯನ್ನು ಮೊದಲು ಕಲಿಯಲಿ ಎಂದರು. ಈ ಪತ್ರಿಕಾಗೋಷ್ಠಿಯಲ್ಲಿ ಮೇಯರ್ ಪಿ ಗಾದೆಪ್ಪ ಬೋಯಾ ಪಾರ್ಟಿ ವಿಷ್ಣು ಎಲ್ ಮಾರಣ್ಣ ವೆಂಕಟೇಶ್ ಹೆಗಡೆ ಹವಂಭಾವಿ ಲೋಕೇಶ್ ಶ್ರೀನಿವಾಸ್ ಗಂಗಾಧರ್ ಸೇರಿದಂತೆ ಇತರರಿದ್ದರು.

# ನಾಡಪ್ರಭು ಕೇಂಪೇಗೌಡರ ಜಯಂತಿ ಆಚರಣೆ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಜೂ 27:ನಾಡ ಪ್ರಭು ಕೆಂಪೇಗೌಡರ 517ನೇ ಜಯಂತಿಯನ್ನು ನಗರದ ತಾಲೂಕು ಕಛೇರಿಯ ಉಪವಿಭಾಗಾಧಿಕಾರಿ ಸಭಾಂಗಣದಲ್ಲಿ ತಾಲೂಕು ಆಡಳಿತದ ವತಿಯಿಂದ ನಾಡ ಪ್ರಭು ಕೆಂಪೇಗೌಡರ ಭಾವ ಚಿತ್ರಕ್ಕೆ ಗಣ್ಯರಿಂದ ಪುಷ್ಪಾರ್ಚನೆ ಮಾಡಿ ಆಚರಿಸಲಾಯಿತು

ನಂತರ ಕಾರ್ಯಕ್ರಮದಲ್ಲಿತಾಲೂಕು ರಾಷ್ಟ್ರೀಯ ಹಬ್ಬಗಳ ಸಮಿತಿಯ ಅಧ್ಯಕ್ಷರು ಹಾಗು ತಹಸೀಲ್ದಾರ್ ಮಂಜುನಾಥ್ ಅಧ್ಯಕ್ಷತೆ ವಹಿಸಿ ಮಾತನಾಡಿ ನಗರ ಕನಸು ಹೊತ್ತ ಕೆಂಪೇಗೌಡರು ಮೇಧಾವಿಗಳ ಸಲಹೆ ಸೂಚನೆ ಸ್ವೀಕರಿಸಿ ನಗರದಲ್ಲಿ ಕೋಟೆ ಇರಬೇಕು,ವ್ಯಾಪಾರಕ್ಕೆ ಪೇಟೆ ಇರಬೇಕು. ಕೃಷಿಗೆ ನೀರಿಗೆ ಕೆರೆಗಳು ಬೇಕು, ಸುಂದರ ನಗರ–ಕ್ಕೆ ಉದ್ಯಾನವನಗಳಿರಬೇಕು. ಆಧ್ಯಾತ್ಮ ಹಾಗು ಪ್ರಾರ್ಥನೆಗೆ ದೇವಾಲಯಗಳಿರಬೇಕು. ಹೀಗೆ ಯೋಜಿಸಿ ನಾಲ್ಕು ಹೊನ್ನಾರು ಕಟ್ಟಿ ನಾಲ್ಕು ದಿಕ್ಕಿಗೂ ಬಿಟ್ಟು ಗಡಿ ಗುರುತಿಸಿ ಬೆಂಗಳೂರಿನ ನಿರ್ಮಾಣಕ್ಕೆ ಪಣ ತೊ ಟ್ಟರು. ಕರ್ನಾಟಕದ ಚರಿತ್ರೆಯಲ್ಲಿ ನಾಡ ಪ್ರಭು ಕೆಂಪೇಗೌಡರ ಹೆಸರು ಸದಾ ಸ್ಮರಣೀಎಂದರು..

ಮುಖ್ಯ ಭಾಷಣಕಾರರಾಗಿ ಪ್ರೊ. ಎಚ್ ಆರ್. ಸಿದ್ದೇಗೌಡರು ಮಾತನಾಡಿ ವಿಜಯನಗರ ಸಾಮ್ರಾಜ್ಯದ ಅರಸರು ಕೃಷ್ಣದೇವರಾಯರ ಆಳ್ವಿಕೆಯಿಂದ ಪ್ರೇರಣೆ ಗೊಂಡ ಯುವ ಕೆಂಪೇಗೌಡರು ಸಂಕಲ್ಪ ತೊಟ್ಟು ಅವರ ಸಹಕಾರ ದಿಂದಲೇ ಇಂದಿನ ಬೆಂಗಳೂರಿಗೆ 500ವರ್ಷಗಳ ಹಿಂದೆಯೇ ಅಡಿಪಾಯ ಹಾಕಿದ ನಿರ್ಮಾತೃ ಇವರು.ಅವರ ಪ್ರಜಾಸತ್ತಾತ್ಮಕ ನಿಲುವು ಎಲ್ಲ ಸಮುದಾಯಗಳು ಬೆಂಗಳೂರಿನಲ್ಲಿ ಅಭಿವೃದ್ಧಿ ಹೊಂದುತ್ತ ಸಮನ್ವಯತೆ ಯಿಂದ ಬಾಳುವುದಕ್ಕೆ ನಾಂದಿಯಾಯಿತು ಎಂದರು.

ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿ ಸಾಧನೆ ಗೈದ ಯಶಸ್ವಿನಿ, ಲಲಿತ ಹಾಗು ಸ್ನೇಹ ರವರನ್ನು ಅವರ ಪೋಷಕರ ಸಮ್ಮುಖದಲ್ಲಿ ಶಾ ಲು ಹೊದಿಸಿ ಸಭೆ ಗೌರವಿಸಿ ಶುಭ ಹಾರೈಸಿತು

ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಗಣೇಶ ಗೌಡ ಮಾತನಾಡಿದ್ದಾರೆ ಮೀನು ಮನೆ ಪಾಂಡು ಡಿ ಕುಮಾರ್ ಚಿರಂಗೂರು ಬಸವರಾಜ್ ಸತೀಶ್ ಪಾಪಣ್ಣನಿವೃತ್ತ ಇ ಒ ಬಾಲಕೃಷ್ಣ, ಕಿರಂಗೂರ್ ಬಸವರಾಜು, ರೈತಸಂಘದ ಹೊಸೂರ್ ಕುಮಾರ್, ವಕೀಲರು ಯೋಗಾನಂದ,, ಡೀಡ್ ಶ್ರೀಕಾಂತ್, ಬಿ ಇ ಒ ಕಾಳನಾಯಕ್, ಪೋಲಿಸ್ ಅಧಿಕಾರಿ ಶಿವಾಜಿ ರಾವ್ ಪವಾರ್ , ಪರಿಶಿಷ್ಟ ವರ್ಗಗಳ ಆಧಿಕಾರಿ ಗಂಗಾಧರ್, ನಗರಾಯುಕ್ತೆ ಮಾನಸ, ಶಶಿಕುಮಾರ್ ಹಾಗು ವಿವಿಧ ಇಲಾಖೆಗಳ ಅಧಿಕಾರಿ ಕೆಂಪೇಗೌಡರ ಅಭಿಮಾನಿಗಳು ಉಪಸ್ಥಿತರಿದ್ದರು

# ಬಳ್ಳಾರಿ: ಇಂದು ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಆಸ್ಪತ್ರೆ ಇವರ ಸಂಯುಕ್ತಾಶ್ರಯದಲ್ಲಿ ಜೂನ್ 28 ರಂದು ಬೆಳಿಗ್ಗೆ 9.30 ಗಂಟೆಗೆ ನಗರದ ಜಿಲ್ಲಾ ಆಸ್ಪತ್ರೆಯ ಮುಂಭಾಗದಲ್ಲಿರುವ ಎಮ್.ಸಿ.ಹೆಚ್ ಆಸ್ಪತ್ರೆಯ ಆವರಣದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ಶಾಸಕ ನಾರಾ ಭರತ್‌ರೆಡ್ಡಿ ಅವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಲಿದ್ದಾರೆ.

ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದ ಈ. ತುಕಾರಾಮ್, ಕೊಪ್ಪಳ ಸಂಸದ ಕೆ.ರಾಜಶೇಖರ ಬಸವರಾಜ ಹಿಟ್ನಾಳ್ ಹಾಗೂ ರಾಜ್ಯಸಭಾ ಸದಸ್ಯ ಡಾ. ಸೈಯದ್ ನಾಸೀರ್ ಹುಸೇನ್, ಕಂಪ್ಲಿ ಕ್ಷೇತ್ರದ ಶಾಸಕರು ಹಾಗೂ ಕಾವೇರಿ ಹ್ಯಾಂಡ್‌ಲೂಮ್ಸ್ ಅಧ್ಯಕ್ಷರಾದ ಜೆ.ಎನ್.ಗಣೇಶ್, ಬಳ್ಳಾರಿ ಗ್ರಾಮೀಣ ಕ್ಷೇತ್ರದ ಶಾಸಕ ಬಿ. ನಾಗೇಂದ್ರ, ಸಿರುಗುಪ್ಪ ಕ್ಷೇತ್ರದ ಶಾಸಕ ಬಿ. ಎಮ್.ನಾಗರಾಜ, ಸಂಡೂರು ಕ್ಷೇತ್ರದ ಶಾಸಕರಾದ ಈ. ಅನ್ನಪೂರ್ಣ ಮತ್ತು ವಿಧಾನಪರಿಷತ್ ಸದಸ್ಯರುಗಳಾದ ಡಾ.ಚಂದ್ರಶೇಖರ ಬಿ. ಪಾಟೀಲ, ಶಶೀಲ್ ಜಿ ನಮೋಶಿ, ವೈ.ಎಂ.ಸತೀಶ್, ಡಾ. ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಪಿ. ಗಾದೆಪ್ಪ, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್‌ನ ಉಪಾಧ್ಯಕ್ಷ ಹೆಚ್. ಲಕ್ಷ್ಮಣ ಹಾಗೂ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ ಚಿದಾನಂದಪ್ಪ ಅವರು ಪಾಲ್ಗೊಳ್ಳಲಿದ್ದಾರೆ.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ.ಪಿ., ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರ ಪಾಲಿಕೆ ಆಯುಕ್ತ ಮಂಜುನಾಥ್ ಪಿ.ಎಸ್ ಅವರು ಉಪಸ್ಥಿತರಿರಲಿದ್ದಾರೆ.ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ ಹಾಗೂ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಬಳ್ಳಾರಿಯಲ್ಲಿ ಕೆಂಪೇಗೌಡ ಜಯಂತಿ ಆಚರಣೆ ಮಹನೀಯರ ಆದರ್ಶಗಳು ಇಂದಿನ ತಲೆಮಾರಿಗೆ ದಾರಿದೀಪ: ಪಿ.ಗಾದೆಪ್ಪ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನಾಡಿನ ಏಳಿಗೆಗಾಗಿ ಶ್ರಮಿಸಿದ ಎಲ್ಲಾ ಮಹನೀಯರ ಜಯಂತಿಗಳನ್ನು ಸರ್ಕಾರವು ಸಡಗರದಿಂದ ಆಚರಿಸುವ ಮೂಲಕ ಅವರ ಕೊಡುಗೆಗಳನ್ನು ಸ್ಮರಿಸುತ್ತಿದೆ ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ಭಾನುವಾರ ಆಯೋಜಿಸಿದ್ದ ಶ್ರೀ ಕೆಂಪೇಗೌಡ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮೆಲ್ಲರ ಹೆಮ್ಮೆಯ ಬೆಂಗಳೂರು ನಗರದ ನಿರ್ಮಾತೃ, ನಾಡಪ್ರಭು ಕೆಂಪೇಗೌಡರ ಜಯಂತಿಯನ್ನು ಕರ್ನಾಟಕ ಸರ್ಕಾರದ ವತಿಯಿಂದ ರಾಜ್ಯಾದ್ಯಂತ ಅತ್ಯಂತ ವೈವಿಧ್ಯಮಯವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಇಂದು ನಾವು ಅನುಭವಿಸುತ್ತಿರುವ ಸುಂದರ ಪರಿಸರ, ನಮ್ಮ ಊರು, ನಾಡು, ಜಲ, ಮತ್ತು ಭಾಷೆಯ ಶ್ರೀಮಂತಿಕೆಗೆ ಅಂದಿನ ಮಹಾತ್ಮರ ಮತ್ತು ಹಿರಿಯರ ನಿಸ್ವಾರ್ಥ ಕೊಡುಗೆಯೇ ಕಾರಣ. ಈ ಇತಿಹಾಸ ಮತ್ತು ಮಹನೀಯರ ಸಾಧನೆಗಳನ್ನು ಇಂದಿನ ವಿದ್ಯಾರ್ಥಿ ದೆಸೆಯ ಯುವ ಪೀಳಿಗೆಗೆ ಮನವರಿಕೆ ಮಾಡಿಕೊಡುವುದು ಮತ್ತು ಅವರ ಆದರ್ಶಗಳನ್ನು ಸಮಾಜದಲ್ಲಿ ಮರುಸ್ಥಾಪಿಸುವುದು ಈ ಜಯಂತಿ ಆಚರಣೆಗಳ ಮುಖ್ಯ ಉದ್ದೇಶವಾಗಿದೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡರು ತೀರಾ ಚಿಕ್ಕವಯಸ್ಸಿನಲ್ಲೇ ಶ್ರೀಕೃಷ್ಣದೇವರಾಯರ ಆಸ್ಥಾನಕ್ಕೆ ಭೇಟಿ ನೀಡಿದ್ದರು. ವಿಜಯನಗರ ಸಾಮ್ರಾಜ್ಯದ ವೈಭವ, ಅಲ್ಲಿನ ಸಂಪತ್ತು, ಕಟ್ಟಡಗಳು ಹಾಗೂ ದೇವಸ್ಥಾನಗಳನ್ನು ಕಂಡು ಪ್ರೇರಿತರಾಗಿದ್ದ ಅವರು, ತಾವೂ ಕೂಡ ಇಂತಹದೊಂದು ಸುಂದರ ನಾಡನ್ನು ಕಟ್ಟಬೇಕೆಂಬ ದೊಡ್ಡ ಕನಸನ್ನು ಕಂಡಿದ್ದರು. ಅವರ ಆ ಕನಸಿನ ಫಲವೇ ಇಂದಿನ ಬೆಂಗಳೂರು ಎಂದು ಅವರು ಸ್ಮರಿಸಿದರು.

ಈಗಿನ ಯುವಪೀಳಿಗೆ ಕೆಂಪೇಗೌಡರಂತೆಯೇ ನಾಡು ಕಟ್ಟಬೇಕೆಂದೇನಿಲ್ಲ. ಸಮಾಜದಲ್ಲಿ ಒಬ್ಬ ಜಿಲ್ಲಾಧಿಕಾರಿ, ಎಸ್‌ಪಿ, ರಾಜಕಾರಣಿ, ಸಂಗೀತಗಾರ ಅಥವಾ ಯಶಸ್ವಿ ಪುರುಷರನ್ನು ನೋಡಿದಾಗ, ನಾನು ಕೂಡ ಅವರಂತೆ ಸಾಧನೆ ಮಾಡಬೇಕೆಂಬ ದೊಡ್ಡ ಕನಸನ್ನು ಕಾಣಬೇಕು. ಆ ಕನಸನ್ನು ನನಸಾಗಿಸಲು ಶ್ರಮಿಸುವುದೇ ನಾವು ಕೆಂಪೇಗೌಡರಿಗೆ ಸಲ್ಲಿಸುವ ನಿಜವಾದ ಗೌರವ ಎಂದರು.

ಕೆಂಪೇಗೌಡರು ಅತ್ಯಂತ ದೂರದೃಷ್ಟಿಯಿಂದ ಬೆಂಗಳೂರನ್ನು ನಿರ್ಮಿಸಿದ್ದರು. ನಾಡಿನ ರಕ್ಷಣೆಗಾಗಿ ಕೋಟೆ, ವ್ಯಾಪಾರಕ್ಕಾಗಿ ಪೇಟೆ, ದೇವರ ಸ್ಮರಣೆಗಾಗಿ ದೇವಸ್ಥಾನಗಳು ಹಾಗೂ ಪ್ರಾಣಿ–ಪಕ್ಷಿ ಮತ್ತು ಪರಿಸರಕ್ಕಾಗಿ ಸಾವಿರಾರು ಕೆರೆಗಳು ಹಾಗೂ ಉದ್ಯಾನವನಗಳನ್ನು ನಿರ್ಮಿಸಿದರು. ಇವತ್ತು ಬೆಂಗಳೂರು ಜಾಗತಿಕ ಮಟ್ಟದಲ್ಲಿ ಸಿಲಿಕಾನ್ ಸಿಟಿಯಾಗಿ ಬೆಳಗುತ್ತಿರುವುದಕ್ಕೆ ಇಲ್ಲಿನ ಪ್ರಕೃತಿಯ ಕೊಡುಗೆ ಹಾಗೂ ಕೆಂಪೇಗೌಡರ ದೂರದೃಷ್ಟಿಯೇ ಕಾರಣ. ಅಲ್ಲದೆ, ಜಾತಿ, ಭಾಷೆಗಳ ಭೇದವಿಲ್ಲದೆ ಎಲ್ಲ ರಾಜ್ಯಗಳ ಜನರಿಗೂ ಆಶ್ರಯ ನೀಡಿರುವ ಬೆಂಗಳೂರು ಇವತ್ತು ಸಾಂಸ್ಕೃತಿಕ ವೈವಿಧ್ಯತೆಯ ಹೆಮ್ಮೆಯ ಸಂಕೇತವಾಗಿದೆ ಎಂದು ಶ್ಲಾಘಿಸಿದರು.

ಕೆಂಪೇಗೌಡರ 'ಸರ್ವರನ್ನೂ ಒಳಗೊಳ್ಳುವ' ತತ್ವದಡಿಯೇ ಪ್ರಸ್ತುತ ಕಾಂಗ್ರೆಸ್ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದ ಅವರು, ಮಹಿಳೆಯರ ಸಬಲೀಕರಣಕ್ಕಾಗಿ ಜಾರಿಗೆ ತಂದಿರುವ ಶಕ್ತಿ ಯೋಜನೆ, ಗೃಹಲಕ್ಷ್ಮಿ, ಗೃಹಜ್ಯೋತಿ, ಯುವನಿಧಿ ಹಾಗೂ ಅನ್ನಭಾಗ್ಯ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಇತ್ತೀಚೆಗೆ ವಿದ್ಯಾರ್ಥಿನಿಯರಂತೆ ವಿದ್ಯಾರ್ಥಿಗಳಿಗೂ ಉಚಿತ ಬಸ್ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮಹತ್ವದ ನಿರ್ಧಾರ ಕೈಗೊಂಡಿರುವುದನ್ನು ಈ ಸಂದರ್ಭದಲ್ಲಿ ಶ್ಲಾಘಿಸಿದರು.ಕುರುಗೋಡು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗದ ಸಹ ಪ್ರಾಧ್ಯಾಪಕ ಡಾ.ಶಶಿಕಾಂತ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಕೆಂಪೇಗೌಡರು ಯಲಹಂಕ ನಾಡಪ್ರಭುಗಳಾಗಿದ್ದ ಜಯಗೌಡರ ವಂಶಸ್ಥರು. ಇವರ ತಂದೆ ಕೆಂಪನಂಜೇಗೌಡರು. ಕ್ರಿ.ಶ. 1510 ರಲ್ಲಿ ಜನಿಸಿದ ಕೆಂಪೇಗೌಡರು ಚಿಕ್ಕಂದಿನಿಂದಲೇ ಧೀರರೂ, ಕಲೆ ಮತ್ತು ಸಾಹಿತ್ಯಪ್ರೇಮಿಗಳೂ ಆಗಿದ್ದರು. ಕೆಂಪೇಗೌಡರು ನ್ಯಾಯಶಾಸ್ತ್ರ, ಇತಿಹಾಸ, ಭೂಗೋಳಶಾಸ್ತ್ರ, ತರ್ಕಶಾಸ್ತ್ರ, ತತ್ವಶಾಸ್ತ್ರಗಳ ಜೊತೆಗೆ ಖಡ್ಗ ವಿದ್ಯೆ, ಆಡಳಿತ, ಧರ್ಮನಿಷ್ಠೆ, ರಾಜ್ಯಭಾರ ಹಾಗೂ ಯುದ್ಧ ಕಲೆಗಳನ್ನು ಕರಗತ ಮಾಡಿಕೊಂಡರು. ಕ್ರಿ.ಶ. 1515ರಲ್ಲಿ ಮೊದಲ ಬಾರಿಗೆ ವಿಜಯನಗರ ಸಾಮ್ರಾಜ್ಯಕ್ಕೆ ಭೇಟಿ ನೀಡಿದ್ದರು ಎಂದು ಕೆಂಪೇಗೌಡರ ಜೀವನ ಚರಿತ್ರೆ ಪ್ರಸ್ತುತಪಡಿಸಿದರು.ಕಾರ್ಯಕ್ರಮದಲ್ಲಿ ಸಂವಿಧಾನ ಪ್ರಸ್ತಾವನೆಯನ್ನು ಬೋಧಿಸಲಾಯಿತು. ಬಳ್ಳಾರಿಯ ಎಸ್.ಲಕ್ಷ್ಮಿ ಪವನ್ ಕುಮಾರ್ ತಂಡ ಭಕ್ತಿ ಸಂಗೀತ ಕಾರ್ಯಕ್ರಮ ನೆರವೇರಿಸಿಕೊಟ್ಟರು. ಡಾ.ಗಿರೀಶ್ ಕುಮಾರ್ ಗೌಡ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಮುಖಂಡರಾದ ವಿಷ್ಣು ಸೇರಿದಂತೆ ವಿವಿಧ ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಕೊಟ್ಟೂರು ಪಂಚಮಸಾಲಿ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಮತ್ತು ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು

ಜೂ 27: ಕೊಟ್ಟೂರು ತಾಲೂಕು ಪಂಚಮಸಾಲಿ ಸಮುದಾಯದ ವತಿಯಿಂದ ಪಂಚಮಸಾಲಿ ಪ್ರತಿಭಾವಂತ ಮಕ್ಕಳಿಗೆ ಶುಕ್ರವಾರ ಮರುಳುಸಿದ್ದೇಶ್ವರ ಕಲ್ಯಾಣ ಮಂಟಪದಲ್ಲಿ ಪ್ರತಿಭಾ ಪುರಸ್ಕಾರ ಸನ್ಮಾನ ಸಮಾರಂಭ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮವನ್ನು ಪಂಚಸಾಲಿ ತಾಲೂಕು ಪಧಾದಿಕಾರಿಗಳು ಕಿತ್ತೂರು ರಾಣಿ ಚೆನ್ನಮ್ಮ ಭಾವಚಿತ್ರಕ್ಕೆ ಪುಷ್ಪಹಾಕುವುದರ ಮೂಲಕ ಚಾಲನೆ ನೀಡಿದರು.

ಪಂಚಮಸಾಲಿ ಅಧ್ಯಕ್ಷರಾದ ಚಾಪಿ ಚಂದ್ರಪ್ಪ ರವರು ಪ್ರಾಸ್ತಾವಿಕ ನುಡಿಯಲ್ಲಿ ಮಾತನಾಡಿ

ಪಂಚಮಸಾಲಿ ಸಮುದಾಯ 2020 ನೇ ಸಾಲಿನಿಂದಲೂ ಇಲ್ಲಿಯವರೆಗೆ ಸಮುದಾಯದ ಪ್ರತಿಭಾವಂತ ಮಕ್ಕಳಿಗೆ ನಿರಂತರವಾಗಿ ಪ್ರತಿವರ್ಷ ಸನ್ಮಾನ ಮಾಡಿ ಗೌರವಿಸುತ್ತಾ ಬಂದಿದ್ದೇವೆ. ಈ ಕಾರಣಕ್ಕಾದರೂ ನಮ್ಮ ಸಮುದಾಯ ಒಂದುಕಡೆ ಸೇರಿ ಪ್ರೀತಿ ವಿಶ್ವಾಸ, ಸಂತೋಷಗಳ ಹಂಚಿಕೊಳ್ಳುವ ವೇದಿಯಾಗಿದೆ ಎಂದು ಹೇಳಿದರು.

ಬಸಾಪುರದ ಪಂಪಾಪತಿ ಮಾತನಾಡಿ ಸಮೂದಾಯದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಬರಬೇಕು. ಸಮುದಾಯದ ಮಕ್ಕಳಲ್ಲಿ ಶೇ 90 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡುವುದರ ಜೊತೆಗೆ ಪ್ರೋತ್ಸಾಹ ಧನ ನೀಡುವಂತಾಗಲಿ.

ಪಂಚಮಸಾಲಿ ಸಹಕಾರಿ ಬ್ಯಾಂಕ್ ನಿಂದ 1.27 ಕೋಟಿ ಹಣವನ್ನು ಸಾಲ ನೀಡಲಾಗಿದೆ. ಸಮುದಾಯದ ಬ್ಯಾಂಕ್ ಸದೃಢವಾಗಿ ಬೆಳೆಯುತ್ತಿದೆ. ಸಮುದಾಯದಲ್ಲಿ ಉಳ್ಳವರು ಅರ್ಥಿಕ ಸಹಕಾರ ನೀಡಬೇಕು ಎಂದು ಹೇಳಿದರು.

ನಮ್ಮ ಸಮುದಾಯದ ಮುಖಂಡರು 90 ಕ್ಕಿಂತ ಹೆಚ್ಚು ಅಂಕಪಡೆದ ವಿದ್ಯಾರ್ಥಿಗಳನ್ನು ಸನ್ಮಾನ ಮಾಡಿ ಪ್ರೋತ್ಸಾಹ ನೀಡುವುದರಿಂದ ನಮ್ಮಲ್ಲಿ ಆತ್ಮವಿಶ್ವಾಸ, ನಂಬಿಕೆ, ಶಕ್ತಿ ನೀಡಿದಂತೆ ಆಗುತ್ತದೆ. ನಾವೆಲ್ಲರೂ ಸಮುದಾಯಕ್ಕೆ ಆಭಾರಿಗಳಾಗಿದ್ದೇವೆ ಎಂದು ಪ್ರತಿಭಾವಂತ ವಿಧ್ಯಾರ್ಥಿನಿ ಶ್ರಾವಣಿ ಸಮುದಾಯ ಮುಖಂಡರಿಗೆ ಅಭಿನಂದನೆ ನುಡಿ ಸಲ್ಲಿಸಿದರು. ಮಕ್ಕಳು ಮಾನಸಿಕ ಕಿನ್ನತೆಗೆ ಹೆಚ್ಚಿನ ಸಂಖ್ಯೆಯಲ್ಲಿ ಒಳಗಾಗುತ್ತಿದ್ದಾರೆ. ತಂದೆ ತಾಯಿಯರು ಮಕ್ಕಳ ಎದುರು ಒಬ್ಬರನ್ನೊಬ್ಬರು ಬಿಟ್ಟುಕೊಟ್ಟು ಮಾತನಾಡಬಾರದು ನಿಮ್ಮ ಒಗ್ಗಟ್ಟಿನಲ್ಲಿ ಮಕ್ಕಳ ಭವಿಷ್ಯ ಮತ್ತು ಜೀವನ ನಿಂತಿದೆ. ಮಕ್ಕಳು ಭವಿಷ್ಯತ್ತಿನಲ್ಲಿ ಒಂದೇ ಆಯ್ಕೆಗೆ ಸೀಮಿತವಾಗಬೇಡಿ ಅನೇಕ ಹುದ್ದೆಗಳು ಇವೆ ಅವುಗಳನ್ನ ಆಯ್ಕೆ ಮಾಡಿಕೊಳ್ಳಿ ವಕೀಲ ವೃತ್ತಿ ಕೂಡ ಒಂದು ಶ್ರೇಷ್ಠವಾದದ್ದು. ಮಕ್ಕಳ ಕಲಿಕೆಯಲ್ಲಿ ತಾಯಿ ಪಾತ್ರ ಮೊದಲಿದೆ. ಹೆಣ್ಣು ಮಕ್ಕಳನ್ನು ಕಿತ್ತೂರು ರಾಣಿ ಚೆನ್ನಮ್ಮನಂತೆ, ಧೈರ್ಯ, ಚಾಣಕ್ಷತನ ಬುದ್ಧಿಶಕ್ತಿ ತುಂಬಿ ಬೆಳಸಿ. ನಮ್ಮ ಬದುಕಿನ ಮಿತ್ರ ಹಾಗೂ ಶತ್ರು ನಮ್ಮ ವರ್ತನೆಯೇ ಆಗಿರುತ್ತದೆ ಎಂದು ಸವಿತಾ ರಮೇಶ್ ವಕೀಲರು ತಮ್ಮ ಪ್ರೇರಣಾ ನುಡಿಯಲ್ಲಿ ಹೇಳಿದರು.

ನಮ್ಮ ಪಂಚಮಸಾಲಿ ಬ್ಯಾಂಕ್ ಅತ್ಯಂತ ಬಲಿಷ್ಠವಾಗಿ ಬೆಳೆಯುತ್ತಿದೆ. ನಮ್ಮ ಎಲ್ಲಾ ನಿರ್ದೇಶಕ ಹಾಗೂ ಸಮುದಾಯ ಮುಖಂಡರ ಪಾತ್ರ ಮಹತ್ವದ್ದಾಗಿದೆ. ಪಂಚಮಸಾಲಿ ಬ್ಯಾಂಕ್ ರಚನೆಗೊಳ್ಳಲು ಅನೇಕರ ಶ್ರಮವಿದೆ ಎಂದು ಅವರೆಲ್ಲರನ್ನೂ ಸ್ಮರಿಸಿದರು. ನಮ್ಮ ಬ್ಯಾಂಕ್ 10 ಲಕ್ಷದವರೆಗೂ ಸಾಲಕೊಡುವಷ್ಟು ಬಲಿಷ್ಠವಾಗಿದೆ. ತಂದೆ ತಾಯಿಗೆ ಗೌರವ ಕೊಡದ ಮಕ್ಕಳಿಂದ ಯಶಸ್ಸು ,ಸಾಧನೆ ನಿರೀಕ್ಷೆ ಮಾಡಲು ಅಸಾಧ್ಯ, ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ಬಹಳ ಮುಖ್ಯ. ಮಕ್ಕಳಲ್ಲಿ ವ್ಯಾಪಾರ ಗುಣ ಬೆಳೆಸಬೇಕು ಎಂದು ಪಂಚಮಸಾಲಿ ಬ್ಯಾಂಕ್ ಅಧ್ಯಕ್ಷ ವಿವೇಕಾನಂದ ಹೇಳಿದರು. 2025–26 ನೇ ಸಾಲಿಗೆ ಎಸ್. ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು. ನಲ್ಲಿ ಶೇ 90% ಕ್ಕಿಂತ ಹೆಚ್ಚು ಅಂಕ ಪಡೆದ 68 ವಿಧ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು. ಸಮುದಾಯ ನೌಕರ ಸಂಘದ ಅಧ್ಯಕ್ಷ ಮರುಳುಸಿದ್ದಪ್ಪ, ಗಾಯತ್ರಿ ಅಶೋಕ, ಹಳ್ಳಿ ಅಶೋಕ, ತುಪ್ಪದ ವೀರೇಶ್, ಇತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು. ತಾಲೂಕು ಮಟ್ಟದ ಎಲ್ಲಾ ಸಮುದಾಯ ಮುಖಂಡರು ,ನೌಕರರು, ಜನರು ಭಾಗವಹಿಸಿದ್ದರು.

# ಎಂಎಸ್‌ಎಂಇಗಳಿಂದ ಗ್ರಾಮೀಣ ಮತ್ತು ನಗರ ಆರ್ಥಿಕ ಅಂತರ ಕಡಿಮೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ




ಗ್ರಾಮೀಣ ಮತ್ತು ನಗರ ಪ್ರದೇಶಗಳ ಆರ್ಥಿಕ ಅಂತರವನ್ನು ಕಡಿಮೆ ಮಾಡಿ ಉದ್ಯೋಗ ಸೃಷ್ಟಿಸುವಲ್ಲಿ ಎಂಎಸ್‌ಎಂಇಗಳ ಪಾತ್ರ ಮಹತ್ತರವಾದದ್ದು ಎಂದು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಅವರು ತಿಳಿಸಿದ್ದಾರೆ.

ಭಾರತೀಯ ಚಾರ್ಟರ್ಡ್ ಅಕೌಂಟೆಂಟ್ಸ್ ಸಂಸ್ಥೆಯ ಎಂಎಸ್‌ಎಂಇ ಮತ್ತು ಸ್ಟಾರ್ಟಅಪ್ ಸಮಿತಿ ಹಾಗೂ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ಶನಿವಾರ ಆಚರಿಸಲ್ಪಟ್ಟ 'ಅಂತಾರಾಷ್ಟ್ರೀಯ ಎಂಎಸ್‌ಎಂಇ' ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ಕೈಗಾರಿಕಾ ಉತ್ಪಾದನೆ, ಉದ್ಯೋಗ ಸೃಷ್ಟಿ ಹಾಗೂ ರಫ್ತು ವಹಿವಾಟಿನಲ್ಲಿ ಎಂಎಸ್‌ಎಂಇ ಕ್ಷೇತ್ರದ ಕೊಡುಗೆ ಮಹತ್ತರವಾದದ್ದು. ಈ ನಿಟ್ಟಿನಲ್ಲಿ ಚಾ–ರ್ಟೆಡ್ ಅಕೌಂಟೆಂಟ್‌ಗಳ ಮಾರ್ಗದರ್ಶನ, ಹಣಕಾಸು ಶಿಸ್ತು ಮತ್ತು ವ್ಯವಹಾರ ನಿರ್ವಹಣಾ ಸಲಹೆಗಳು ಎಂಎಸ್‌ಎಂಇ ಹಾಗೂ ಸ್ಟಾರ್ಟಅಪ್‌ಗಳ ಬೆಳವಣಿಗೆಗೆ ಪೂರಕವಾಗಿದೆ ಎಂದರು.

ಸಿಎ. ಸಿರಿಗೇರಿ ಪನ್ನರಾಜ ಅವರು, ಎಂಎಸ್‌ಎಂಇ ಕ್ಷೇತ್ರವು ಪ್ರಗತಿಯ ಮೂಲ ಕೇಂದ್ರ. ದೇಶದ ಅಭಿವೃದ್ಧಿ, ಆರ್ಥಿಕ ಸ್ಥಿರತೆ ಮತ್ತು ದುಡಿಮೆಯನ್ನು ಎಂಎಸ್‌ಎಂಇಗಳು ಸಂಕೇತಿಸುತ್ತವೆ. ಉದ್ಯೋಗ ಸೃಷ್ಟಿಸಿ, ಸ್ವಯಂ ಉದ್ಯೋಗ ನಿರ್ಮಾಣ ಮಾಡುವಲ್ಲಿ, ಕ್ರಿಯಾಶೀಲ, ಕ್ರಿಯಾತ್ಮಕವಾದ ಚಟುವಟಿಕೆಗಳನ್ನು ನಿರ್ವಹಿಸುವಲ್ಲಿ ಎಂಎಸ್‌ಎಂಇಗಳ ಪಾತ್ರ ದೊಡ್ಡದು ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರು, ತಂತ್ರಜ್ಞಾನ, ಆಧುನೀಕತೆ ಮತ್ತು ನಾವೀನ್ಯತೆಗಳಲ್ಲಿ ದೇಶದಲ್ಲಿ ಸ್ಟಾರ್ಟಅಪ್ ಸಂಸ್ಕೃತಿ ವೇಗವಾಗಿ ಬೆಳೆಯುತ್ತಿದೆ. ಕೇಂದ್ರ ಸರ್ಕಾರ ಎಂಎಸ್‌ಎಂಇಗಳಿಗೆ ನೀಡುತ್ತಿರುವ ಪ್ರೋತ್ಸಾಹವನ್ನು ಯುವ ಸಮೂಹ ಸದುಪಯೋಗ ಮಾಡಿಕೊಂಡು ಆರ್ಥಿಕ ಮತ್ತು ಸಾಮಾಜಿಕ ಪ್ರಗತಿ ಸಾಧಿಸಬೇಕು ಎಂದರು.

ಬಳ್ಳಾರಿ ಮಹಾನಗರ ಪಾಲಿಕೆಯ ಮೇಯರ್ ಪಿ. ಗಾದೆಪ್ಪ ಅವರು, ಎಂಎಸ್‌ಎಂಇಗಳಿಗೆ ಸರ್ಕಾರ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದೆ. ಈ ಕುರಿತು ರೈತರು, ಉದ್ಯಮಿದಾರರು ಹೆಚ್ಚಿನ ಮಾಹಿತಿ ಪಡೆದು, ಸ್ವಯಂ ಉದ್ಯೋಗಿಗಳಾಗಬೇಕು ಎಂದರು.

ಸುಧೀರ್ ಚಿತ್ರಗಾರ ಅವರು 'ಸಾವಯವ ಉತ್ಪನ್ನಗಳು ಹಾಗೂ ಉತ್ಪನ್ನಗಳ ರಫ್ತಿಗೆ ಅವಕಾಶಗಳು', ಕೃಷಿ ವಿಜ್ಞಾನಿಗಳಾದ ಡಾ. ನವೀನ್ ಅವರು 'ಸಮರ್ಥ ಸಾವಯವ ಕೃಷಿ' ಡಾ. ಶಿಲ್ಪ ಹೆಚ್. ಅವರು 'ಸಾವಯವ ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ' ವಿಷಯದ ಕುರಿತು ಸಂಪನ್ಮೂಲ ವ್ಯಕ್ತಿಗಳಾಗಿ, ಉಪನ್ಯಾಸ ನೀಡಿದರು.

ಸಾವಯವ ಕೃಷಿಕರಾದ ಎಂ. ಗಾಳೆಪ್ಪ ವೈ. ಭೂದಿಹಾಳ್, ಕರ್ನಾಟಕ ಗ್ರಾಮೀಣ ಬ್ಯಾಂಕ್‌ನ ಡಿ. ಸತೀಶ್ ಕುಮಾರ್, ಎಸ್‌ಬಿಐನ ಮಂಜುನಾಥ್ ಕುಲಕರ್ಣಿ, ಕೆನರಾ ಬ್ಯಾಂಕ್‌ನ ಅರುಣ್ ಕುಮಾರ್ ಎ.ಜಿ, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಹಿರಿಯ ಉಪಾಧ್ಯಕ್ಷರಾದ ಎಸ್. ದೊಡ್ಡನಗೌಡ, ಆದಾಯ ತೆರಿಗೆ ಸಮಿತಿಯ ಚೇರ್ಮನ್ ಸಿಎ ಕೆ. ರಾಜಶೇಖರ ಅವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಭಾರತೀಯ ಚಾರ್ಟರ್ಡ್ ಅಕೌಂಟೆಂಟ್ಸ್ ಸಂಸ್ಥೆಯ ಬಳ್ಳಾರಿ ಶಾಖೆಯ ಅಧ್ಯಕ್ಷರಾದ ಸಿಎ ಪುರುಷೋತ್ತಮ ರೆಡ್ಡಿ ಸ್ವಾಗತಿಸಿದರು. ಕಾರ್ಯದರ್ಶಿಗಳಾದ ಸಿಎ ಶರಣ ಪಾಟೀಲ್ ಕಾರ್ಯಕ್ರಮ ನಿರೂಪಿಸಿದರು. ಸಿಎ ವಿಶ್ವನಾಥ ಆಚಾರಿ ವಂದನಾರ್ಪಣೆ ಸಲ್ಲಿಸಿದರು.

# ಹಿಂದೂ ಮುಸ್ಲಿಂ ಏಕತೆಯನ್ನು ಪ್ರದರ್ಶಿಸುವ ಮೊಹರಂ

• ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು



ಭಾರತದಲ್ಲಿ, ಶಿಯಾ ಮುಸ್ಲಿಂ ಸಮುದಾಯವು ಮೊಹರಂ ಅನ್ನು ಶೋಕಾಚರಣೆಯ ದಿನವಾಗಿಯೂ ಆಚರಿಸುತ್ತದೆ. ಅವರು ಪ್ರವಾದಿ ಮುಹಮ್ಮದ್ ಅವರ ಮೊಮ್ಮಗ ಇಮಾಮ್ ಹುಸೇನ್ ಮತ್ತು ಅವರ ಸಹಚರರು ಕ್ರಿ.ಶ. 680 ರಲ್ಲಿ ಕರ್ಬಲಾ ಕದನದಲ್ಲಿ ಹುತಾತ್ಮರಾದದ್ದನ್ನು ಸ್ಮರಿಸುತ್ತಾರೆ. ಶಿಯಾ ಮುಸ್ಲಿಮರು ಈ ಸಂದರ್ಭವನ್ನು ಸ್ಮರಿಸಲು "ತಾಜಿಯಾ" ಮತ್ತು "ಆಲಂ" ಎಂಬ ಮೆರವಣಿಗೆಗಳಲ್ಲಿ ಭಾಗವಹಿಸುತ್ತಾರೆ. ಮೆರವಣಿಗೆಗಳ ಸಮಯದಲ್ಲಿ, ಅವರು ಇಮಾಮ್ ಹುಸೇನ್ ಅವರ ಸಮಾಧಿಯ ಪ್ರತಿಕೃತಿಗಳನ್ನು, ವರ್ಣರಂಜಿತ ಧ್ವಜಗಳೊಂದಿಗೆ ಒಯ್ಯುತ್ತಾರೆ ಮತ್ತು ಅವರ ನೆನಪಿಗಾಗಿ ಶೋಕಗೀತೆಗಳನ್ನು ಪಠಿಸುತ್ತಾರೆ.

ಭಾರತ ದೇಶ ಸೇರಿದಂತೆ ಕರ್ನಾಟಕದಲ್ಲಿ ಬಹಳ ಅದ್ದೂರಿಯಾಗಿ ಮುಸ್ಲಿಮರು ಮತ್ತು ಹಿಂದೂಗಳು ಒಟ್ಟಾಗಿ ಆಚರಿಸುವ ಮಹತ್ವದ ಹಬ್ಬವೆಂದರೆ ಮೊಹರಂ. ಈ ಹಬ್ಬವು ಹಿಂದೂ ಮತ್ತು ಮುಸ್ಲಿಂರ ಭಾವೈಕ್ಯತೆಯನ್ನು ಸೂಚಿಸುವ ಬಹಳ ಮಹತ್ವದ ಹಬ್ಬವಾಗಿದೆ. ಕೊಟ್ಟೂರು : ವಿಜಯನಗರ ಜಿಲ್ಲೆ ಕೊಟ್ಟೂರು ಪಟ್ಟಣದಲ್ಲಿ 'ಮೊರಹಂ' ಹಬ್ಬದ ಕೊನೆಯ ದಿನವನ್ನು ಬಹಳ ಅದ್ದೂರಿಯಾಗಿ ತಮಟೆ ವಾದ್ಯಗಳ ನೃತ್ಯದೊಂದಿಗೆ , ವಿವಿಧ ವೇಷ ಮತ್ತು ವಿವಿಧ ಉಡುಪುಗಳನ್ನು ಧರಿಸಿ ತಾಳಕ್ಕೆ ತಕ್ಕಂತೆ ಹೆಜ್ಜೆ ಹಾಕುವ ಮೂಲಕ ಬಹಳ ಅದ್ದೂರಿಯಾಗಿ ಮೇರವಣಿಗೆ ಮಾಡುವ ಮೂಲಕ ಆಚರಣೆ ಮಾಡಲಾಯಿತು. ಮಸೀದಿಯ ಮುಂದಿನ 'ಅಳಾಯಿ' (ಅಲಾವಿ) ಕುಣಿತ ತೊಡುವುದರೊಂದಿಗೆ ಆರಂಭವಾಗುತ್ತದೆ. ಅಲ್ಲಿಂದಲೇ ಹಬ್ಬದ ಸಂಭ್ರಮ ಗರಿಬಿಚ್ಚುತ್ತದೆ. ಇದಕ್ಕೆ ಗುದ್ದಲಿ ಹಾಕುವುದು ಎನ್ನುತ್ತಾರೆ. ಆರು ಮಂದಿ ಮುಸ್ಲಿಂರು ಕೂಡಿ ವಾರೇಲಿ ಚಂದಪ್ಪನ ನೋಡಿ ಗುದ್ದಾಲಿ ಹಾಕೋ ಸಡಗರದೊಂದಿಗೆ ಹಬ್ಬ ಆರಂಭವಾಗುತ್ತದೆ.ಕೊಟ್ಟೂರು ತಾಲೂಕಿನ ಹಳ್ಳಿಗಳಲ್ಲಿ ಮೊಹರಂ ಸಂದರ್ಭದಲ್ಲಿ ಹೆಜ್ಜೆ ಮೇಳ ಮತ್ತು ಹುಲಿ ವೇಷಧಾರಿಗಳು ವೈಶಿಷ್ಟ ಪೂರ್ಣವಾದ ವೇಷ ಹಾಕಿ ದೇವರಿಗೆ ಹರಕೆ ತೀರಿಸುತ್ತಾರೆ. ಇತ್ತಿ?ಚಿನ ದಿನಗಳಲ್ಲಿ ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಈ ವೇಷಧಾರಿಗಳ ಸಂಖ್ಯೆ ಕಡಿಮೆಯಾಗಿದ್ದರೂ ಗ್ರಾಮೀಣ ಪ್ರದೇಶಗಳಲ್ಲಿ ಇನ್ನೂ ಇದರ ಸಂಭ್ರಮ ಇದೆ. ಹುಲಿ ವೇಷಧಾರಿಗಳು ಸುಮಾರು 4–5 ದಿನಗಳವರೆಗೆ ದೇವರಿಗೆ ಹರಕೆ ತೀರಿಸುತ್ತಾರೆ. ದೇವರಿಗೆ ಕೃತಜ್ಞತೆ ಸಲ್ಲಿಸಲು ಜನರು ದಾನ ಮಾಡುತ್ತಾರೆ ಮತ್ತು ಬಡವರಿಗೆ ಮತ್ತು ನಿರ್ಗತಿಕರಿಗೆ ಆಹಾರ ಮತ್ತು ಸಿಹಿತಿಂಡಿಗಳನ್ನು ವಿತರಿಸುತ್ತಾರೆ. 9 ನೇ ದಿನ ರಾತ್ರಿ ಕೊಟ್ಟೂರು ತಾಲೂಕಿನ ಹಳ್ಳಿ ಹಾಗೂ ಪಟ್ಟಣದಲ್ಲಿ 'ಮೊರಹಂ' ಹಬ್ಬದಲ್ಲಿ ಧಗಧಗಿಸುವ ಬೆಂಕಿ ಕೆಂಡದ ಮೇಲೆ ನಡೆಯುವುದು ಅಥವಾ ಹಾದು ಹೋಗುವುದು ಒಂದು ಪ್ರಮುಖ ಸಾಂಪ್ರದಾಯಿಕ ಧಾರ್ಮಿಕ ಆಚರಣೆಯಾಗಿದ್ದು, ಇದನ್ನು 'ಆಗ್ ಕಾ ಮಾತಮ್' (Aag Ka Matam) ಅಥವಾ 'ಅಲಾಯಿ ಕುಣಿತ/ಕೆಂಡ ಹಾಯುವುದು' ಎಂದು ಕರೆಯಲಾಗುತ್ತದೆ. ಇಸ್ಲಾಂ ಇತಿಹಾಸದ ಪ್ರಕಾರ, ಮಹಮ್ಮದ್ ಪೈಗಂಬರರ ಮೊಮ್ಮಗ ಇಮಾಮ್ ಹುಸೇನ್ ಮತ್ತು ಅವರ ಕುಟುಂಬದವರು ಕರ್ಬಲಾ ಯುದ್ಧದಲ್ಲಿ ಹುತಾತ್ಮರಾದರು. ಆ ಸಮಯದಲ್ಲಿ ಅವರ ಶಿಬಿರಗಳಿಗೆ ಶತ್ರುಗಳು ಬೆಂಕಿ ಹಚ್ಚಿದಾಗ, ಮಹಿಳೆಯರು ಮತ್ತು ಮಕ್ಕಳು ಉರಿಯುತ್ತಿರುವ ಕೆಂಡಗಳ ಮೇಲೆ ಓಡಬೇಕಾದ ಪರಿಸ್ಥಿತಿ ಬಂದಿತ್ತು. ಆ ನೋವು ಮತ್ತು ತ್ಯಾಗವನ್ನು ಸ್ಮರಿಸಲು ಶಿಯಾ ಮುಸ್ಲಿಂ ಸಮುದಾಯದವರು ಕೆಂಡದ ಮೇಲೆ ನಡೆದು ಶೋಕಾಚರಣೆ (ಮಾತಮ್) ಮಾಡುತ್ತಾರೆ.ಮೊಹರಂ ಹಬ್ಬದ ಕೊನೆಯ ದಿನ ಮಸೀದಿಯಿಂದ ತಮಟೆ ವಾದ್ಯಗಳಿಗೆ ತಕ್ಕ ಹಾಗೆ ಭಕ್ತಿಯನ್ನು ಅಪಿ9ಸಲು ಧರಿಸಿದ ವಿವಿಧ ವೇಷ ಮತ್ತು ಬಣ್ಣದಾರಿಗಳು ಹೆಜ್ಜೆಯನ್ನು ಹಾಕುತ್ತಾ ಭಕ್ತಿಯ ಸಮಪಿ9ಸಿದರೆ, ಸ್ನಾನ ಮಾಡಿ ಬಟ್ಟೆ ಸಮೇತ ಧೀಘ9ದಂಡ ನಮಸ್ಕಾರ ಶೈಲಿಯಲ್ಲಿ ಮಹಿಳಾ ಭಕ್ತರು ಮಲಗಿರುತ್ತಾರೆ. 'ಅಲಾಯಿ' ಹೊತ್ತಿರುವವರು ಇವರನ್ನು ದಾಟಿಕೊಂಡು ಹೋಗುತ್ತಾರೆ. ಅದರಲ್ಲಿ ಹಿಂದೂ ಭಕ್ತರು ಹೆಚ್ಚಾಗಿ ಇರುತ್ತಾರೆ.ಶ್ರೀ ಗುರು ಕೊಟ್ಟೂರೇಶ್ವರ ಸ್ವಾಮಿಯ ದೇವಸ್ಥಾನದ ಮುಂದೆ 'ಅಲಾಯಿ' ದೇವರನ್ನು ಹೊತ್ತವರು ನಿಲ್ಲುತ್ತಾರೆ. ನಂತರ ಶ್ರೀ ಗುರು ಕೊಟ್ಟೂರೇಶ್ವರ ಸ್ವಾಮಿಯು ಪೂಜಾರಿ ಆರತಿಯ ತಟ್ಟೆಯನ್ನು ಹಿಡಿದು ಹೊರಗೆ ಬಂದು 'ಆಲಾಯಿ' ದೇವರಿಗೆ ಆರತಿ ಬೆಳಗಿದ ನಂತರ ಮುಂದಿನ ಕಾರ್ಯಕ್ರಮಕ್ಕೆ ಹೋಗುತ್ತಾರೆ. ಇದನ್ನೆಲ್ಲ ವೀಕ್ಷಣೆ ಮಾಡಿ ನೋಡಿದ ಭಕ್ತರ ಮನಸ್ಸಿನಲ್ಲಿ ರಾಮ, ರೈಹಿಮ, ಅಲ್ಲಾ, ಯೇಸು ಎಲ್ಲಾ ಒಂದೇ ನಾಮ ಮಾತ್ರ ಹಲವು ಎಂಬ ಭಾವನೆ ಭಾಸವಾಗುತ್ತದೆ. ನಂತರ ಗಂಗಾಮಾತೆಗೆ ಪೂಜೆ ಸಲ್ಲಿಸುವ ತಮ್ಮ ಧಾರ್ಮಿಕ ಭಾವನೆಯ ಪೂಜೆ ಸಲ್ಲಿಸಿ. ಹುತಾತ್ಮರಾದ ಇಮಾಮ್ ಹುಸೇನಾ ಮತ್ತು ಅವರ ಸಹಚರರನ್ನು, ದುಃಖದಿಂದ ಸ್ಮರಣೆ ಮಾಡುತ್ತಾ ಮಸೀದಿಗೆ ಹಿಂದಿರುಗುತ್ತಾರೆ ಇಲ್ಲಿಗೆ ಮೊಹರಂ ಹಬ್ಬವು ಕೊನೆಗೊಳ್ಳುತ್ತದೆ.

# ಯಾನಗುಂದಿ ಆಶ್ರಮದ ನೂತನ ದಾಸೋಹ ಕಟ್ಟಡ ಉದ್ಘಾಟನೆ



• ಮಲ್ಲಮ್ಮ ನುಡಿ ವಾರ್ತೆಸೇಡಂ

ಕಲಬುರಗಿ ಜಿಲ್ಲೆ, ಸೇಡಂ ತಾಲೂಕಿನ ಯಾನಗುಂದಿಯ ಶ್ರೀ ಶ್ರೀ ಶ್ರೀ ಮಾತಾ ಮಾಣಿಕೇಶ್ವರಿ ಅಮ್ಮನವರ ಆಶ್ರಮದಲ್ಲಿ ನೂತನ ದಾಸೋಹ ಕಟ್ಟಡದ ಉದ್ಘಾಟನಾ ಸಮಾರಂಭ ಸಾವಿರಾರು ಭಕ್ತರ ಸಮ್ಮುಖದಲ್ಲಿ ಭಕ್ತಿಭಾವದಿಂದ ಗುರುವಾರ ಜರುಗಿತು.

ಕಾರ್ಯಕ್ರಮವು ವಿಶೇಷ ಪೂಜೆ, ಧಾರ್ಮಿಕ ವಿಧಿವಿಧಾನಗಳು ಹಾಗೂ ಭಜನೆಗಳೊಂದಿಗೆ ಆರಂಭಗೊಂಡಿತು. ಬಳಿಕ ಆಶ್ರಮದಲ್ಲಿ ನೆರೆದಿದ್ದ ಸಾವಿರಾರು ಭಕ್ತರಿಗೆ ಮಹಾಪ್ರಸಾದವನ್ನು ವಿತರಿಸಲಾಯಿತು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮಾತಾ ಮಾಣಿಕೇಶ್ವರಿ ಅಮ್ಮನವರ ಗದ್ದುಗೆ ದರ್ಶನ ಪಡೆದು ಆಶೀರ್ವಾದ ಪಡೆದರು.

ಉದ್ಘಾಟನಾ ಸಮಾರಂಭವು ಧಾರ್ಮಿಕ ಶ್ರದ್ಧೆ, ಭಕ್ತಿ ಹಾಗೂ ಸೌಹಾರ್ದತೆಯ ವಾತಾವರಣದಲ್ಲಿ ನೆರವೇರಿದ್ದು, ಆಶ್ರಮದ ಅಭಿವೃದ್ಧಿಯಲ್ಲಿ ನೂತನ ದಾಸೋಹ ಕಟ್ಟಡವು ಮಹತ್ವದ ಮೈಲಿಗಲ್ಲಾಗಲಿದೆ ಎಂದು ಮಾತಾಜಿ ಟ್ರಸ್ಟ್ ಅಧ್ಯಕ್ಷ್ ಶಿವಯ್ಯ ಸ್ವಾಮಿ ಅಭಿಪ್ರಾಯಪಟ್ಟರು.

## ಮೊಹರಂ ಹಬ್ಬದಲ್ಲಿ ಬೆಂಕಿ ತಗುಲಿ ವ್ಯಕ್ತಿ ಸಾವು



**ಬಳ್ಳಾರಿ:** ಇಲ್ಲಿಗೆ ಸಮೀಪದ ಕ್ಯಾದಿಗೆಹಾಳು ಗ್ರಾಮದಲ್ಲಿ ಮೊಹರಂ ಹಬ್ಬದ ಹಿನ್ನೆಲೆಯಲ್ಲಿ ಅಲಾಯಿ ಕುಣಿಗೆ ಬೆಂಕಿ ಹಚ್ಚುವ ಸಂದರ್ಭದಲ್ಲಿ ಕೈಯಲ್ಲಿ ಡಿಸೇಲ್ ಕ್ಯಾನ್ ಹಿಡಿದ ದೇವರಾಜ್ ಅಗಸರ (28) ಎಂಬ ವ್ಯಕ್ತಿಗೆ ಬೆಂಕಿ ತಗುಲಿ, ದೇಹಕ್ಕೆ ಹೊತ್ತಿಕೊಂಡಿದ್ದು ಗಂಭೀರವಾಗಿ ಗಾಯಗೊಂಡಿದ್ದರು.

ತಕ್ಷಣವೇ ಆಸ್ಪತ್ರೆಗೆ ದಾಖಲಿಸಿದರೂ ಪ್ರಯೋಜನವಾಗಿಲ್ಲ ತೀವ್ರ ಗಾಯಗಳಾಗಿದ್ದ ದೇವರಾಜ್ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ ಎಂದು ಗ್ರಾಮಸ್ಥರಿಂದ ತಿಳಿದು ಬಂದಿದೆ.

ಈ ಸಂಬಂಧ ಕುರುಗೋಡು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪಿಎಸ್ಐ ಸುಪ್ರೀತ್ ವಿರುಪಕ್ಷಪ್ಪ ತಿಳಿಸಿದ್ದಾರೆ.

## ಸಮ ಸಮಾಜದ ಕನಸು ಇಂದಿಗೂ ಪ್ರಸ್ತುತ



**ಚಿಕ್ಕಬಳ್ಳಾಪುರ:** ನಾಡಪ್ರಭು ಶ್ರೀ ಕೆಂಪೇಗೌಡರು ಕೇವಲ ಬೆಂಗಳೂರು ನಗರ ನಿರ್ಮಾಪಕರಷ್ಟೇ ಅಲ್ಲ, ಸಮ ಸಮಾಜ, ಸಾಮಾಜಿಕ ನ್ಯಾಯ ಹಾಗೂ ಜನಪರ ಆಡಳಿತದ ಪರಿಕಲ್ಪನೆಯನ್ನು ಕಾರ್ಯರೂಪಕ್ಕೆ ತಂದ ಮಹಾನ್ ಆಡಳಿತಗಾರರಾಗಿದ್ದರು ಎಂದು ಚಿಕ್ಕಬಳ್ಳಾಪುರ ಸಂಸದ ಡಾ. ಕೆ ಸುಧಾಕರ್ ಅವರು ಬಣ್ಣಿಸಿದರು.

ನಗರದ ಕನ್ನಡ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಒಕ್ಕಲಿಗರ ಸಂಘದ ಸಹಯೋಗದಲ್ಲಿ ಶನಿವಾರ ಆಯೋಜಿಸಿದ್ದ" ನಾಡಪ್ರಭು ಶ್ರೀ ಕೆಂಪೇಗೌಡರ ಜಯಂತಿ"ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೆಂಪೇಗೌಡರು ಎಲ್ಲ ವರ್ಗದ ಜನರ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಜಾತಿ, ಧರ್ಮದ ಭೇದವಿಲ್ಲದೆ ಸಮಾನ ಅವಕಾಶಗಳನ್ನು ಕಲ್ಪಿಸುವ ಆಡಳಿತ ವ್ಯವಸ್ಥೆಯನ್ನು ರೂಪಿಸಿದ್ದರು. ವ್ಯಾಪಾರ ಮತ್ತು ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ವಿವಿಧ ಪೇಟೆಗಳನ್ನು ನಿರ್ಮಿಸಿ,ಬೆಂಗಳೂರು ನಗರವನ್ನು ವಾಣಿಜ್ಯ ಕೇಂದ್ರವಾಗಿ ಬೆಳೆಸಿದರು. ನೀರಿನ ಮಹತ್ವವನ್ನು ಅರಿತು ಅನೇಕ ಕೆರೆಗಳು ಹಾಗೂ ಕಾಲುವೆಗಳನ್ನು ನಿರ್ಮಿಸುವ ಮೂಲಕ ಮಳೆನೀರಿನ ಸಂರಕ್ಷಣೆ, ಕೃಷಿ ಅಭಿವೃದ್ಧಿ ಮತ್ತು ಜನರ ಕುಡಿಯುವ ನೀರಿನ ಅಗತ್ಯವನ್ನು ಪೂರೈಸುವ ಶಾಶ್ವತ ವ್ಯವಸ್ಥೆಯನ್ನು ರೂಪಿಸಿದರು.

ಪರಿಸರ ಸಂರಕ್ಷಣೆ, ಸುಸ್ಥಿರ ಅಭಿವೃದ್ಧಿ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಅವರು ಹಾಕಿದ ಅಡಿಪಾಯ ಇಂದಿಗೂ ಮಾದರಿಯಾಗಿದೆ. ಯೋಜನಾಬದ್ಧ ನಗರ ನಿರ್ಮಾಣ, ಉತ್ತಮ ರಸ್ತೆ ಜಾಲ, ಜಲಸಂಪನ್ಮೂಲಗಳ ಸಂರಕ್ಷಣೆ ಹಾಗೂ ಸಾರ್ವಜನಿಕ ಸೌಲಭ್ಯಗಳ ಅಭಿವೃದ್ಧಿಗೆ ಅವರು ನೀಡಿದ ಆದ್ಯತೆ ಆಧುನಿಕ ನಗರಾಭಿವೃದ್ಧಿಗೆ ದಿಕ್ಸೂಚಿಯಾಗಿದೆ.

ಇಂದು ಬೆಂಗಳೂರು ಜಾಗತಿಕ ಮಟ್ಟದಲ್ಲಿ ಮಾಹಿತಿ ತಂತ್ರಜ್ಞಾನ, ಶಿಕ್ಷಣ, ಸಂಶೋಧನೆ ಮತ್ತು ಹೂಡಿಕೆಗಳ ಪ್ರಮುಖ ಕೇಂದ್ರವಾಗಿ ಗುರುತಿಸಿಕೊಂಡಿರುವುದು ಕೆಂಪೇಗೌಡರ ದೂರದೃಷ್ಟಿಯ ಫಲವಾಗಿದೆ. ಅವರ ಚಿಂತನೆಗಳು ಮತ್ತು ಜನಪರ ಆಡಳಿತದ ಮೌಲ್ಯಗಳು ಇಂದಿನ ಸಮಾಜಕ್ಕೂ ಪ್ರೇರಣೆಯಾಗಿದ್ದು, ಅವರ ಆದರ್ಶಗಳನ್ನು ಅಳವಡಿಸಿಕೊಂಡಾಗ ಮಾತ್ರ ಸಮಾನತೆ ಮತ್ತು ಸುಸ್ಥಿರ ಅಭಿವೃದ್ಧಿಯ ಕನಸು ನನಸಾಗಲಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಜಿ ಪ್ರಭು ಅವರು ಮಾತನಾಡಿ ಕೆಂಪೇಗೌಡರು ದೂರದೃಷ್ಟಿಯ ಆಡಳಿತಗಾರರಾಗಿದ್ದು, 16ನೇ ಶತಮಾನದಲ್ಲೇ ಸುಸ್ಥಿರ ಬೆಂಗಳೂರು ನಗರವನ್ನು ನಿರ್ಮಿಸುವ ಮೂಲಕ ಜಗತ್ತಿಗೆ ಮಾದರಿಯಾದ ನಗರಾಭಿವೃದ್ಧಿಯ ಪರಿಕಲ್ಪನೆಯನ್ನು ಸಾಕಾರಗೊಳಿಸಿದ್ದರು ಜನಪರ ಆಡಳಿತ ನೀಡಿದ್ದು, ಕೆರೆಗಳು, ಕೋಟೆಗಳು, ಪೇಟೆಗಳು ಹಾಗೂ ದೇವಾಲಯಗಳನ್ನು ನಿರ್ಮಿಸುವ ಮೂಲಕ ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದರು. ಜಾತಿ, ಧರ್ಮದ ಭೇದವಿಲ್ಲದೆ ಎಲ್ಲ ವರ್ಗದ ಜನರ ಕಲ್ಯಾಣಕ್ಕಾಗಿ ದುಡಿದ ಕಾರಣವೇ ಅವರು ನಾಡಪ್ರಭು ಹಾಗೂ ಪ್ರಜಾಪ್ರಭುವಾಗಿ ಜನಮನದಲ್ಲಿ ಶಾಶ್ವತ ಸ್ಥಾನ ಪಡೆದಿದ್ದಾರೆ ಎಂದು ಹೇಳಿದರು.

ಆದಿಚುಂಚನಗಿರಿ ಶ್ರೀಕ್ಷೇತ್ರದ ಚಿಕ್ಕಬಳ್ಳಾಪುರ ಶಾಖಾ ಮಠದ ಶ್ರೀ ಶ್ರೀ ಮಂಗಳನಾಥ ಸ್ವಾಮೀಜಿ ಆಶೀರ್ವಚನ ನೀಡಿ ಮಾತನಾಡಿ, ಬೆಂಗಳೂರು ನಗರ ಭವಿಷ್ಯದಲ್ಲಿ ಹೇಗಿರಬೇಕು ಎಂಬುದನ್ನು ಶತಮಾನಗಳ ಹಿಂದೆಯೇ ದೂರದೃಷ್ಟಿಯಿಂದ ಯೋಜಿಸಿ ಭದ್ರ ಬುನಾದಿ ಹಾಕಿದ ಮಹಾನ್ ವ್ಯಕ್ತಿ. ಇಂದು ಅಭಿವೃದ್ಧಿಯಲ್ಲಿ ಬೆಂಗಳೂರು ದೇಶದ ಪ್ರಮುಖ ನಗರಗಳಾದ ದೆಹಲಿ ಮತ್ತು ಮುಂಬೈಗೆ ಸಮಾನವಾಗಿ ಗುರುತಿಸಿಕೊಂಡಿದ್ದರೆ, ಅದರ ಹಿಂದೆ ಕೆಂಪೇಗೌಡರ ದೂರದೃಷ್ಟಿಯೇ ಕಾರಣವಾಗಿದೆ. ಕೆಂಪೇಗೌಡರ ಬಗ್ಗೆ ಕೇವಲ ಭಾಷಣ ಮಾಡುವುದಷ್ಟೇ ಸಾಕಾಗುವುದಿಲ್ಲ. ಅವರ ಚಿಂತನೆ, ಮೌಲ್ಯಗಳು ಹಾಗೂ ಜನಪರ ದೃಷ್ಟಿಕೋನವನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಾರ್ವಜನಿಕ ಆಸ್ತಿಗಳನ್ನು ನಿರ್ಮಿಸುವುದಕ್ಕಿಂತ ಅವುಗಳನ್ನು ಸಂರಕ್ಷಿಸುವ ಜವಾಬ್ದಾರಿಯೂ ಸಮಾನವಾಗಿ ಮಹತ್ವದ್ದಾಗಿದೆ. ಆ ಮನೋಭಾವ ಸಮಾಜದಲ್ಲಿ ಬೆಳೆಯಬೇಕಿದೆ ಎಂದು ತಿಳಿಸಿದರು.

ಶಾಸಕ ಪ್ರದೀಪ್ ಈಶ್ವರ್ ಮಾತನಾಡಿ ಕೆಂಪೇಗೌಡರ ಸಾಧನೆಗಳು ಇಂದಿಗೂ ಸಮಾಜಕ್ಕೆ ಪ್ರಸ್ತುತವಾಗಿದ್ದು, ಅವರ ಆಡಳಿತದ ದೂರದೃಷ್ಟಿ ಹಾಗೂ ಜನಪರ ನಿಲುವು ಎಲ್ಲರಿಗೂ ಆದರ್ಶವಾಗಿದೆ. ಅವರ ಮೌಲ್ಯಗಳನ್ನು ಪಾಲಿಸುವ ಮೂಲಕ ಸಮಾಜದ ಅಭಿವೃದ್ಧಿಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಪ್ರಗತಿಪರ ರೈತರನ್ನು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

## ಯೋಜನೆಗಳ ಅನುಷ್ಠಾನದಲ್ಲಿ ವಿಳಂಬ ಸಲ್ಲದು

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ಪ್ರತಿಯೊಂದು ಯೋಜನೆಯ ಅನುಷ್ಠಾನದಲ್ಲಿ ವಿಳಂಬವಾಗದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳೊಂದಿಗೆ ನಡೆದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮ ಪಂಚಾಯತ್ ಮಟ್ಟದಲ್ಲಿ ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು, ಸಾರ್ವಜನಿಕರಿಗೆ ಗುಣಮಟ್ಟದ ಸೇವೆ ಒದಗಿಸುವುದು ಹಾಗೂ ನಿಗದಿತ ಗುರಿಗಳನ್ನು ಸಮಯಕ್ಕೆ ಸರಿಯಾಗಿ ಸಾಧಿಸುವುದು ಅಧಿಕಾರಿಗಳ ಪ್ರಮುಖ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನ, ತೆ-ರಿಗೆ ಸಂಗ್ರಹಣೆ, ಕುಡಿಯುವ ನೀರಿನ ವ್ಯವಸ್ಥೆ,



ಸ್ವಚ್ಛತಾ ಕಾರ್ಯಗಳು, ಮಹಾತ್ಮಗಾಂಧಿ ನರೇಗಾ ಯೋಜನೆ, ಗ್ರಾಮ ಪಂಚಾಯತ್ ಆಡಳಿತ ಹಾಗೂ ಇತರೆ ಪ್ರಮುಖ ಕಾರ್ಯಕ್ರಮಗಳ ಪ್ರಗತಿಯನ್ನು ಪರಿಶೀಲಿಸಿದ ಅವರು, ಯಾವುದೇ ರೀತಿಯ ನಿರ್ಲಕ್ಷ್ಯ ಅಥವಾ ವಿಳಂಬವನ್ನು ಸಹಿಸಲಾಗುವುದಿಲ್ಲ ಎಂದು ಕಟ್ಟುನಿಟ್ಟಾಗಿ ಸೂಚಿಸಿದರು.

ಎಲ್ಲಾ ಇಒ ಹಾಗೂ ಪಿಡಿಓಗಳು ಕ್ಷೇತ್ರಮಟ್ಟದಲ್ಲಿ ನಿಯಮಿತವಾಗಿ ಭೇಟಿ ನೀಡಿ, ಬಾಕಿ ಇರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಹಾಗೂ ಸರ್ಕಾರದ ಯೋಜನೆಗಳ ಫಲಾನುಭವಿಗಳಿಗೆ ಸಮಯೋಚಿತವಾಗಿ ಸೌಲಭ್ಯಗಳನ್ನು ಒದಗಿಸುವಂತೆ ಅವರು ನಿರ್ದೇಶನ ನೀಡಿದರು.

ಗ್ರಾಮ ಪಂಚಾಯತ ತೆರಿಗೆ ಕೇವಲ ಶೇ.15 ರಷ್ಟು ಮಾತ್ರ ವಸೂಲಾತಿ ಆಗಿದ್ದು, ಇಲ್ಲಿಯವರೆಗೆ ಶೇ.25 ರಷ್ಟಾದರೂ ವಸೂಲಾಗಬೇಕಿತ್ತು. ಇ-ತಂತ್ರಾಂಶದಡಿ 11ಎ ಮತ್ತು 11ಬಿ ರಡಿ ಬಾಕಿ ಇರುವ ಎಲ್ಲ ಅರ್ಜಿಗಳನ್ನು ಕೂಡಲೇ ವಿಲೇವಾರಿ ಮಾಡಲು ಬಾಲೆ ಸೂಚಿಸಿದರಲ್ಲದೆ, 15ನೇ ಹಣಕಾಸಿನ ಯೋಜನೆಯಡಿ ಕೆಲವೊಂದು ಗ್ರಾ.ಪಂಗಳಲ್ಲಿ ಅನುದಾನ ಖರ್ಚಾಗದೇ ಹಾಗೆ ಉಳಿಸಿಕೊಂಡಿದ್ದು, ಆಗಸ್ಟ 15 ರೊಳಗಾಗಿ ನಿಯಮಾನುಸಾರ ಖರ್ಚು ಭರಿಸತಕ್ಕದ್ದು. ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಪಂಚಾಯತ ಅಭಿವೃದ್ಧಿ ಅಧಿಕಾರಿ ವಾಸಸ್ಥಳದ ದೃಢೀಕರಣ ಪತ್ರ ನೀಡಲು ತಿಳಿಸಿದರು.

ನಿಗದಿಪಡಿಸಿದ ಗುರಿಗಳನ್ನು ಸಾಧಿಸಲು ವಿಫಲವಾಗುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ವಿರುದ್ಧ ಯಾವುದೇ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು. ಗುರಿ ಸಾಧನೆಗೆ ನಿರ್ಲಕ್ಷ್ಯ, ವಿಳಂಬ ಅಥವಾ ಕರ್ತವ್ಯ ಲೋಪ ಕಂಡುಬಂದಲ್ಲಿ ಸಂಬಂಧಪಟ್ಟವರನ್ನು ನೇರ ಹೊಣೆಗಾರರನ್ನಾಗಿ ಮಾಡಿ ಕಟ್ಟುನಿಟ್ಟಿನ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಎಲ್ಲ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ, ಶೇ.100 ರಷ್ಟು ಗುರಿ ಸಾಧಿಸಲು ಶ್ರಮಿಸಬೇಕು ಎಂದರು.

ಸಭೆಯಲ್ಲಿ ಜಿಪಂ ಉಪ ಕಾರ್ಯದರ್ಶಿ ಎನ್. ವಾಯ್.ಬಸರಿಗಿಡದ, ಮುಖ್ಯ ಯೋಜನಾಧಿಕಾರಿ ಅಲ್ಲಮಪ್ರಭು ಸೇರಿದಂತೆ ಆಯಾ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು ಹಾಗೂ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

## ಗೃಹಲಕ್ಷ್ಮೀ: ಮೃತಪಟ್ಟ ಫಲಾನುಭವಿಗಳ ಡಿಲೀಷನ್‌ಗೆ ಸೂಚನೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ಗೃಹಲಕ್ಷ್ಮೀ ಯೋಜನೆಯಡಿ ಹಣ ಪಡೆಯುತ್ತಿದ್ದ ಮೃತಪಟ್ಟಿರುವ 472 ಫಲಾನುಭವಿಗಳ ಹೆಸರುಗಳನ್ನು ಫಲಾನುಭವಿಗಳ ಪಟ್ಟಿಯಿಂದ ಕೈಬಿಡುವ ಪ್ರಕ್ರಿಯೆಯನ್ನು ತ್ವರಿತವಾಗಿ ಮಾಡುವಂತೆ ಬಾಗಲಕೋಟೆ ಶಾಸಕ ಉಮೇಶ ಮೇಟಿ ಅನುಷ್ಠಾನ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ತಾಲೂಕಾ ಪಂಚಾಯತ ಸಭಾಭವನದಲ್ಲಿ ಜರುಗಿದ ತಾಲೂಕಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಫಲಾನುಭವಿಗಳ ಮಾಹಿತಿಯನ್ನು ಕಾಲಕಾಲಕ್ಕೆ ನವೀಕರಿಸುವ ಮೂಲಕ ಯೋಜನೆಯ ಸೌಲಭ್ಯವನ್ನು ನಿಜವಾದ ಅರ್ಹರಿಗೆ ತಲುಪುವಂತೆ ಕ್ರಮವಹಿಸಬೇಕು ಎಂದು ತಿಳಿಸಿದರು. ಯೋಜನೆ ಅನುಷ್ಠಾನದಲ್ಲಿ ಪಾರದರ್ಶಕತೆ ಹಾಗೂ ಇಲಾಖೆಗಳ ನಡುವಿನ ಸಮನ್ವಯಕ್ಕೆ ಹೆಚ್ಚಿನ ಒತ್ತು ಕೊಡಬೇಕು ಎಂದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಸದಸ್ಯರು ಗೃಹಲಕ್ಷ್ಮೀ ಯೋಜನೆಯಡಿ ಮೃತಪಟ್ಟವರ



ಹೆಸರು ತೆಗೆದು ಹಾಕುವದರ ಜೊತೆಗೆ ಆ ಕುಟುಂಬದ ನಂತರ ಮನೆಯೊಡತಿಗೆ ಈ ಯೋಜನೆ ಲಾಭ ಪಡೆಯಲು ಮಾಡಬೇಕಾದ ಕ್ರಮಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು. ಮನೆಯೊಡತಿ ಮೃತಪಟ್ಟರೆ ಆ ಕುಟುಂಬದ ನಂತರ ಮನೆಯೊಡತಿಯ ಹೆಸರನ್ನು ರೇಷನ್ ಕಾರ್ಡನಲ್ಲಿ ಸೇರಿಸಿ, ಹೊಸದಾಗಿ ಅರ್ಜಿ ಸಲ್ಲಿಸಬೇಕು. ಅಂದಾಗ ಮಾತ್ರ ಯೋಜನೆ ಲಾಭ ಪಡೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಲಾಯಿತು.

ರೇಷನ್ ಕಾರ್ಡ ತಿದ್ದುಪಡಿ ಹಾಗೂ ಹೊಸ ರೇಷನ್ ಕಾರ್ಡಗೆ ಅರ್ಜಿ ಹಾಕಲು ಲಾಗಿನ್ ಸಮಸ್ಯೆ ಇದೆ. ಹಾಕಿದ ಅರ್ಜಿಗಳು ಇಪ್ಲಿಮೇಂಟ್ ಆಗುತ್ತಿಲ್ಲ. ನೀರಲಕೇರಿ, ಶಿಗಿಕೇರಿ ಗ್ರಾಮದಲ್ಲಿ ನಡೆದ ಕುಂದು ಕೊರತೆ ಸಭೆಯಲ್ಲಿ ರೇಷನ್ ಕಾರ್ಡ ಬಗ್ಗೆ ಚರ್ಚೆ ನಡೆದಿದೆ. ರೇಷನ್ ಕಾರ್ಡ ಸರಿಪಡಿಸದ ಹಿನ್ನಲೆಯಲ್ಲಿ ಗೃಹಲಕ್ಷ್ಮೀ ಯೋಜನೆಗೆ ಹೊಸದಾಗಿ ಅರ್ಜಿ ಸಲ್ಲಿಸಲು ಸಾದ್ಯವಾಗುತ್ತಿಲ್ಲ. ಇದನ್ನು ಸರಿಪಡಿಸಲು ಸಂಬಂಧಪಟ್ಟ ಅಧಿಕಾರಿಗಳು ಸಭೆಗೆ ಹಾಜರಾಗದೇ ಇರುವುದು ವಿಷಾಧನಿಯ ಸಂಗತಿಯಾಗಿದೆ. ಸಂಬಂಧಿಸಿದ ಅಧಿಕಾರಿಗಳು ಸಭೆಗೆ ಬರೆದೇ ಇದ್ದರೆ ಹೇಗೆ ಎಂದು ಶಾಸಕರು ಪ್ರಶ್ನಿಸಿದರು. ಮುಂದಿನ ಸಭೆಯಲ್ಲಿ ಅಧಿಕಾರಿಗಳು ಹಾಜರಾಗಲು ಕ್ರಮವಹಿಸಲು ಸೂಚನೆ ನೀಡಿದರು.

ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ ಹಾಗೂ ಯುವನಿಧಿ ಯೋಜನೆ ಸೇರಿದಂತೆ ಇತರೆ ಯೋಜನೆಗಳ ಪ್ರಗತಿ ಪರಿಶೀಲಿಸಲಾಯಿತು. ಬಾಕಿ ಉಳಿದಿರುವ ಅರ್ಜಿಗಳ ವಿಲೇವಾರಿ ಹಾಗೂ ತಾಂತ್ರಿಕ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಗ್ರಾಮೀಣ ಭಾಗದಲ್ಲಿ ಯುವನಿಧಿ ಯೋಜನೆ ಬಗ್ಗೆ ಜಾಗೃತಿ ಮೂಡಿಸಲು ಅಧಿಕಾರಿಗಳು ಮುಂದಾಗಬೇಕು. ಮಾಹಿತಿವುಳ್ಳ ಪೋಸ್ಟರಗಳನ್ನು ಗ್ರಾ.ಪಂ ವ್ಯಾಪ್ತಿಯಲ್ಲಿ ಅಂಟಿಸಲು ಕ್ರಮಕೈಗೊಳ್ಳಲು ಶಾಸಕರು ತಿಳಿಸಿದರು. ಯೋಜನೆ ದುರುಪಯೋಗವಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಅಧಿಕಾರಿಗಳದ್ದಾಗಿದೆ ಎಂದರು.

ಸಭೆಯಲ್ಲಿ ತಾಲೂಕಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅದ್ಯಕ್ಷ ಎಸ್.ಎಂ.ರಾಂಪೂರ, ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾವಿ ಸೇರಿದಂತೆ ಗ್ಯಾರಂಟಿ ಯೋಜನೆ ಅನುಷ್ಠಾನ ಇಲಾಖೆಯ ತಾಲೂಕಾ ಮಟ್ಟದ ಅಧಿಕಾರಿಗಳು, ಅನುಷ್ಠಾನ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

## ರಾಷ್ಟ್ರೀಯ ಪಲ್ಸ್ ಪೋಲಿಯೋ ಜಾಥಾಕ್ಕೆ ಚಾಲನೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಪೋಲಿಯೋ ಲಸಿಕೆ ವಾಹನ ಜಾಥಾ ಕಾರ್ಯಕ್ರಮವನ್ನು ಇಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅವರಣದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯದ ಉಪ ನಿರ್ದೇಶಕರಾದ (ಆರ್.ಬಿ.ಎಸ್.ಕೆ) ಡಾ. ಇಂದುಮತಿ ಪಾಟೀಲ ಅವರು ರಿಬ್ಬನ್ ಕತ್ತರಿಸಿ, ಹಸಿರು ಬಾವುಟ ತೋರುವ ಮೂಲಕ ರ್‍ಯಾಲಿಗೆ ಚಾಲನೆ ನೀಡಿದರು.

ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮವು 28 ಜೂನ್ 2026ರಂದು ಬೂತ್‌ಗಳ ಮೂಲಕ ಲಸಿಕೆ ನೀಡಲಾಗುವುದು ಹಾಗೂ 29 ಜೂನ್ ರಿಂದ 2026ರಿಂದ ಜುಲೈ 1ರ ವರೆಗೆ ಮನೆಗಳಿಗೆ ಭೇಟಿ ನೀಡಿ ಉಳಿದ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಾಗುವುದು ಆದ್ದರಿಂದ 0-5 ವರ್ಷ ಮಕ್ಕಳಿಗೆ ತಪ್ಪದೇ ಲಸಿಕೆ ನೀಡುವಂತೆ ಹೇಳಿದರು.



ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿ ಡಾ. ಶಿವಶಂಕರ.ಬಿ ಅವರು ಮಾತನಾಡಿ, 0-5 ವರ್ಷದ ಒಟ್ಟು 2,13,213 ಗ್ರಾಮೀಣ ಮತ್ತು ನಗರ ಪ್ರದೇಶ ಸೇರಿ ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದ್ದು, ಇದಕ್ಕಾಗಿ 996 ಬೂತ್‌ಗಳು ನಿರ್ಮಿಸಲಾಗಿದೆ. ಅದರಂತೆ 2,154 ಲಸಿಕೆದಾರರನ್ನು ಹಾಗೂ 216 ಜನರನ್ನು ಬೂತ್ ಮೇಲ್ವಿಚಾರಣೆಗಾಗಿ ಸಿಬ್ಬಂದಿಯವರನ್ನು ನೇಮಿಸಲಾಗಿದ್ದು, 11 ಮೋಬೈಲ್ ತಂಡಗಳು ಹಾಗೂ 70-ಟ್ರಾನ್ಸಿಟ್ ಪಾಯಿಂಟ್ಸ್‌ಗಳ ಮೂಲಕ ಪ್ರತಿಶತ ಲಸಿಕಾಕರಣ ಗುರಿ ಸಾಧಿಸಲಾಗುವುದೆಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಮಲೇರಿಯಾ ನಿಯಂತ್ರಣ ಅಧಿಕಾರಿ ಡಾ. ರಾಜಶೇಖರ ಪಾಟೀಲ, ಜಿಲ್ಲಾ ಕ್ಷಯರೋಗ ನಿಯಂತ್ರಣ ಅಧಿಕಾರಿ ಡಾ. ಅನೀಲ ಚಿಂತಾಮಣಿ, ಕುಷ್ಠರೋಗ ನಿಯಂತ್ರಣ ಅಧಿಕಾರಿ ಡಾ. ಕಿರಣ ಪಾಟೀಲ್, ತಾಲೂಕಾ ಅಧಿಕಾರಿ ಡಾ. ಸಂಗಾರೆಡ್ಡಿ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಸಾವಿತ್ರಿಬಾಯಿ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಚಂದ್ರಶೇಖರ ಇಜಾರೆ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಓಂಕಾರ ಮಲ್ಲಿಗೆ, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ಉಮೇಶ ಬಿರಾದರ, ಡಿ.ಪಿ.ಸಿ ಕಂ ಕ್ಲಸ್ಟರ್ ಪ್ರಿವೆನ್ಸನ್ ಅಧಿಕಾರಿ ಶಿವಶಂಕರ ಬೆಮಳಗಿ, ಲಸಿಕಾ ಮೇಲ್ವಿಚಾರಕ ಲೋಕೇಶ ಸಲಗರ ಸೇರಿದಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಅಣೆಕಟ್ಟುಗಳ ಹೂಳು ತೆಗೆಯಲು ಶೀಘ್ರದಲ್ಲೇ ಮಹತ್ವದ ಯೋಜನೆ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ದೇಶದಾದ್ಯಂತ ಇರುವ ಬಹುತೇಕ ಅಣೆಕಟ್ಟುಗಳಲ್ಲಿ ಶೇಕಡಾ 15 ಕ್ಕಿಂತಲೂ ಹೆಚ್ಚು ಹೂಳು ತುಂಬಿಕೊಂಡಿದ್ದು, ಇದರಿಂದ ಜಲಾಶಯಗಳ ನೀರು ಸಂಗ್ರಹಣಾ ಸಾಮರ್ಥ್ಯ ಗಣನೀಯವಾಗಿ ಕುಸಿದಿದೆ. ಈ ಸಮಸ್ಯೆಯನ್ನು ಮನಗಂಡು ದೇಶದ ಅಣೆಕಟ್ಟುಗಳಿಂದ ಹೂಳು ತೆಗೆಯುವ (ಡಿ-ಸಿಲ್ಟಿಂಗ್) ಬೃಹತ್ ಯೋಜನೆಯೊಂದನ್ನು ಕೇಂದ್ರ ಸರ್ಕಾರ ಸಿದ್ಧಪಡಿಸುತ್ತಿದೆ ಎಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಹೇಳಿದರು.

ಗುರುವಾರದಂದು ಕರ್ನಾಟಕ ಸರ್ಕಾರ ಜಲಸಂಪನ್ಮೂಲ ಇಲಾಖೆ ಹಾಗೂ ತುಂಗಭದ್ರಾ ಮಂಡಳಿಯ ಸಹಯೋಗದಲ್ಲಿ ಮುನಿರಾಬಾದ್‌ನ ಸರ್ಕಾರಿ ಹೈಸ್ಕೂಲ್ ಮೈದಾನದಲ್ಲಿ ಆಯೋಜಿಸಲಾಗಿದ್ದ ತುಂಗಭದ್ರಾ ಜಲಾಶಯದ ನೂತನ 33 ಸ್ಪಿಲ್‌ವೇ ಗೇಟುಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ತುಂಗಭದ್ರಾ ಜಲಾಶಯದಲ್ಲೂ ಶೇ. 15 ಕ್ಕಿಂತ ಹೆಚ್ಚು ಹೂಳು ತುಂಬಿಕೊಂಡಿರುವುದನ್ನು ಪ್ರಸ್ತಾಪಿಸಿದ ಕೇಂದ್ರ ಸಚಿವ ಸಿ.ಆರ್. ಪಾಟೀಲ್ ಜಲಶಕ್ತಿ ಸಚಿವಾಲಯವು ಹೂಳು ತೆಗೆಯುವ ವಿಶೇಷ ಯೋಜನೆಯನ್ನು ರೂಪಿಸುತ್ತಿದೆ ಎಂದರು. ಈ ಯೋಜನೆಯ ತಾಂತ್ರಿಕ ಸಹಯೋಗವನ್ನು ಕೇಂದ್ರ ಸರ್ಕಾರ ನೀಡಲಿದ್ದು, ಅನುಷ್ಠಾನದ ಜವಾಬ್ದಾರಿಯನ್ನು ಆಯಾ ರಾಜ್ಯ ಸರ್ಕಾರಗಳು ಹೊರಬೇಕಾಗುತ್ತದೆ. ಈ ಯೋಜನೆ ಯಶಸ್ವಿಯಾದರೆ ತುಂಗಭದ್ರಾ ಜಲಾಶಯದ ನೀರು ಸಂಗ್ರಹಣಾ ಸಾಮರ್ಥ್ಯವನ್ನು ಶೇಕಡಾ 25 ರಿಂದ 30 ರಷ್ಟು ಹೆಚ್ಚಿಸಬಹುದಾಗಿದೆ ಎಂದು ಅವರು ವಿಶ್ವಾಸ



ವ್ಯಕ್ತಪಡಿಸಿದರು.

ಹಿಂದೆ ಆಂಧ್ರಪ್ರದೇಶ, ತೆಲಂಗಾಣ ಮತ್ತು ಕರ್ನಾಟಕ ರಾಜ್ಯಗಳ ನಡುವೆ ನೀರು ಹಂಚಿಕೆ ವಿಚಾರದಲ್ಲಿ ಭಿನ್ನಾಭಿಪ್ರಾಯಗಳಿದ್ದವು. ಆದರೆ ಇಂದು ಮೂರೂ ರಾಜ್ಯಗಳ ಮುಖ್ಯಮಂತ್ರಿಗಳು ಒಂದೇ ವೇದಿಕೆಗೆ ಬಂದು ಒಗ್ಗಟ್ಟು ಪ್ರದರ್ಶಿಸಿರುವುದನ್ನು ಸಚಿವರು ಮುಕ್ತಕಂಠದಿಂದ ಶ್ಲಾಘಿಸಿದರು. ಯಾವುದೇ ಆಕ್ಷೇಪಣೆಗಳಿಲ್ಲದೆ, ಪರಸ್ಪರ ಸಹಕಾರ ಹಾಗೂ ಆರ್ಥಿಕ ನೆರವು ನೀಡಿದ್ದರಿಂದಲೇ ತುಂಗಭದ್ರಾ ಜಲಾಶಯಕ್ಕೆ ಕೇವಲ ಕೆಲವೇ ದಿನಗಳಲ್ಲಿ ನೂತನ ಗೇಟುಗಳನ್ನು ಅಳವಡಿಸಲು ಸಾಧ್ಯವಾಯಿತು ಎಂದು ಅವರು ಸ್ಮರಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯಂತೆ ದೇಶವನ್ನು ರಸ್ತೆಗಳ ಮೂಲಕ ಹೇಗೆ ಜೋಡಿಸಲಾಗುತ್ತಿದೆಯೋ, ಅದೇ ರೀತಿ ನೀರಿನ ಯೋಜನೆಗಳ ಮೂಲಕವೂ ಇಡೀ ದೇಶವನ್ನು ಬೆಸೆಯಲಾಗುತ್ತಿದೆ ಎಂದು ಸಚಿವರು ತಿಳಿಸಿದರು. ರೈತರಿಗೆ ಹೆಚ್ಚಿನ ನೀರು ಲಭ್ಯವಾದರೆ, ಅವರು ವರ್ಷಕ್ಕೆ ಒಂದರ ಬದಲು ಎರಡು ಬೆಳೆಗಳನ್ನು ತೆಗೆಯಲು ಸಾಧ್ಯವಾಗುತ್ತದೆ ಮತ್ತು ಇದರಿಂದ ಅವರ ಆದಾಯವೂ ದ್ವಿಗುಣಗೊಳ್ಳುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ 'ಹರ್ ಘರ್ ಜಲ್' (ನಲ್ ಮುಖಾಂತರ ನೀರು) ಯೋಜನೆಯು ಹಳ್ಳಿಗಳಲ್ಲಿ ಸರಿಯಾಗಿ ಅನುಷ್ಠಾನಗೊಳ್ಳದಿದ್ದರೆ ಆಯಾ ರಾಜ್ಯಗಳ ಮುಖ್ಯಮಂತ್ರಿಗಳ ಗಮನಕ್ಕೆ ತರುವಂತೆ ಸಾರ್ವಜನಿಕರಲ್ಲಿ ಕೇಂದ್ರ ಸಚಿವ ಸಿ.ಆರ್. ಪಾಟೀಲ್ ಮನವಿ ಮಾಡಿದರು.

ಈ ಸಂದರ್ಭ ಕಾರ್ಯಕ್ರಮದಲ್ಲಿ ಕೇಂದ್ರ ಜಲಶಕ್ತಿ ಸಚಿವರಾದ ಸಿ.ಆರ್. ಪಾಟೀಲ್, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಆಂಧ್ರಪ್ರದೇಶ ಮುಖ್ಯಮಂತ್ರಿಗಳಾದ ಎನ್.ಚಂದ್ರಬಾಬು ನಾಯ್ಡು, ತೆಲಂಗಾಣ ಮುಖ್ಯಮಂತ್ರಿ ಎ.ರೇವಂತರೆಡ್ಡಿ, ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಎಸ್ ಹೊರಟ್ಟಿ, ಆಂಧ್ರಪ್ರದೇಶದ ಜಲಸಂಪನ್ಮೂಲ ಇಲಾಖೆ ಮಾನ್ಯ ಸಚಿವರಾದ ಡಾ. ನಿಮ್ಮಲ ರಾಮನಾಯ್ಡು, ಆಂಧ್ರಪ್ರದೇಶದ ಹಣಕಾಸು, ಯೋಜನೆ, ವಾಣಿಜ್ಯ ತೆರಿಗೆ ಹಾಗೂ ಸಂಸದೀಯ ವ್ಯವಹಾರಗಳ ಇಲಾಖೆ ಸಚಿವರಾದ ಪಯ್ಯವುಲ ಕೇಶವ್, ತೆಲಂಗಾಣದ ನೀರಾವರಿ ಇಲಾಖೆ ಹಾಗೂ ಸಿಎಡಿ ಸಚಿವರಾದ ಎನ್.ಉತ್ತಮ್ ಕುಮಾರ ರೆಡ್ಡಿ, ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ರಾಘವೇಂದ್ರ ಹಿಟ್ನಾಳ್, ಸಂಸದರಾದ ಕೆ. ರಾಜಶೇಖರ ಹಿಟ್ನಾಳ್, ಬಳ್ಳಾರಿ ಸಂಸದರಾದ ಈ. ತುಕಾರಾಮ್, ದಾವಣಗೆರೆ ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್, ಕೊಪ್ಪಳ ಜಿಲ್ಲೆಯ ವ್ಯಾಪ್ತಿಗೆ ಬರುವ ವಿಧಾನಸಭೆ ಶಾಸಕರುಗಳಾದ ಬಸವರಾಜ ರಾಯರೆಡ್ಡಿ, ಶಿವರಾಜ ಎಸ್. ತಂಗಡಗಿ, ಮುನಿರಾಬಾದ್ ತುಂಗಾಭದ್ರಾ ಯೋಜನೆ (ಕಾಡಾ) ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಹಸನ್‌ಸಾಬ್ ನಬಿಸಾಬ್ ದೋಟಿಹಾಳ, ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ, ಹೆಚ್. ಆರ್. ಗವಿಯಪ್ಪ, ಎಂ.ಪಿ. ಲತಾ ಮಲ್ಲಿಕಾರ್ಜುನ, ವಿಧಾನಪರಿಷತ್ ಶಾಸಕರುಗಳಾದ ಶರಣಗೌಡ ಅನ್ನದಾನಗೌಡ ಪಾಟೀಲ ಬಯ್ಯಾಪೂರ, ಬಸನಗೌಡ ಬಾದರ್ಲಿ ಹಾಗೂ ಎನ್.ಎಸ್. ಬೋಸರಾಜು, ಗದಗ ಜಿಲ್ಲೆಯ ವ್ಯಾಪ್ತಿಗೆ ಬರುವ ವಿಧಾನಸಭೆ ಶಾಸಕರುಗಳಾದ ಹೆಚ್.ಕೆ. ಪಾಟೀಲ, ರಾಜ್ಯ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್. ಎಂ.ರೇವಣ್ಣ, ಮಾಜಿ ಸಚಿವ ಅಮರೇಗೌಡ ಪಾಟೀಲ ಬಯ್ಯಾಪೂರ, ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಅಧಿಕಾರಿಗಳು ಉಪಸ್ಥಿತರಿದ್ದರು.

# ಸರ್ಕಾರಿ ಶಾಲೆಯಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ




**ಕಮಲನಗರ:** ತಾಲೂಕಿನ ಖತಗಾಂವ್ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಶನಿವಾರ ನಾಡಪ್ರಭು ಕೆಂಪೇಗೌಡರ ಜಯಂತಿಯನ್ನು ಅತ್ಯಂತ ಶ್ರದ್ಧಾಭಕ್ತಿಗಳಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ನಾಡಪ್ರಭು ಕೆಂಪೇಗೌಡರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಶಾಲೆಯ ಮುಖ್ಯ ಶಿಕ್ಷಕ ಶ್ರೀನಿವಾಸ ಮಂಠಾಳಕರ್ ಅವರು, "ಇಂದಿನ ಯುವ ಪೀಳಿಗೆಯು ನಾಡಪ್ರಭು ಕೆಂಪೇಗೌಡರು ಹಾಕಿಕೊಟ್ಟಿರುವ ಮಾರ್ಗದರ್ಶನದಲ್ಲಿ ಮುನ್ನಡೆಯಬೇಕು. ಅವರ ಉನ್ನತ ಆದರ್ಶಗಳನ್ನು ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಜೀವನದಲ್ಲಿ ಪಾಲಿಸಬೇಕು" ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರುಗಳಾದ ಮಲ್ಲಮ್ಮ ಕಸ್ತೂರೆ, ಸಿದ್ರಾಮಪ್ಪ, ಶ್ರೀಪಾದ ಕುಲಕರ್ಣಿ, ಮಹಾದೇವ ಬಿರಾದಾರ, ರಚಿತಾ ಗುಡಮೆ ಹಾಗೂ ಸಿಬ್ಬಂದಿ ವರ್ಗದವರಾದ ಸಂಗೀತ, ಕಲ್ಪನಾ, ರಂಜನಾ, ರೇಖಾ ಸೇರಿದಂತೆ ಶಾಲೆಯ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮತದಾರರ ಪಟ್ಟಿ ಪರಿಷ್ಕರಣೆ: ಲೋಪದೋಷ ಸರಿಪಡಿಸಿಕೊಳ್ಳಿ




**ಸಿಂಧನೂರು:** ಭಾರತೀಯ ಚುನಾವಣಾ ಆಯೋಗವು ಪ್ರತಿ ವರ್ಷ ಕೈಗೊಳ್ಳುವ ವಿಶೇಷ ಸಂಕ್ಷಿಪ್ತ ಪರಿಷ್ಕರಣಾ ಕಾರ್ಯಕ್ರಮದ ಅಂಗವಾಗಿ, ನಗರದ ನಟರಾಜ ಕಾಲೋನಿಯ ಗ್ಲೋರಿಸ್ ಸ್ಕೂಲ್ ಆವರಣದಲ್ಲಿ ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತ ಜಾಗೃತಿ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಶಾಸಕ ಹಂಪನಗೌಡ ಬಾದರ್ಲಿ ಅವರು, ಪ್ರಜಾಪ್ರಭುತ್ವದ ಯಶಸ್ಸಿಗೆ ಪ್ರತಿಯೊಬ್ಬರ ಮತದಾನವು ಅತ್ಯಗತ್ಯ. ಮತದಾರರ ಪಟ್ಟಿಯಲ್ಲಿ ನಿಮ್ಮ ಹೆಸರು, ವಿಳಾಸ, ಜನ್ಮ ದಿನಾಂಕ ಅಥವಾ ಭಾವಚಿತ್ರಗಳಲ್ಲಿ ಯಾವುದೇ ಲೋಪದೋಷಗಳಿದ್ದರೂ, ಈ ಪರಿಷ್ಕರಣಾ ಅವಧಿಯಲ್ಲಿ ತಕ್ಷಣ ಸರಿಪಡಿಸಿಕೊಳ್ಳಬೇಕು. ಇಲ್ಲವಾದಲ್ಲಿ ಮತದಾನದ ಹಕ್ಕಿನಿಂದ ವಂಚಿತರಾಗಬೇಕಾಗುತ್ತದೆ ಎಂದು ಎಚ್ಚರಿಸಿದರು.

18 ವರ್ಷ ತುಂಬಿದ ಯುವ ಮತದಾರರನ್ನು ಪಟ್ಟಿಗೆ ಸೇರ್ಪಡೆಗೊಳಿಸುವುದು.ಹೆಸರು, ವಿಳಾಸ, ಜನ್ಮ ದಿನಾಂಕ ಅಥವಾ ಭಾವಚಿತ್ರಗಳಲ್ಲಿನ ತಪ್ಪುಗಳನ್ನು ಸರಿಪಡಿಸುವುದು. ಮೃತಪಟ್ಟವರು, ಬೇರೆ ಊರಿಗೆ ಶಾಶ್ವತವಾಗಿ ಸ್ಥಳಾಂತರಗೊಂಡವರು ಅಥವಾ ಅಸಮರ್ಪಕ ಮಾಹಿತಿ ಇರುವವರ ಹೆಸರನ್ನು ಪಟ್ಟಿಯಿಂದ ಕೈಬಿಡುವುದು ಹಾಗೂ

ಒಂದೇ ವ್ಯಕ್ತಿಯ ಹೆಸರು ಒಂದಕ್ಕಿಂತ ಹೆಚ್ಚು ಕಡೆ ನಮೂದಾಗಿದ್ದರೆ ಅದನ್ನು ಪರಿಶೀಲಿಸಿ ಸರಿಪಡಿಸುವುದು ಮುಖ್ಯ ಉದ್ದೇಶಗಳಾಗಿವೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಎಂ ಲಿಂಗಪ್ಪ ದಡೆಸುಗೂರು, ಕಾಳಿಂಗಪ್ಪ ವಕೀಲರು, ಖಾಜಿ ಮಲ್ಲಿಕ್ ವಕೀಲರು, ಛತ್ರಪ್ಪ ಸೇರಿದಂತೆ ಇತರರು ಇದ್ದರು.



**ಇಂದು ಹುಬ್ಬಳ್ಳಿಯ ಗುಜರಾತ ಭವನದಲ್ಲಿ ಕಾನ್ಫಿಡರೇಷನ್ ಆಫ್ ಇಂಡಿಯಾ ಹಾಗೂ ಯಂಗ್ ಇಂಡಿಯನ್ ಸಂಸ್ಥೆಯ ವತಿಯಿಂದ ಏರ್ಪಡಿಸಿದ ಯಂಗ ಇಂಡಿಯನ್ ಪಾರ್ಲಿಮೆಂಟ್ 2026 ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರದ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ – ಗದಗ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಬಸವರಾಜ ಬೊಮ್ಮಾಯಿರವರು ಉದ್ಘಾಟಿಸಿ ಮಾತನಾಡಿದರು. ಈ ಸಂಧರ್ಭದಲ್ಲಿ ಡಾ. ಶ್ರೀನಿವಾಸ ಜೋಶಿ, ಡಾ. ಸಮೀರ ಮಂಗಲವೇದೆ, ಡಾ. ದೀಪ್ತಿ ಎಸ್ ಜೋಶಿ ಸೇರಿದಂತೆ ವಿಧ್ಯಾರ್ಥಿಗಳು ಉಪಸ್ಥಿತರಿದ್ದರು.**

# ರಾಜ್ಯ ಸರ್ಕಾರ ತಕ್ಷಣವೇ ಬರಗಾಲ ಘೋಷಿಸಲಿ

**ಹುಬ್ಬಳ್ಳಿ:** ರಾಜ್ಯದಲ್ಲಿ ಮಳೆಯ ಕೊರತೆಯಿಂದ ಬರದ ಪರಿಸ್ಥಿತಿ ನಿರ್ಮಾಣವಾಗುತ್ತಿದ್ದು, ಇನ್ನೊಂದು ವಾರದೊಳಗೆ ಸಮರ್ಪಕ ಮಳೆಯಾಗದಿದ್ದರೆ ಕರ್ನಾಟಕ ಸಂಪೂರ್ಣ ಬರಗಾಲದತ್ತ ಸಾಗುವ ಸಾಧ್ಯತೆಯಿದೆ ರಾಜ್ಯ ಸರ್ಕಾರ ತಕ್ಷಣವೇ ಬರಗಾಲ ಘೋಷಿಸುವಂತೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬೊಮ್ಮಾಯಿ, ರಾಜ್ಯದಲ್ಲಿ ಈವರೆಗೆ ಕೇವಲ ಶೇ.30ರಷ್ಟು ಮಾತ್ರ ಬಿತ್ತನೆಯಾಗಿದ್ದು, ಶೇ.70ರಷ್ಟು ಪ್ರದೇಶಗಳಲ್ಲಿ ಇನ್ನೂ ಬಿತ್ತನೆ ಪ್ರಾರಂಭವಾಗಿಲ್ಲ. ಮಳೆಯ ಕೊರತೆಯಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಮುಂದಿನ ಒಂದು ವಾರದಲ್ಲಿಯೂ ಮಳೆ ಬಾರದಿದ್ದರೆ ಕುಡಿಯುವ ನೀರಿನ ಸಮಸ್ಯೆಯೂ ಗಂಭೀರ ಸ್ವರೂಪ ಪಡೆಯಲಿದೆ ಎಂದು ಹೇಳಿದರು. ಇಂತಹ ಗಂಭೀರ ಪರಿಸ್ಥಿತಿಯಲ್ಲಿ ಸರ್ಕಾರ ತಕ್ಷಣ ಎಚ್ಚೆತ್ತುಕೊಳ್ಳಬೇಕಿದ್ದು, ಎಲ್ಲ ಜಿಲ್ಲಾಧಿಕಾರಿಗಳ ಸಭೆ ನಡೆಸಿ ವಾಸ್ತವ ಸ್ಥಿತಿಯ ವರದಿ ಪಡೆಯಬೇಕು. ಬರ ಪರಿಹಾರ ಕ್ರಮಗಳನ್ನು ತುರ್ತಾಗಿ ಜಾರಿಗೊಳಿಸಬೇಕು. ಪ್ರಕೃತಿ ವಿಕೋಪ ಪರಿಹಾರ ನಿಧಿಯಲ್ಲಿ ಹಣ ಲಭ್ಯವಿದ್ದು, ಅದನ್ನು ಸಮರ್ಪಕವಾಗಿ ಬಳಕೆ ಮಾಡಿದರೆ ಕೇಂದ್ರ ಸರ್ಕಾರದಿಂದ ಹೆಚ್ಚುವರಿ ನೆರವು ಪಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

# ಸರಡಗಿ ಬ್ರಿಡ್ಜ್ ಕಂ ಬ್ಯಾರೇಜ್‌ಗೆ ಶಾಸಕ–ಮೇಯರ್ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮುಂಗಾರು ಮಳೆ ಕೈಕೊಟ್ಟ ಕಾರಣ ನಗರದಲ್ಲಿನ ಕುಡಿಯುವ ನೀರಿಗೆ ತುಂಬಾ ಸಮಸ್ಯೆ ಉಂಟಾಗುತ್ತಿರುವ ಹಿನ್ನೆಲೆಯಲ್ಲಿ ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಲಬುರಗಿ ಮಹಾನಗರ ಪಾಲಿಕೆ ಮೇಯರ್ ವರ್ಷಾ ರಾಜೀವ ಜಾನೆ, ಉಪ ಮೇಯರ್ ತೃಪ್ತಿ ಲಾಖೆ ಹಾಗೂ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಅವರೊಂದಿಗೆ ಶನಿವಾರ ಕಲಬುರಗಿ ನಗರಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಸರಡಗಿ ಬ್ರಿಡ್ಜ್ ಕಂ ಬ್ಯಾರೇಜಿಗೆ ಭೇಟಿ ನೀಡಿ ಪ್ರಸ್ತುತ ಲಭ್ಯ ಇರುವ ನೀರಿನ ಪ್ರಮಾಣದ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.



ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಅಲ್ಲಮಪ್ರಭು ಪಾಟೀಲ ಅವರು, ಈ ಬಾರಿ ಮಳೆ ಕೈಕೊಟ್ಟ ಕಾರಣ ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದೆ. ಹೀಗಾಗಿ ಈಗಾಗಲೆ ನಾರಾಯಣಪುರ ಜಲಾಶಯದಿಂದ 0.5 ಟಿ.ಎಂ.ಸಿ. ನೀರು ಹರಿಬಿಡಲಾಗಿದ್ದು, ರವಿವಾರ ಅಥವಾ ಸೋಮವಾರ ಸರಡಗಿ ಬ್ಯಾರೇಜಿಗೆ ತಲುಪಲಿದೆ ಎಂದರು.

ಪ್ರತಿ ವರ್ಷ ಬೇಸಿಗೆಯಲ್ಲಿ ನಗರಕ್ಕೆ ಕುಡಿಯುವ ನೀರಿನ ಸಮಸ್ಯೆ ತಲೆದೋರುತ್ತಿದ್ದು, ನಾರಾಯಣಪುರ ಜಲಾಶಯದಿಂದ ಶಹಾಪುರ, ನಗನೂರ ಮಾರ್ಗವಾಗಿ ಹರಿಬಿಡುವ ನೀರು ನಮ್ಮಲ್ಲಿ ಬರುವಷ್ಟಿಗೆ ಹೆಚ್ಚಿನ ನೀರು ಭೂಮಿ ಪಾಲಾಗುತ್ತಿದೆ. ಇದರ ಬದಲಾಗಿ ನಾರಾಯಣಪುರದಿಂದ ನೇರವಾಗಿ ಸರಡಗಿಗೆ ನೀರು ಹರಿಸಿದಲ್ಲಿ ಹೆಚ್ಚಿನ ನೀರು ನಮಗೆ ಸಿಗಲಿದೆ. ಇದಕ್ಕಾಗಿ 1,850 ಕೋಟಿ ರೂ. ಮೊತ್ತದ ಡಿ.ಪಿ.ಆರ್ ಸಿದ್ದಪಡಿಸಿದ್ದು, ಅಂದುಕೊಂಡಂತೆ ಯೋಜನೆ ಅನುಷ್ಠಾನಕ್ಕೆ ಬಂದಲ್ಲಿ ಮುಂದಿನ ದಿನದಲ್ಲಿ ನಗರಕ್ಕೆ ಕುಡಿಯುವ ನೀರಿಗೆ ಶಾಶ್ವತ ಪರಿಹಾರ ದೊರೆಯಲಿದೆ ಎಂದರು.

ಇನ್ನು ಸರಡಗಿ ಬ್ಯಾರೇಜಿನಲ್ಲಿ 41 ವರ್ಷ ಹಳೆಯದ 900ಕ್ಕೂ ಹೆಚ್ಚಿನ ಸ್ಟಾಪ್ ಲಾಗ್ ಗೇಟ್‌ಗಳಿದ್ದು, ಇದರಲ್ಲಿ ಈಗಾಗಲೆ 600 ಹೊಸದಾಗಿ ಗೇಟ್ ಅಳವಡಿಸಿದೆ. 150 ದುರಸ್ತಿ ಮಾಡಿದ್ದು, ಇನ್ನುಳಿದ ಗೇಟ್ ಸಹ ಹೊಸದಾಗಿ ಅಳವಡಿಸಿ ಬೇಸಿಗೆಯಲ್ಲಿ ನೀರು ಪೋಲಾಗದಂತೆ ಎಚ್ಚರ ವಹಿಸಲಾಗುತ್ತಿದೆ. ಇದಲ್ಲದೆ ಶುದ್ಧ ಕುಡಿಯುವ ನೀರು ಪೂರೈಕೆ ಮತ್ತು ಹೆಚ್ಚಿನ ಸಂಗ್ರಹಣೆ ಸಾಮರ್ಥ್ಯ ಹೆಚ್ಚಿಸಲು ಬ್ಯಾರೇಜ್ ನಲ್ಲಿ ಹೂಳೆತ್ತುವ ಕಾಮಗಾರಿ ಸಹ ನಡೆಯುತ್ತಿದ್ದು, ಇವೆಲ್ಲ ಕೆಲಸ ಕಾರ್ಯಗಳಿಗೆ 5 ಕೋಟಿ ರೂ. ಖರ್ಚು ಮಾಡಲಾಗುತ್ತಿದೆ. ಇದರಿಂದ ಮುಂದಿನ ದಿನದಲ್ಲಿ ಶುದ್ಧ ಕುಡಿಯುವ ನೀರು ನಗರದ ಜನರಿಗೆ ಲಭ್ಯವಾಗಲಿದೆ ಎಂದರು.

ಇನ್ನು ಕಲಬುರಗಿ ಮಹಾನಗರದಲ್ಲಿ ಎಲ್ & ಟಿ ಸಂಸ್ಥೆಯಿಂದ 24 ಗಂಟೆ ನಿರಂತರ ಕುಡಿಯುವ ನೀರು ಪೂರೈಕೆ ಸ್ಕೀಮ್ 'ಎ' ಯೋಜನೆಯಡಿ 700 ಕಿ.ಮೀ ಪೈಪ್ ಲೈನ್ ಕಾಮಗಾರಿ ನಡೆದಿದ್ದು, 'ಬಿ' ಸ್ಕೀಮ್ ನಲ್ಲಿ ಇನ್ನು 500 ಕಿ.ಮೀ ವಿಸ್ತರಣೆ ಮಾಡಲಾಗುತ್ತಿದೆ. ಇದ–ರಿಂದ ನಗರದಾದ್ಯಂತ ನೀರು ಸರಬರಾಜು ಜಾಲ ವಿಸ್ತರಣೆಯಾಗಲಿದೆ. ಪ್ರಸ್ತುತ ಕಲಬುರಗಿ ದಕ್ಷಿಣ ಮತ್ತು ಉತ್ತರ ಕ್ಷೇತ್ರದಲ್ಲಿ ಎಲ್ಲಿಯೆ ಕುಡಿಯುವ ನೀರಿನ ಸಮಸ್ಯೆ ತಲೆದೋರಿದಲ್ಲಿ ಕೂಡಲೆ ನೀರು ಪೂರೈಕೆಗೆ ಸುಮಾರು 200 ಟ್ಯಾಂಕರ್ ಪಡೆಯಲು ಸಹ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಹೀಗಾಗಿ ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ತೊಂದರೆಯಾಗದಂತೆ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ನಮ್ಮ ಸರ್ಕಾರ ತೆಗೆದುಕೊಂಡಿದೆ ಎಂದರು.

**8 ದಿನಕ್ಕೆ ನೀರು ಲಭ್ಯ:** ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಮಾತನಾಡಿ ಪ್ರಸ್ತುತ ಕಲಬುರಗಿ ನಗರಕ್ಕೆ ಮುಂದಿನ 8–10 ದಿನಗಳ ಕಾಲ ನೀರು ಪೂರೈಕೆಗೆ ನೀರಿನ ಪ್ರಮಾಣ ಲಭ್ಯ ಇದೆ. ನಾರಾಯಣಪುರ ಜಲಾಶಯದಿಂದ ನೀರು ಹರಿಬಿಟ್ಟಿದ್ದು, ಒಂದೆರಡು ದಿನ ಬ್ಯಾರೇಜಿಗೆ ನೀರು ಬಂದು ಸೇರಲಿದ್ದು, ಅಲ್ಲಿಗೆ ಸದ್ಯದ ಮಟ್ಟಿಗೆ ಕುಡಿಯುವ ನೀರು ಪೂರೈಕೆಗೆ ಯಾವುದೇ ಸಮಸ್ಯೆ ಇಲ್ಲ. ಕಳೆದ ವರ್ಷ ಅತಿವೃಷ್ಟಿ, ಈ ವರ್ಷ ಒಂದು ತಿಂಗಳು ಕಳೆದರು ನೀರಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಕುಡಿಯುವ ನೀರು ಪೂರೈಕೆ ನಮಗೆ ಸವಾಲಾಗಿದೆ. ಹವಾಮಾನ ಇಲಾಖೆ ಮುನ್ಸೂಚನೆಯಂತೆ ಒಂದೆ–ರಡು ದಿನದಲ್ಲಿ ಮಳೆಯಾಗುವ ಸಾಧ್ಯತೆ ಇದ್ದು, ವರುಣನ ಆಗಮನಕ್ಕೆ ಕಾತುರರಾಗಿದ್ದೇವೆ ಎಂದು ಆಶಾಭಾವನೆ ವ್ಯಕ್ತಪಡಿಸಿದರು.

# ಲಾಲಸಾಬವಲಿ ಮೂಕದೇವರ ಮಸ್ಜಿದ್‌ಗೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ

ಪಟ್ಟಣದ ಇಂಗಳೇಶ್ವರ ರಸ್ತೆಯ ಮಕಾಂದಾರ ಗಲ್ಲಿಯಲ್ಲಿ ನೂತನವಾಗಿ ನಿರ್ಮಿಸಲಾದ ಭವ್ಯ ಲಾಲಸಾಬವಲಿ ಮೂಕದೇವರ ಮಸ್ಜಿದ್ ಕಟ್ಟಡದ ಉದ್ಘಾಟನಾ ಸಮಾರಂಭವು ಇತ್ತೀಚಿಗೆ ಜರುಗಿತು. ಶಾಸಕರು ಹಾಗೂ ಮಾಜಿ ಸಚಿವರಾದ ಶಿವಾನಂದ ಎಸ್. ಪಾಟೀಲ ಅವರು ಅಧಿಕೃತವಾಗಿ ಉದ್ಘಾಟಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಶಾಸಕರು, ಕ್ಷೇತ್ರವು ಸದಾ ಸರ್ವ ಧರ್ಮಗಳ ಶಾಂತಿ ಮತ್ತು ಸಾಮರಸ್ಯದ ತಾಣವಾಗಿದೆ. ಮಕಾಂದಾರ ಗಲ್ಲಿಯಲ್ಲಿ ನಿರ್ಮಾಣಗೊಂಡಿರುವ ಈ ಲಾಲಸಾಬವಲಿ ಮೂಕದೇವರ ಮಸ್ಜಿದ್ ಕೇವಲ ಪ್ರಾರ್ಥನಾ ಮಂದಿರವಾಗಿರದೇ ಸಮಾಜದಲ್ಲಿ ಸದ್ಭಾವನೆ ಮತ್ತು ಭ್ರಾತೃತ್ವವನ್ನು ಬೆಳೆಸುವ ಕೇಂದ್ರವಾಗಲಿ ಎಂದ ಅವರು ಮಸ್ಜಿದ್ ಕಮಿಟಿಯ ಶ್ರಮವನ್ನು ಶ್ಲಾಘಿಸಿದರು.



ಈ ಸಂದರ್ಭದಲ್ಲಿ ಹಿರಿಯ ಮುಖಂಡ ಈರಣ್ಣ. ಚ ಪಟ್ಟಣಶೆಟ್ಟಿ, ಕಾಂಗ್ರೆಸ್ ಪಕ್ಷದ ಪ್ರಚಾರ ಸಮಿತಿ ಬ್ಲಾಕ್ ಅಧ್ಯಕ್ಷ ಶಂಕರಗೌಡ ಬಿರಾದಾರ, ತಾಲೂಕಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮೈಬೂಬ ಲಾ ನಾಯ್ಕೋಡಿ, ಮುಖಂಡರುಗಳಾದ ಸಂಗಮೇಶ ಓಲೇಕಾರ, ಬಸಣ್ಣ ದೇಸಾಯಿ, ಶಫಿಕ್ ಹೊಕ್ರಾಣಿ, ಮಹತಾಬ ಬೊಮ್ಮನಹಳ್ಳಿ ಬುಡ್ಡೆಸಾಬ ಚಳ್ಳಿಗಿಡದ, ಸಲೀಂ ಹೊಕ್ರಾಣಿ,ಲಾಲ್ ಸಾಬ್ ಹೊಕ್ರಾಣಿ ,ಅಬ್ದುಲ್ ಸಾಬ್ ಮಕಾನದಾರ, ಶಾಶಬ ಮಕಾನದಾರ, ಜಂಗ್ಲಿ ಬಾಷಾ ವಾಲಿಕಾರ್, ಚಾಂದ್ ಬಾಷಾ ಮೋಗಲ್ಯೆ, ಆಶಿಫ್ ಬೈರವಾಡಗಿ, ಬುಡ್ಡೆಸಾಬ ಕೊರಬು ಸೇರಿದಂತೆ ಮುಸ್ಲಿಂ ಸಮಾಜದ ಹಿರಿಯರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಶ್ರೀ ಗುರು ಕರಿಬಸವೇಶ್ವರ ಟ್ರಸ್ಟಿನ ಕಚೇರಿ ಉದ್ಘಾಟನೆ

• ಮಲ್ಲಮ್ಮ ನುಡಿ ವಾರ್ತೆ ಪೀಣ್ಯ ದಾಸರಹಳ್ಳಿ

ಶ್ರೀಗುರು ಕರಿಬಸವೇಶ್ವರ ಸ್ವಾಮಿ ದೇವಸ್ಥಾನದ ಜೀರ್ಣೋದ್ದಾರ ಆಡಳಿತ ನೂತನ ಕಚೇರಿಯನ್ನು ಟ್ರಸ್ಟಿನ ಸಂಸ್ಥಾಪಕ ಅಧ್ಯಕ್ಷೆ ಶ್ರೀಮತಿ ಕುಮಾರಿ ಎಂ ಆರ್ ಅವರ ನೇತೃತ್ವದಲ್ಲಿ ಬೆಂಗಳೂರಿನ ಲಗ್ಗೆರೆ ಪೈಪ್ ಲೈನ್ ರಸ್ತೆ ಪ್ರೇಮ ನಗರ ಶ್ರೀ ಗುರು ಕರಿಬಸವೇಶ್ವರ ಟ್ರಸ್ಟಿನ 5ನೇ ಕಚೇರಿಯನ್ನು ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕ ಎಸ್ ಮುನಿರಾಜು,ಶ್ರೀಶ್ರೀ ಶ್ರೀ ರೇವಣಸಿದ್ಧೇಶ್ವರ ಸ್ವಾಮೀಜಿ ಶ್ರೀ ಹಠಯೋಗಿ ಕಾಳಪ್ಪ ಸ್ವಾಮಿ ಮಠ ತಾವರೆಕೆರೆ ರಿಬ್ಬನ್ ಕತ್ತರಿಸಿ ಉದ್ಘಾಟಿಸಿದರು.

ಈಗಿನ ಕಾಲದಲ್ಲಿ ಸಂಘ ಸಂಸ್ಥೆಗಳು ಟ್ರಸ್ಟ್ ರಚನೆ ಮಾಡುವುದು ಸುಲಭ ಕೆಲಸ ಅಂದರೆ ಬೆಳೆಸಿಕೊಂಡು ಹೋಗುವ ಜವಾಬ್ದಾರಿ ಎಲ್ಲರದ್ದೂ ಅಂದರೆ ಸೋದರಿ ಟ್ರಸ್ಟಿನ ಅಧ್ಯಕ್ಷೆ ಕುಮಾರ್ ಅವರು ಈ 5ನೇ ಕಚೇರಿ ಮಾಡಿದ್ದು ನಿಜಕ್ಕೂ ಶ್ಲಾಘನೀಯ ಶಾಸಕ ಎಸ್ ಮುನಿರಾಜು ಎಂದರು.

ದಾಸರಹಳ್ಳಿ ಕ್ಷೇತ್ರದ ಬಿಜೆಪಿ ಯುವ ನಾಯಕ ಹಾಗೂ ಕಿರುತೆರೆ ನಟ ಅಶೋಕ್ ಕಾಳಾಚಾರಿ



ಸರ್ವರಿಗೂ ಸ್ವಾಗತಿಸಿದರು.

ಶ್ರೀಗುರು ಕರಿಬಸವೇಶ್ವರ ಸ್ವಾಮಿ ದೇವಸ್ಥಾನದ ಜೀರ್ಣೋದ್ದಾರ ಆಡಳಿತ ನೂತನ ಕಚೇರಿಯನ್ನು ಟ್ರಸ್ಟಿನ ಸಂಸ್ಥಾಪಕ ಅಧ್ಯಕ್ಷೆ ಶ್ರೀಮತಿ ಕುಮಾರಿ ಎಂ ಆರ್ ಅವರು ಪ್ರಾಸ್ತಾವಿಕವಾಗಿ ಭಾಷಣ ಮಾಡಿದರು.


ಪ್ರದಾನ ಅರ್ಚಕರು ಕೇಶವಾಚಾರ್ಯ ದೀಪಾಂಜಲಿ ನಗರ ಶನಿದೇವರ ದೇವಸ್ಥಾನ, ಚನ್ನಪ್ಪ ಎಂಡಿಪಿ ದೇವಸ್ಥಾನ ಮಾರಗೊಂಡನಹಳ್ಳಿ, ಅರ್ಚಕ ಶ್ರೀಗುರು ಕರಿಬಸವೇಶ್ವರ ಗದ್ದಿಗೆ ತಮ್ಮಡಿಹಳ್ಳಿ, ಕಾರ್ಯದರ್ಶಿ ಇಂದ್ರೇಶ್ ಎಂ ಎನ್, ಗೋವಿಂದರಾಜು ಟಿ ಜಿ, ಅನುಷ ಭಾರತ್ ಮತ್ತು ಅರ್ಪಿತ ನವೀನ್ ಕುಮಾರ್ ಇವರುಗಳು ಉಪಸ್ಥಿತರಿದ್ದರು.

# ಜಂಟಿ ಕೃಷಿ ನಿರ್ದೇಶಕರನ್ನು ವಜಾಗೊಳಿಸಿ: ಮುಜಾಹಿದ್ ಮರ್ಚೆಡ್ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಈ ಬಾರಿ ಮುಂಗಾರು ಮಳೆಯ ಪ್ರಮಾಣವು ಸಾಮಾನ್ಯಕ್ಕಿಂತ ಕಡಿಮೆ ಇರುವುದು ಹವಾಮಾನ ಇಲಾಖೆ ಹಾಗೂ ಕೃಷಿ ಇಲಾಖೆಗೆ ಮೊದಲೇ ತಿಳಿದಿದ್ದರೂ, ರೈತರಿಗೆ ಅಗತ್ಯ ಮುನ್ನೆಚ್ಚರಿಕೆ, ಜಾಗೃತಿ ಮತ್ತು ವೈಜ್ಞಾನಿಕ ಕೃಷಿ ಸಲಹೆಗಳನ್ನು ನೀಡುವಲ್ಲಿ ಕೃಷಿ ಇಲಾಖೆ ಸಂಪೂರ್ಣ ವಿಫಲವಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ (ರಿ) ಜಿಲ್ಲಾ ಕಾರ್ಯಾಧ್ಯಕ್ಷರಾದ ಮುಜಾಹಿದ್ ಮರ್ಚೆಡ್ ಆರೋಪಿಸಿದ್ದಾರೆ.

ಜಿಲ್ಲೆಯ ಸಾವಿರಾರು ರೈತರು ಸಾಲ ಮಾಡಿ ಬೀಜ, ಗೊಬ್ಬರ ಹಾಗೂ ಇತರೆ ಕೃಷಿ ಸಾಮಗ್ರಿಗಳನ್ನು ಖರೀದಿಸಿ ಬಿತ್ತನೆ ನಡೆಸಿದ್ದರು. ಆರಂಭದಲ್ಲಿ ಸುರಿದ ಅಲ್ಪ ಪ್ರಮಾಣದ ಮಳೆಯಿಂದ ಬೆಳೆಗಳು ಮೊಳಕೆಯೊಡೆದರೂ, ನಂತರ ಮಳೆಯ ಕೊರತೆಯಿಂದ ಸಸಿಗಳು ಒಣಗಿ ಹೋಗುತ್ತಿದ್ದು, ರೈತರು ಭಾರೀ



ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅನೇಕ ರೈತರು ಮರುಬಿತ್ತನೆಗೂ ಸಾಧ್ಯವಾಗದ ಸ್ಥಿತಿಯಲ್ಲಿದ್ದಾರೆ. ಈ ಪರಿಸ್ಥಿತಿ ಉಂಟಾಗುವ ಸಾಧ್ಯತೆ ಮೊದಲೇ ತಿಳಿದಿದ್ದರೂ, ಯಾವ ಬೆಳೆಗಳನ್ನು ಬೆಳೆಯಬೇಕು, ಯಾವ ಬೀಜಗಳನ್ನು ಬಳಸಬೇಕು, ಮಣ್ಣಿನ ಪರೀಕ್ಷೆ, ಗೊಬ್ಬರದ ಸಮರ್ಪಕ ಬಳಕೆ, ಕೀಟನಾಶಕಗಳ ಬಳಕೆ, ನೀರಿನ ನಿರ್ವಹಣೆ ಹಾಗೂ ಹವಾಮಾನಕ್ಕೆ ಅನುಗುಣವಾದ ಕೃಷಿ ಪದ್ಧತಿಗಳ ಕುರಿತು ರೈತರಿಗೆ ಸಮರ್ಪಕ ಜಾಗೃತಿ ಮೂಡಿಸುವಲ್ಲಿ ಕೃಷಿ ಇಲಾಖೆ ಸಂಪೂರ್ಣ ವಿಫಲವಾಗಿದೆ. ಇದರಿಂದ ಸಾವಿರಾರು ರೈತರು ನಷ್ಟ ಅನುಭವಿಸುವಂತಾಗಿದೆ.

ವಿಶೇಷವಾಗಿ ಜಂಟಿ ಕೃಷಿ ನಿರ್ದೇಶಕ ಶ್ರೀ ಪ್ರಕಾಶ ಚೌಹಾಣ ಅವರ ಬೇಜವಾಬ್ದಾರಿತನ ಹಾಗೂ ನಿರ್ಲಕ್ಷ್ಯ ಈ ಪರಿಸ್ಥಿತಿಗೆ ಪ್ರಮುಖ ಕಾರಣವಾಗಿದೆ ಎಂದು ಮುಜಾಹಿದ್ ಮರ್ಚೆಡ್ ಆರೋಪಿಸಿದ್ದಾರೆ. ಇಲಾಖೆಯ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಿದ್ದರೆ ಇಂದು ರೈತರು ಇಂತಹ ಸಂಕಷ್ಟಕ್ಕೆ ಸಿಲುಕುತ್ತಿರಲಿಲ್ಲ. ಆದ್ದರಿಂದ ಸದರಿ ಅಧಿಕಾರಿಯ ವಿರುದ್ಧ ಸರ್ಕಾರ ತಕ್ಷಣವೇ ಕ್ರಮ ಕೈಗೊಂಡು, ಅವರನ್ನು ಹುದ್ದೆಯಿಂದ ವಜಾಗೊಳಿಸಿ ಇಲಾಖೆಯ ವೈಫಲ್ಯದ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ. ಅಲ್ಲದೆ, ರಾಜ್ಯ ಸರ್ಕಾರವು ತಕ್ಷಣವೇ ರಾಯಚೂರು ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ, ಬೆಳೆ ಹಾನಿಯ ಸಮಗ್ರ ಸಮೀಕ್ಷೆ ನಡೆಸಿ ರೈತರಿಗೆ ಸೂಕ್ತ ಪರಿಹಾರ, ಇನ್‌ಪುಟ್ ಸಬ್ಸಿಡಿ, ಬೆಳೆ ಪರಿಹಾರ ಧನ, ಸಾಲ ಮರುಪಾವತಿಗೆ ಅವಧಿ ವಿಸ್ತರಣೆ, ಬಡ್ಡಿ ಮನ್ನಾ ಹಾಗೂ ಅಗತ್ಯವಿದ್ದಲ್ಲಿ ಉಚಿತ ಮರುಬಿತ್ತನೆ ಬೀಜ ಮತ್ತು ಗೊಬ್ಬರವನ್ನು ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ರೈತರ ಜೀವ ಮತ್ತು ಜೀವನೋಪಾಯವನ್ನು ರಕ್ಷಿಸುವುದು ಸರ್ಕಾರದ ಮೊದಲ ಆದ್ಯತೆಯಾಗಬೇಕು. ಸರ್ಕಾರ ಮತ್ತು ಜಿಲ್ಲಾಡಳಿತ ತಕ್ಷಣ ಕ್ರಮ ಕೈಗೊಳ್ಳದಿದ್ದರೆ ರೈತರ ಪರವಾಗಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಮುಜಾಹಿದ್ ಮರ್ಚೆಡ್ ಎಚ್ಚರಿಕೆ ನೀಡಿದ್ದಾರೆ.

# ಆತ್ಮದ ಮೂಲಕ ಪರಮಾತ್ಮನ ಜೊತೆ ಸಮರಸಾನಂದ



**ಧರ್ಮ–ಮರ್ಮ**
● ಡಾ.ಎಂ.ಮಹ್ಮದ್ ಬಾಷ ಗೂಳ್ಯಂ
ಪ್ರಧಾನ ಸಂಪಾದಕ, ಬೆಂಗಳೂರು

**ಕಳೆದ ಸಂಚಿಕೆಯಿಂದ...**


ಸೂಫಿಗಳು ತಮ್ಮ ಅನುಭಾವದ ಮೂಲಕ, ಮಂತ್ರಸಿದ್ಧಿಗಳ ಮೂಲಕ ದೈವಸಾಕ್ಷಾತ್ಕಾರಕ್ಕೆ ಸಾಧನೆ ಮೆರೆದಂತೆ ಶರಣರು ಕೂಡ ಇವರಿಗಿಂತ ಪೂರ್ವದಲ್ಲಿಯೇ ಶಿವಸ್ವರೂಪಿಗಳಾಗಿ ಸಾಧನೆ ಮಾಡಿದ್ದಾರೆ. ಸ್ವಂತ ಆತ್ಮದ ಮೂಲಕ ಪರಮಾತ್ಮನ ಜೊತೆ ಸಮರಸಾನಂದ ಪಡೆದಿದ್ದಾರೆ. ಇದಕ್ಕೆ ವಿವಿಧ ಹಂತಗಳನ್ನು ಗುರುತಿಸಿದ್ದು ಈ ಕೆಳಗೆ ವಿಶ್ಲೇಷಿಸಲಾಗಿದೆ.

**ಭಕ್ತಸ್ಥಲ:** ಶರಣ ಪರಂಪರೆಯಲ್ಲೂ ದೈವ ಸಾಕ್ಷಾತ್ಕಾರಕ್ಕಾಗಿ ಅಷ್ಟವಿಧಾರ್ಚನೆ, ಷೋಡಶೋಪಚಾರ, ಮಾಡಿದ ಪೂಜೆಯ ನೋಡುವುದು, ಶಿವತತ್ತ್ವಗೀತವನ್ನು ಹಾಡುವುದು. ಶಿವನ ಮುಂದೆ ನಲಿದಾಡುವುದು, ಭಕ್ತಿಯ ಸಂಭಾಷಣೆ, ಕೂಡಲ ಸಂಗಮ ದೇವರ ಕೂಡುವುದು. ಇದು ಭಕ್ತನ ಲಕ್ಷಣವೆನ್ನುತ್ತಾರೆ ಬಸವಣ್ಣ.

**ಮಹೇಶ್ವರಸ್ಥಲ:** ಅನೃತ, ಅನಾಚಾರ, ಅನ್ಯಹಿಂಸೆ, ಪರಧನ, ಪರಸ್ತ್ರೀ, ಪರನಿಂದೆ ಇವು ಬಿಟ್ಟು ಲಿಂಗನಿಷ್ಠೆಯಿಂದ ಶುದ್ಧಾತ್ಮನಾಗಿರಬಲ್ಲರೆ, ಮಹೇಶ್ವರ ಸ್ಥಲವಿದೆಂಬೆನಯ್ಯ ಮಹಾಲಿಂಗ ಗುರು ಶಿವ ಸಿದ್ಧೇಶ್ವರ ಪ್ರಭುವೆ ಎನ್ನುತ್ತಾರೆ ತೋಂಟದ ಸಿದ್ಧಲಿಂಗಯತಿಗಳು.

**ಪ್ರಸಾದಿ ಸ್ಥಲ:** ಶರಣ ಚೆನ್ನಬಸವನ ಪ್ರಕಾರ; ಷಡ್ಲಿಂಗೋಪಾಸನೆಯು ಭಕ್ತನ ಜೀವನದಲ್ಲಿ ರಕ್ತಗತವಾಗಿದೆ. ಅವರು ತಮ್ಮ ವಚನದಲ್ಲಿ ಪ್ರಸಾದ ಸ್ಥಲವನ್ನು ವಿವರಿಸಿದ್ದು ಹೀಗೆ: ನಾಸಿಕವಾಚರಲಿಂಗ, ಜಿಹ್ವೆಗುರು; ಕಂಗಳು (ಶಿವ) ಲಿಂಗತ್ವಕ್ಕುಜಂಗಮಲಿಂಗ, ಕರ್ಣಪ್ರಸಾದ, ಭಾವಮಹಾಲಿಂಗ; ಕೂಡಲ ಚೆನ್ನಸಂಗಯ್ಯ ನಿಮ್ಮ ಶರಣ ಇಂತು ಸರ್ವಾಂಗ ಪ್ರಸಾದಿ, ಕೂಡಲಚೆನ್ನಸಂಗಯ್ಯನೆಂಬ ಲಿಂಗನು ಷಡಿಂದ್ರಿಯಗಳಲ್ಲಿ ಷಡ್ಲಿಂಗವಾಗಿ ಭಕ್ತನಿಂದ ಸೇವಿಸಿಕೊಳ್ಳುತ್ತಿದ್ದಾನೆ. ನಾಸಿಕದಲ್ಲಿ ಆಚಾರಲಿಂಗವಾಗಿ, ಜಿಹ್ವೆಯಲ್ಲಿ ಗುರುಲಿಂಗವಾಗಿ, ನೇತ್ರದಲ್ಲಿ ಶಿವಲಿಂಗವಾಗಿ, ಕರ್ಣದಲ್ಲಿ ಪ್ರಸಾದಲಿಂಗವಾಗಿ, ಹೃದಯದಲ್ಲಿ ಮಹಾಲಿಂಗವಾಗಿ ಆಯಾ ಅಂಗದ ರೂಪರಸ, ಗಂಧಾದಿ ಗುಣಗಳನ್ನು ಭಕ್ತನು ಆಯಾ ಲಿಂಗಕ್ಕೆ ಅರ್ಪಿಸುತ್ತಿದ್ದಾನೆ. ಪ್ರಸಾದಿಯಾದವನು ಲಿಂಗಪ್ರಸಾದವನ್ನೆ ಸೇವಿಸುತ್ತಿರುವನು ಎನ್ನುವುದು ಚನ್ನಬಸವನ ಅಭಿಮತ.

**ಪ್ರಾಣಲಿಂಗಿ ಸ್ಥಲ:** ಲಿಂಗವೇ ಪ್ರಾಣ, ಪ್ರಾಣವೇ ಲಿಂಗವಾಯಿತು, ಅಂಗ ಲಿಂಗವಾಯಿತು, ಗುಹೇಶ್ವರ ಲಿಂಗದಲ್ಲಿ ಸರ್ವಾಂಗ ಪ್ರಾಣಲಿಂಗ ಸ್ವಾಯತವಾಯಿತ್ತು ಕಾಣಾ (ಚೆನ್ನಬಸವಣ್ಣ). ಪ್ರಾಣಲಿಂಗಾರ್ಚನ ನಿರತರಾದ ಅಲ್ಲಮಪ್ರಭುಗಳು, ಸಚ್ಚಿದಾನಂದ ಸರ್ವಸ್ವರೂಪವಾದ ಪ್ರಾಣಲಿಂಗದಲ್ಲಿ ಮನಸ್ಸು ಲಯಗೊಳಿಸಿ ಗುಹೇಶ್ವರ ಲಿಂಗವೇ ತಾನು, ತಾನೇ



ಗುಹೇಶ್ವರ ಲಿಂಗವಾದ ಪ್ರಾಣಲಿಂಗಸ್ಥಲದ ತಮ್ಮ ಅನುಭವವನ್ನು ಹಂಚಿಕೊಂಡಿದ್ದಾರೆ.

**ಶರಣ ಸ್ಥಲ:** ನೆನೆನೆನೆ ಎಂದಡೆ ಏನ ನೆನೆವೆನಯ್ಯ ಎನ್ನ ಕಾಯವೇ ಕೈಲಾಸವಾಯಿತು. ಮನವೇ ಲಿಂಗವಾಯಿತು. ತನುವೇ ಸೆಜ್ಜೆಯಾಗಿತ್ತು. ನೆನೆವಡೆ ದೇವನುಂಟೆ? ನೋಡುವಡೆ ಭಕ್ತನುಂಟೆ? ಗುಹೇಶ್ವರಲಿಂಗ ಲೀಯವಾಯಿತ್ತು. ಆನು, ನೀನು ಎಂಬುದು ತಾನು ಅಲ್ಲ. ತಾನರಿದ ಬಳಿಕ ಏನೂ ಇಲ್ಲ. ಇಲ್ಲದ ಇಲ್ಲವೆ ಬರ್ಪುದೋ? ಅನುವನರಿತು ತನುವ ಮರೆದು ಭಾವರಹಿತ ಗುಹೇಶ್ವರ.

**ಐಕ್ಯ ಸ್ಥಲ:** ಇದು ಷಟ್‌ಸ್ಥಲಗಳ ಅಂತಿಮ ಹಂತ. ಇದು ಶರಣನ ಸಾಧನೆಯ ಪರಾಕಾಷ್ಠೆಯಾಗಿದೆ. ಸಾಧಕನು ಇಲ್ಲಿ ತನ್ನ ಅಸ್ತಿತ್ವವನ್ನು ಶಿವನ ಜೊತೆ ಸಂಪೂರ್ಣವಾಗಿ ಐಕ್ಯಗೊಳಿಸುಕೊಳ್ಳುತ್ತಾನೆ.

ಸೂಫಿಗಳಲ್ಲೂ ಇಂತಹ ಅವಸ್ಥೆ ಇದ್ದು, ಅದನ್ನೇ 'ಹೈರತ್' ಖಿತಾಮು, ಮುಂತಾದಗಳಿಂದ ಕರೆದಿದ್ದಾರೆ. ಈ ಒಬ್ಬ ಸೂಫಿಯು ತನ್ನ ಅನುಭಾವ ಸಾಹಿತ್ಯದಲ್ಲಿ; 'ಮುರಾದೇ ಆಷಿಖ್ ಹೂಂ/ವಲೆ ಕಿಸ್ಕೋ ಕಹೂಂ/ ನ ಮುಸಲ್ಮಾನ ಹೂಂ, ನಾ ಕಾಫಿರ್ ಹೂಂ/ ಜುನುನೇ ಇಷ್ಕ್ ಮೇರಿ ಕೆ ಮುಜ್ಝೆ ಕುಛ್ನಹಿ ಖಬರ್/ ಹೈ ಓ ಲೈಕಿನ್ ದಿಲ್ ಪರ್ ಅಸರ್/ ಅಂದರೆ; ಪ್ರಿಯನಾದ ನಾನು ಪ್ರೀತಿಯಲ್ಲಿ ಸಂಗಮವಾಗಿದ್ದೇನೆ. ಯಾರಿಗೆ ಹೇಳಲಿ; ನಾನು ಮುಸಲ್ಮಾನನೂ ಅಲ್ಲ; ನಾಸ್ತಿಕನೂ ಅಲ್ಲ. ನಾನು ಕೇವಲ ಪ್ರೇಮದಲ್ಲಿ ಕಳೆದು ಹೋಗಿರುವೆ. ಆ ಪ್ರೇಮದ ಪರಿಣಾಮವೇ ಆಗಿರಬೇಕು; ನಾನೆಲ್ಲವನ್ನೂ ಮರೆತಿದ್ದೇನೆ. ಇದು ದೈವ ಪ್ರೇಮ. ಭಕ್ತ–ಭಕ್ತಿಯ ಪ್ರೇಮ. ಶರಣ ಶಿವನ ಜೊತೆ ಐಕ್ಯವಾಗುವ ಪ್ರೇಮವಲ್ಲವೆ..? ಬಯಲು ಬಯಲನೆ ಬಿತ್ತಿ ಬಯಲು ಬಯಲನೆ ಬೆಳೆದು ಬಯಲು ಬಯಲಾಗಿ ಬಯಲಾಯಿತ್ತಯ್ಯ ಬಯಲ ಜೀವನ, ಬಯಲ ಭಾವನೆ ಎನ್ನುವಂತೆ ಈ ಬಯಲಿನ ದೇಶ ಯಾವುದು, ಜನಾಂಗ ಯಾವುದು? ಜಾತಿಮತ ಪಂಥ ಪಂಗಡಗಳಾವವು? ಸಂಕುಚಿತವಾದ ಏನೆಲ್ಲ ಗೋಡೆಗಳ ಕಳಚಿ ಬಯಲಾಗಿ ಸೀಮಾತೀತರಾಗಿ ನಿಲ್ಲುತ್ತಾರೆ ಶರಣರು ಸೂಫಿ ಸಂತರು ಸಾರುವ ನಿರ್ಭಾವ ಬಯಲೇ ಶೂನ್ಯ. ಸೀಮೆ ಮೇರೆಗಳಿಲ್ಲದ ಅನಂತದೆಡೆಗೆ ಕೈಬೀಸಿ ಕರೆದಿದ್ದಾರೆ. ಶಾಂತ, ಸಹಬಾಳ್ವೆಯ, ಸರ್ವಧರ್ಮ ಸಮನ್ವಯದ ಪ್ರೇಮಸಾಗರದತ್ತ ಕರೆಯುತ್ತಾರೆ. ಆನಂದ ಸಾಗರದತ್ತ ಸ್ವಾಗತಿಸುತ್ತಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222
PRGI NO. 120927
(RNINO:KARKAN/2011/48371)